# ಜನತಾವಾಣಿ

ಸಂಪಾದಕರು :
ಎಂ.ಎಸ್. ವಿಕಾಸ್

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ದಾವಣಗೆರೆ
ಸೋಮವಾರ, ಜನವರಿ 06, 2025

ಸಂಪುಟ : 51  ಸಂಚಿಕೆ : 234  ☎ 08192-254736  91642 99999  RNI No: 27369  ಪುಟ : 6  ರೂ : 5.00  www.janathavani.com  janathavani@mac.com






ರಾಜ್ಯ ಮಟ್ಟದ ಯುವ ಜನೋತ್ಸವದ ಅಂಗವಾಗಿ ನಡೆದ ಜಾನಪದ ಕಲಾ ಮೇಳದ ಮೆರವಣಿಗೆಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಚಾಲನೆ ನೀಡಿದರು. ಬಾಪೂಜಿ ಎಂಬಿಎ ಮೈದಾನದಲ್ಲಿ ರಾಜ್ಯ ಮಟ್ಟದ ಯುವ ಜನೋತ್ಸವವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೊಂಬಾಳೆ ಬಿಡಿಸುವ ಮೂಲಕ ಉದ್ಘಾಟಿಸಿದರು. (ಬಲಚಿತ್ರ)

## ಜಾನಪದ ಮೇಳದಲ್ಲಿ ಕಣ್ಮನ ಸೆಳೆದ ಕಲಾ ತಂಡಗಳು

ದಾವಣಗೆರೆ, ಜ.5- ರಾಜ್ಯ ಮಟ್ಟದ ಯುವಜನೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಜಾನಪದ ಮೇಳದಲ್ಲಿ ಹೊರ ರಾಜ್ಯ ಸೇರಿದಂತೆ ವಿವಿಧ ಜಿಲ್ಲೆಗಳಿಂದ ವಿವಿಧ ಪ್ರಕಾರಗಳ ಕಲಾತಂಡಗಳು ಭಾಗವಹಿಸಿದ್ದವು, ಸ್ಥಳೀಯವಾಗಿ ಶಾಲಾ, ಕಾಲೇಜಿನ ವಿದ್ಯಾರ್ಥಿಗಳ ಕಲಾ ತಂಡ, ವೇಷಭೂಷಣಗಳೊಂದಿಗೆ ಭಾಗವಹಿಸಿದ್ದರು.

ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಡೊಳ್ಳು ಭಾರಿಸಿ, ಬಿಲ್ಲಿಗೆ ಬಾಣ ಹೂಡುವ ಜೊತೆಗೆ ಕುಂಭ ಹೊತ್ತು ಮೆರವಣಿಗೆಗೆ ಚಾಲನೆ ನೀಡಿದರು.

**ಡೊಳ್ಳು ಬಾರಿಸಿ, ಕುಂಭ ಹೊತ್ತು ಮೆರವಣಿಗೆಗೆ ಚಾಲನೆ ನೀಡಿದ ಸಂಸದೆ ಡಾ.ಪ್ರಭಾ**

ಕಹಳೆ ಮೊಳಗಿದ ಬೆನ್ನಲ್ಲೆ ತಮಟೆ ಹಾಗೂ ಡೊಳ್ಳಿನ ಸದ್ದು ನೃತ್ಯಕ್ಕೆ ಪ್ರೇರಣೆ ನೀಡಿದವು. ಉತ್ತರ ಕರ್ನಾಟಕದ ಜಗ್ಗಲಗೆಗೆ ತಕ್ಕಂತೆ ಲಂಬಾಣಿ ನೃತ್ಯ ಕಣ್ಮನ ಸೆಳೆಯಿತು. ಸಿಂಗಾರಗೊಂಡ ಎತ್ತಿನ ಗಾಡಿಯಲ್ಲಿ ಯಕ್ಷಗಾನ, ಭರತನಾಟ್ಯ ಕಲಾವಿದೆಯರು ಸಾಗಿದರು. ಚಂಡೆ, ಮರಗಾಲು ಕುಣಿತ, ಬೇಡರ ವೇಷ ಸೇರಿ 25 ಕ್ಕೂ ಅಧಿಕ ಕಲಾತಂಡದ ಮೆರವಣಿಗೆ ಸಾಗಿದವು.

ಹರಿಹರದ ಹಗಲುವೇಷ ತಂಡ, ಕೇರಳದ ತೆಯ್ಯಂ, ಭೋಜರಾಜ ಕುಣಿತ, ಕರಡಿ ಕುಣಿತ, ಕಥಕ್ಕಳಿ, ಪಂಜಾಬಿನ ಭಾಂಗ್ರಾ, ಮಹಾರಾಷ್ಟ್ರದ ಲಾವಣಿ, ಒಡಿಶಾದ ಸಂಬಲ್‌ಪುರಿ, ಮಧ್ಯಪ್ರದೇಶದ ಬರೇಡಿ ನೃತ್ಯ, ಮರಗಾಲು ಕುಣಿತ, ಕಲಾತಂಡಗಳು ಮೆರವಣಿಗೆಯ ಪ್ರಮುಖ ಆಕರ್ಷಣೆ ಆಗಿದ್ದವು. ಸಾಂಸ್ಕೃತಿಕ ವೈವಿಧ್ಯತೆ ಮೆರವಣಿಗೆಯಲ್ಲಿ ಮನ (4ನೇ ಪುಟಕ್ಕೆ)



# ಸಂವಿಧಾನದ ಉಳಿವು, ರಕ್ಷಣೆ ನಮ್ಮೆಲ್ಲರ ಕರ್ತವ್ಯ

## ಯುವ ಜನತೆ ದೇಶಕ್ಕೆ ಸಂಪತ್ತಾಗಬೇಕು, ಹೊರೆಯಾಗಬಾರದು: ಸಿಎಂ ಸಿದ್ದರಾಮಯ್ಯ

ದಾವಣಗೆರೆ, ಜ.5- ಯುವ ಜನತೆ ದೇಶಕ್ಕೆ ಸಂಪತ್ತಾಗಬೇಕೇ ಹೊರತು, ದೇಶಕ್ಕೆ ಹೊರೆಯಾಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಯುವ ಜನತೆಗೆ ಕರೆ ನೀಡಿದರು.

ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ಬಾಪೂಜಿ ಎಂಬಿಎ ಮೈದಾನದಲ್ಲಿ ಆಯೋಜಿಸಲಾಗಿದ ರಾಜ್ಯ ಮಟ್ಟದ ಯುವ ಜನೋತ್ಸವವನ್ನು ನಗಾರಿ ಭಾರಿಸಿ ಹಾಗೂ ಹೊಂಬಾಳೆ ಬಿಡಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ದೇಶ ನನಗೇನು ಕೊಟ್ಟಿದೆ ಎಂಬುದಕ್ಕಿಂತ ದೇಶಕ್ಕಾಗಿ ನಾನು ಏನು ಮಾಡಿತ್ತಿದ್ದೇನೆ ಎಂದು ಯುವಕರು ಅರಿತುಕೊಳ್ಳಬೇಕು. ಯುವಜನರು ದೇಶವನ್ನು ಮುಂದೆ ಕೊಂಡೊಯ್ಯಲು ಹಾಗೂ ಬದಲಾವಣೆ ತರುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಸ್ವಾಮಿ ವಿವೇಕಾನಂದರು 'ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ' ಎಂದು ಯುವ ಜನರಿಗೆ ಕರೆ ನೀಡಿದರು. ಯುವಕರಿಗೆ ಜೀವನದಲ್ಲಿ ಗುರಿ ಇರಬೇಕು. ಇದನ್ನು ಸಾಧಿಸಲು ಪರಿಶ್ರಮ ಪಡಬೇಕು. ಆಗ ಮಾತ್ರ ಗುರಿ ಸಾಧನೆ ಮಾಡಲು ಸಾಧ್ಯ ಎಂದು ಹೇಳಿದರು.

ಅನೇಕ ಶಕ್ತಿಗಳು ಧರ್ಮ ಹಾಗೂ ಜಾತಿ ಹೆಸರಿನಲ್ಲಿ ಶಾಂತಿಗೆ ಭಂಗ ತರುವ ಕೆಲಸ ಮಾಡುತ್ತಿವೆ. ಯಾವ ಧರ್ಮಕ್ಕೂ ವಿಶೇಷ ಸ್ಥಾನಮಾನ ಇಲ್ಲ, ಎಲ್ಲರಿಗೂ ಸಂವಿಧಾನ ಒಂದೇ, ಆದ್ದರಿಂದ ಸಂವಿಧಾನ ರಕ್ಷಿಸುವ ಕೆಲಸವನ್ನು ಯುವಕರು ಮಾಡಬೇಕಾಗಿದೆ ಎಂದು ಸಿದ್ದರಾಮಯ್ಯ ಕರೆ ನೀಡಿದರು.

**ದೇಶದಲ್ಲಿ ಶೇ.35 ರಷ್ಟು ಯುವ ಜನರಿದ್ದಾರೆ, ಯುವಜನರೇ ನಮ್ಮ ದೇಶದ ಆಸ್ತಿ. ಪ್ರತಿಯೊಬ್ಬ ಯುವಕ, ಯುವತಿ ಸಮಾಜಮುಖಿ ಮನೋಭಾವ ಬೆಳೆಸಿಕೊಳ್ಳಬೇಕು. ವಿವಿಧ ಧರ್ಮ, ಸಂಸ್ಕೃತಿ ಇವರುವುದರಿಂದ ವಿದ್ಯಾರ್ಥಿಗಳಿಗೆ ವೈಚಾರಿಕ ಹಾಗೂ ವೈಜ್ಞಾನಿಕ ಶಿಕ್ಷಣ ಅತ್ಯಗತ್ಯವಾಗಿದೆ .**

**- ಸಿದ್ಧರಾಮಯ್ಯ, ಮುಖ್ಯಮಂತ್ರಿ**

### ಸಿರಿಧಾನ್ಯ ರಂಗೋಲಿ

**ಯುವ ಜನೋತ್ಸವ ಮುಖ್ಯ ವೇದಿಕೆ ಮುಂಭಾಗ ಕೃಷಿ ಇಲಾಖೆಯಿಂದ ರಚಿಸಿದ ಸಿರಿಧಾನ್ಯದ ರಂಗೋಲಿ ಗಮನ ಸೆಳೆಯಿತು. ಸಮಾರಂಭವನ್ನು ಮುಖ್ಯಮಂತ್ರಿಗಳು ನಗಾರಿ ಭಾರಿಸಿ ಹಾಗೂ ಹೊಂಬಾಳೆ ಬಿಡಿಸುವ ಮೂಲಕ ಉದ್ಘಾಟಿಸಿದ್ದು ವಿಶೇಷವಾಗಿತ್ತು. ಮುಖ್ಯಮಂತ್ರಿಗಳು 12.50ಕ್ಕೆ ಹೆಲಿಪ್ಯಾಡ್‌ಗೆ ಆಗಮಿಸಿದರು. 1.18ಕ್ಕೆ ಸರಿಯಾಗಿ ವೇದಿಕೆಗೆ ಆಗಮಿಸಿದರು. ಈ ವೇಳೆ 'ಟಗರು ಬಂತು ಟಗರು' ಹಾಡಿಗೆ ಸಭಿಕರು ಕೇಕೆ ಹಾಕಿದರು.**

ಬಾಬಾ ಸಾಹೇಬ್ ಅಂಬೇಡ್ಕರ್ ಕೊಟ್ಟ ಸಂವಿಧಾನದಿಂದ ಇಂದು ಎಲ್ಲರೂ ಶಿಕ್ಷಣ ಪಡೆದು ಉದ್ಯೋಗ ಗಳಿಸಿ, ಗೌರವ ಮತ್ತು ಸಮಾನತೆ ಯಿಂದ ಬಾಳಲು ಸಾಧ್ಯವಾಗಿದೆ. ಸಂವಿಧಾನ ಇದ್ದುದರಿಂದಲೇ ನಾನು (4ನೇ ಪುಟಕ್ಕೆ)

### ಸಾಮಾಜಿಕ ಜಾಲತಾಣ ಸುದ್ದಿಗಳ ಬಗ್ಗೆ ಎಚ್ಚರ: ಎಸ್ಸೆಸ್ಸೆಂ



ದಾವಣಗೆರೆ, ಜ.5- ಕೆಲ ದುಷ್ಟ ಶಕ್ತಿಗಳು ಸಾಮಾಜಿಕ ಜಾಲತಾಣದ ಮೂಲಕ ದೇಶದ ಯುವ ಜನತೆಯನ್ನು ದಾರಿ ತಪ್ಪಿಸುತ್ತಿದ್ದಾರೆ. ಯುವ ಜನತೆ ಸಾಮಾಜಿಕ ಜಾಲತಾಣಗಳಲ್ಲಿ ಬರುವ ಸುದ್ದಿಗಳ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತ ನಾಡಿದ ಅವರು, ದ್ವೇಷ ಬಿತ್ತುವ ವಿಚಾರಗಳು ಹಾಗೂ ಸಮೂಹ ಸನ್ನಿಯಿಂದ ದೂರವಿರಬೇಕು. ದೇಶದ ಬಹುತ್ವ ಅರ್ಥೈಸಿಕೊಳ್ಳಬೇಕು ಎಂದು ಯುವಕರಿಗೆ ಸಲಹೆ ನೀಡಿದರು.

ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವನಾಗಿದ್ದಾಗ ದಾವಣಗೆರೆಯಲ್ಲಿ ಪ್ರಥಮವಾಗಿ ಯುವಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. 2 ದಶಕಗಳ ತರುವಾಯ ಮತ್ತೊಮ್ಮೆ ರಾಜ್ಯಮಟ್ಟದ ಯುವಜನೋತ್ಸವ ಆಯೋಜಿಸಿರುವುದು ಸಂತಸ ತಂದಿದೆ.

ಕ್ರೀಡಾ ಸಚಿವನಾಗಿದ್ದಾಗ ದಾವಣಗೆರೆಯಲ್ಲಿ ಅಂತರರಾಷ್ಟ್ರೀಯ ಮಟ್ಟದ ಈಜುಕೊಳ, ಟೆನ್ನಿಸ್, ಬಾಸ್ಕೆಟ್‌ಬಾಲ್ ಕ್ರೀಡಾಂಗಣಗಳನ್ನು ನಿರ್ಮಿಸಿದ್ದೆ. ಸದ್ಯ ರಾಜ್ಯ ಸರ್ಕಾರದಿಂದ ಹಾಗೂ ಸಂಸದ ನೆರವಿನಿಂದ ಕ್ರೀಡಾ ಸಂಕೀರ್ಣ ನಿರ್ಮಿಸಲಾಗುತ್ತಿದೆ. ಜೆ.ಹೆಚ್. ಪಟೇಲ್ ನಗರದಲ್ಲಿ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಅಂತಿಮ ಹಂತದಲ್ಲಿದೆ. ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ 5802 ಯುವಜನರಿಗೆ 8.5 ರೂ. ಕೋಟಿ ನಿರುದ್ಯೋಗ ಭತ್ಯೆ ನೀಡಲಾಗಿದೆ. ದಾವಣಗೆರೆ ನಗರದಲ್ಲಿ ವಿಶ್ವ ಕನ್ನಡ ಸಮ್ಮೇಳನ ಆಯೋಜಿಸುವಂತೆ ಕಸಾಪ (4ನೇ ಪುಟಕ್ಕೆ)

### ವೆಜ್ ಬೇಡ, ನಾನ್‌ವೆಜ್ ಕೊಡಿ

ಸ್ಪರ್ಧಿಗಳು ನೋಂದಣಿಗೆ ಆಗಮಿಸಿದಾಗ ಎರಡು ದಿನಗಳ ಉಪಹಾರ, ಊಟಕ್ಕೆ ಕೂಪನ್ ನೀಡಲಾಗುತ್ತಿತ್ತು. ಭಾನುವಾರ ರಾತ್ರಿ ಮಾಂಸಹಾರ ಪ್ರಿಯರಿಗೆ ಮಾಂಸಹಾರ ಊಟದ ವ್ಯವಸ್ಥೆ ಕಲ್ಪಿಸಲಾಗಿತ್ತು. ವೆಜ್ ಹಾಗೂ ನಾನ್‌ವೆಜ್ ಊಟಕ್ಕೆ ಪ್ರತ್ಯೇಕ ಕೂಪನ್ ನೀಡುವ ವ್ಯವಸ್ಥೆ ಇತ್ತು. ಬಂದಿದ್ದ ಸ್ಪರ್ಧಿಗಳು ಹೆಚ್ಚಿನದಾಗಿ ನಾನ್‌ವೆಜ್ ಊಟದ ಕೂಪನ್ ಕೊಡಿ ಎಂದು ಕೇಳುತ್ತಿದ್ದರು. ನಾನ್ ವೆಜ್ ಇರುವುದು ತಿಳಿಯದೇ ವೆಜ್ ಕೂಪನ್ ಪಡೆದಿದ್ದ ಉಡುಪಿಯಿಂದ ಬಂದ ಹುಡುಗಿಯರು, ಕೆಲಸ ಸಮಯದ ಬಳಿಕ ವಾಪಸ್ ಬಂದು ನಾನ್‌ವೆಜ್ ಕೂಪನ್ ಕೊಡಿ ಎಂದು ಕೇಳಿ ಪಡೆದರು. ಶನಿವಾರ ಸಂಜೆಯಿಂದಲೇ ನೋಂದಣಿ ಕಾರ್ಯ ಆರಂಭವಾಗಿತ್ತು. ಹೊರ ಜಿಲ್ಲೆಗಳಿಂದ ಬರುವವರ ಅನುಕೂಲಕ್ಕಾಗಿ ಭಾನುವಾರ ಬೆಳಿಗ್ಗೆ 5 ಗಂಟೆಯಿಂದಲೇ ನೋಂದಣಿ ಆರಂಭಿಸಲಾಗಿತ್ತು.

### ಊಟಕ್ಕಾಗಿ ಗಲಾಟೆ

ಸ್ಪರ್ಧೆಗಳಿಗೆ ನೋಂದಣಿ ಮಾಡಿಕೊಂಡವರಿಗೆ ಉಪಹಾರ ಹಾಗೂ ಊಟಕ್ಕೆ ಟೋಕನ್ ನೀಡಲಾಗಿತ್ತು. ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ ಊಟಕ್ಕೆ ವ್ಯವಸ್ಥೆ ಮಾಡಲಾಗಿತ್ತು. 10 ಗಂಟೆ ನಂತರ ಬಂದವರಿಗೆ ಬೆಳಿಗ್ಗೆಯ ಉಪಹಾರ ಖಾಲಿಯಾಗಿದೆ ಎಂಬ ಉತ್ತರ ನೀಡಲಾಗುತ್ತಿತ್ತು. ಅನೇಕರು ಹೊರಗಡೆ ಉಪಹಾರ ಸೇವಿಸಿದರು. ಮಧ್ಯಾಹ್ನ 1 ಗಂಟೆ ಹೊತ್ತಿಗೆ ಊಟಕ್ಕಾಗಿ ಕಾದು ಕುಳಿತರು. 2 ಗಂಟೆಯಾದರೂ ಊಟ ಬಡಿಸಲಿಲ್ಲ. ಈ ವೇಳೆ ಹಲವರು ತಡವಾಗಿದೆ ಊಟ ಕೊಡಿ ಎಂದು ಗಲಾಟೆ ಎಬ್ಬಿಸಿದರು. ನಂತರ ಊಟ ಬಡಿಸಲಾಯಿತು.

# ಕಾಂತರಾಜ್ ವರದಿ ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ

## ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ



ದಾವಣಗೆರೆ, ಜ. 5- ನಾನು ಜಾತಿ ಜನಗಣತಿ ಪರವಾಗಿದ್ದು, ಕಾಂತರಾಜ್ ವರದಿಯನ್ನು ಮುಂದಿನ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ, ಅನುಷ್ಠಾನಕ್ಕೆ ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ನಗರದ ಬಾಲಕರ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಆಯೋಜಿಸಿದ್ದ ದಾವಣಗೆರೆ ಜಿಲ್ಲಾ ಕುರುಬ ಸಮಾಜ ಹಾಗೂ ಸಿದ್ಧರಾಮಯ್ಯ ಅವರ ಅಭಿಮಾನಿಗಳ ಬಳಗದ ವತಿಯಿಂದ ಜಿಲ್ಲಾ ಮಟ್ಟದ 537 ನೇ ದಾಸಶ್ರೇಷ್ಠ ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನಕದಾಸರು ಯಾವುದೇ ಒಂದು ಜಾತಿಗೆ ಸೀಮಿತವಾಗಿ ಇದ್ದಂತವರಲ್ಲ.ಆಕಸ್ಮಿಕವಾಗಿ ಕುರುಬ ಜಾತಿಯಲ್ಲಿ ಹುಟ್ಟಿದರು. ಆದರೆ ಅವರು ಸಂತನಾದ ಮೇಲೆ ಜಾತಿ, ಧರ್ಮ, ಭಾಷೆ, ಪ್ರದೇಶ ಎಲ್ಲವನ್ನೂ ಮೀರಿ ಸಮಾಜದಲ್ಲಿ ಮಾನವ ಕಲ್ಯಾಣಕ್ಕಾಗಿ ದುಡಿದಂತವರು. ಅವರೊಬ್ಬ ಸಂತರು, ಕವಿ, ಬರಹಗಾರರು, ದಾರ್ಶನಿಕರಾಗಿದ್ದಂತವರು, ಸಮಾಜ ಸುಧಾರಕರಾಗಿದ್ದಂತವರು, ದಾಸಶ್ರೇಷ್ಠರಾಗಿದ್ದಂತವರು ಎಂದರು.

ಕನ್ನಡ ಸಾಹಿತ್ಯದಲ್ಲಿ ಎರಡು ಮೈಲಿಗಲ್ಲುಗಳನ್ನು ನೋಡಲಿಕ್ಕೆ ಸಾಧ್ಯವಿದೆ. ಒಂದು ಶರಣ ಸಾಹಿತ್ಯ ಮತ್ತು ಇನ್ನೊಂದು ದಾಸ ಸಾಹಿತ್ಯ. ಶರಣ ಸಾಹಿತ್ಯದಲ್ಲಿ ಬಹಳ ಪ್ರಮುಖವಾಗಿದ್ದವರು ಬಸವಣ್ಣನವರು, ದಾಸ ಸಾಹಿತ್ಯದಲ್ಲಿ ಶ್ರೇಷ್ಠರಾಗಿದ್ದವರು ಕನಕದಾಸರು. ಎಲ್ಲಾ ಸಂತರು, ಶರಣರು ಮನುಕುಲದ ಉದ್ಧಾರ, ಮಾನವನ ವಿಕಾಸಕ್ಕೆ, ಮಾನವ ಸಮಾಜ ನಿರ್ಮಾಣಕ್ಕೆ ಪ್ರಯತ್ನ ಮಾಡಿದವರು. ನಮ್ಮಲ್ಲಿ ಭಾಷೆ, ಜಾತಿ, ಸಂಸ್ಕೃತಿ, ಪ್ರಾಂತ್ಯ ತಾರತಮ್ಯವಿದೆ. ಇದನ್ನು ಹೋಗಲಾಡಿಸಲು ಬುದ್ಧ, ಬಸವ, ಅಂಬೇಡ್ಕರ್, ನಾರಾಯಣಗುರು, ಮೊಹಮದ್ ಪೈಗಂಬರ್, ಗಾಂಧೀಜಿ ಸೇರಿದಂತೆ ಎಲ್ಲಾ ಸಂತರು, ಶರಣರು ಸಮ ಸಮಾಜ ನಿರ್ಮಾಣದ ಆಶಯ ಹೊಂದಿದ್ದರು ಎಂದು ಹೇಳಿದರು.

ಅಂಬೇಡ್ಕರ್, ನಾರಾಯಣ ಗುರು, ಕನಕದಾಸರು ಕೂಡ ಜಾತಿ ವ್ಯವಸ್ಥೆ, ವರ್ಣ ವ್ಯವಸ್ಥೆಯ ಕಾರಣಕ್ಕಾಗಿ ಅವಮಾನಿತ ರಾಗಿದ್ದರು. ಯಾರೂ ಕೂಡ ಹುಟ್ಟಿನಿಂದ ದಡ್ಡರಾಗಿರಲು ಸಾಧ್ಯವಿಲ್ಲ. ವ್ಯಾಸರು ಮಹಾಭಾರತವನ್ನು, ವಾಲ್ಮೀಕಿ ರಾಮಾ ಯಣವನ್ನು, ಕಾಳಿದಾಸ ಶಾಕುಂತಲೆ ನಾಟಕವನ್ನು ಬರೆದಿದ್ದೇ ಹುಟ್ಟಿನಿಂದ ಯಾರೂ ದಡ್ಡರಲ್ಲ ಎನ್ನುವುದಕ್ಕೆ ನಿದರ್ಶನವಾಗಿದೆ ಎಂದರು.

ಅಂಬೇಡ್ಕರ್ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ್ದರಿಂದಲೇ ನರೇಂದ್ರ ಮೋದಿ ಪ್ರಧಾನಿಯಾಗಲು, ನಾನು ಮುಖ್ಯಮಂತ್ರಿಯಾಗಲು ಸಾಧ್ಯವಾಯಿತು. ಬಡವರು, ಶೋಷಿತರು, ದಲಿತರು ತಮ್ಮ ಹಕ್ಕುಗಳನ್ನು ಪಡೆಯಲು ಸಾಧ್ಯವಾಗಿದೆ ಎಂದು ಹೇಳಿದರು.

ಒಬ್ಬರಿಗೆ ಒಂದೇ ಮತ. ಎಲ್ಲಾ ಜಾತಿ, ಧರ್ಮ, ಅಂತಸ್ತಿನವರಿಗೂ ಒಂದೇ ಮತ. ಈ ಸಮಾನತೆ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಬರಬೇಕಾಗಿದೆ. ಆಗ ಮಾತ್ರ ಸಮಾನತೆಯತ್ತ ಮುನ್ನಡೆಯಲು ಸಾಧ್ಯ ಎಂದರು.

ಶೋಷಿತ ಸಮುದಾಯಗಳು ಜಾತಿ ಸಮ್ಮೇಳನಗಳನ್ನು ಮಾಡುವುದು ತಪ್ಪಲ್ಲ. ಆದರೆ ಮುಂದುವರೆದ ಜಾತಿಗಳು ಜಾತಿ ಹೆಸರಿನಲ್ಲಿ ಸಮ್ಮೇಳನ ನಡೆಸುವುದು ಸಾಮಾಜಿಕವಾಗಿ ತಪ್ಪಾಗುತ್ತದೆ. ಸಂಘಟನೆ ಮತ್ತು ಒಗ್ಗಟ್ಟು ಇಲ್ಲದಿದ್ದರೆ ಶೋಷಿತ ವರ್ಗಕ್ಕೆ ಶಕ್ತಿ ಬರುವುದಿಲ್ಲ ಎಂದು ಹೇಳಿದರು.

ಹಿರಿಯ ನ್ಯಾಯವಾದಿ ಹೆಚ್.ಕಾಂತರಾಜ್ ಮಾತನಾಡಿ, ಎಲ್ಲಾ ಜಾತಿ, ಧರ್ಮ ಅಥವಾ ಗಂಡು-ಹೆಣ್ಣು ಸಮಾನರು ಎಂಬ ಸಂವಿಧಾನದ ಪರಿಕಲ್ಪನೆಯನ್ನು ಅಂದೇ ಕನಕದಾಸರು ಪ್ರತಿಪಾದಿಸಿದ್ದರು ಎಂದು ಹೇಳಿದರು. (2ನೇ ಪುಟಕ್ಕೆ)

### ಭಿನ್ನಾಭಿಪ್ರಾಯ ಮರೆತು ಒಗ್ಗಟ್ಟಾಗಿ

**ದಾವಣಗೆರೆಯಲ್ಲಿ ನಡೆಯುತ್ತಿರುವ ಕನಕ ಜಯಂತಿ ಕಾರ್ಯಕ್ರಮ ಜಿಲ್ಲಾ ಮಟ್ಟದ್ದಾಗಿದೆ. ಆದರೆ ಇನ್ನೂ ಚನ್ನಾಗಿ ಕಾರ್ಯಕ್ರಮ ರೂಪಿತವಾಗಬೇಕಿತ್ತು. ಜಿಲ್ಲೆಯಲ್ಲಿ ಹೆಚ್ಚು ಜನ ಸೇರಬೇಕಾಗಿತ್ತು. ಸೇರದಿದ್ದರೆ ಶಕ್ತಿ, ಒಗ್ಗಟ್ಟು ಇಲ್ಲ ಎಂಬುದು ಗೊತ್ತಾಗುತ್ತದೆ. ಏನೇ ಭಿನ್ನಾಭಿಪ್ರಾಯವಿದ್ದರೂ ಅವೆಲ್ಲವನ್ನು ಮರೆತು ಒಟ್ಟಾಗಿ ಸೇರಿ ಕನಕ ಜಯಂತಿ ಆಚರಿಸಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.**


# ಕನ್ನಿಕಾ ಪರಮೇಶ್ವರಿ ಬ್ಯಾಂಕ್ ಚುನಾವಣೆ ಪ್ರಭಾಕರ್, ಆರ್‌ಜಿಎಸ್ ಗುಂಪಿಗೆ ಜಯ

ದಾವಣಗೆರೆ, ಜ.5- ನಗರದ ಪ್ರತಿಷ್ಟಿತ ಸಹಕಾರಿ ಬ್ಯಾಂಕುಗಳಲ್ಲೊಂದಾದ ಶ್ರೀ ಕನ್ನಿಕಾಪರಮೇಶ್ವರಿ ಕೋ-ಆಪರೇಟಿವ್ ಬ್ಯಾಂಕಿನ ಚುನಾವಣೆಯಲ್ಲಿ ಬ್ಯಾಂಕಿನ ಹಿರಿಯ ನಿರ್ದೇಶಕರುಗಳಾಗಿದ್ದ ಆರ್.ಎಲ್.ಪ್ರಭಾಕರ್ ಮತ್ತು ಆರ್.ಜಿ.ಶ್ರೀನಿವಾಸ ಮೂರ್ತಿ ಅವರುಗಳ ನೇತೃತ್ವದ ಗುಂಪಿಗೆ ಭರ್ಜರಿ ಜಯ ಲಭಿಸಿದೆ.

ಆರ್.ಎಲ್. ಪ್ರಭಾಕರ್ ಮತ್ತು ಆರ್.ಜಿ.ಶ್ರೀನಿವಾಸ ಮೂರ್ತಿ ಅವರುಗಳಲ್ಲದೇ, ಅವರ ತಂಡದ ಎಲ್ಲಾ 13 ಜನರೂ ಅತ್ಯಧಿತ ಮತಗಳನ್ನು ಗಳಿಸಿ, ಜಯ ಗಳಿಸಿದ್ದು, ಅವರ ಪ್ರತಿಸ್ಪರ್ಧಿಗಳಾಗಿದ್ದ ಐವರು ಪರಾಭವಗೊಂಡಿದ್ದಾರೆ.

ಬ್ಯಾಂಕಿನ ಆಡಳಿತ ಮಂಡಳಿಯ ಒಟ್ಟು 13 ಸ್ಥಾನ ಗಳಿಗೆ ಮುಂಬರುವ ಐದು ವರ್ಷಗಳ ಅವಧಿಗೆ ನಗರದ ಎಜಿಪಿ ಕಾಲೇಜಿನ ಆವರಣದಲ್ಲಿ ಇಂದು ಏರ್ಪಾಡಾಗಿದ್ದ ಚುನಾವಣೆಯಲ್ಲಿ ಪ್ರಭಾಕರ್ ಮತ್ತು ಆರ್.ಜಿ.ಎಸ್. ಅವರುಗಳೂ ಸೇರಿದಂತೆ, ಅವರ ಗುಂಪಿನ ಎಲ್ಲಾ 13 ಜನರೂ ಮತ್ತೊಂದು ಅವಧಿಗೆ ಪುನರಾಯ್ಕೆಯಾಗಿದ್ದಾರೆ.






13 ಸ್ಥಾನಗಳ ಪೈಕಿ 11 ಸ್ಥಾನಗಳ ಸಾಮಾನ್ಯ ಕ್ಷೇತ್ರದಿಂದ ಜಯ ಗಳಿಸಿರುವ ಬ್ಯಾಂಕಿನ ಅತ್ಯಂತ ಹಿರಿಯ ನಿರ್ದೇಶಕ ಆರ್.ಎಲ್. ಪ್ರಭಾಕರ್ ಅವರು ಇತರರಿಗಿಂತ ಅತೀ ಹೆಚ್ಚು ಮತ ಗಳಿಕೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಆರ್.ಎಲ್. ಪ್ರಭಾಕರ್ (889), ಕೆ.ಎನ್. ಅನಂತರಾಮ ಶೆಟ್ಟಿ (878), ಬಿ.ಪಿ. ನಾಗಭೂಷಣ್ (856), ಕಾಸಲ್ ಎಸ್. ಸತೀಶ್ (2ನೇ ಪುಟಕ್ಕೆ)

# ಸಾಣೇಹಳ್ಳಿಯ ಪಂಡಿತಾರಾಧ್ಯ ಶ್ರೀಗಳಿಗೆ ಕಾಯಕಯೋಗಿ ಶ್ರೀ ಸಿದ್ಧರಾಮೇಶ್ವರ ಪ್ರಶಸ್ತಿ



ಬೆಂಗಳೂರು, ಜ. 5 - ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸುವ ಕಾಯಕಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಸಂದರ್ಭದಲ್ಲಿ ನೀಡಲಾಗುವ ಕಾಯಕಯೋಗಿ 'ಶ್ರೀ ಸಿದ್ಧರಾಮೇಶ್ವರ ಪ್ರಶಸ್ತಿ'ಗೆ ಪ್ರಸಕ್ತ ವರ್ಷ ಸಾಣೇಹಳ್ಳಿಯ ಶ್ರೀ ತರಳಬಾಳು ಜಗದ್ಗುರು ಶಾಖಾಮಠದ ಪಟ್ಟಾಧ್ಯಕ್ಷರಾದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಆಯ್ಕೆಯಾಗಿದ್ದಾರೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಪ್ರಕಟಿಸಿದ್ದಾರೆ.

ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ತಮ್ಮ ಪರಿಶ್ರಮ, ಜನಪರ ಕಾಳಜಿ, ವೈಚಾರಿಕತೆ, ರಂಗಾಸಕ್ತಿ ಹಾಗೂ ಸಾಹಿತ್ಯ ಕೃಷಿ ಮತ್ತು ಸಾಂಸ್ಕೃತಿಕ ಒಲವುಗಳ ಮೂಲಕ ಜನಮಾನಸದಲ್ಲಿ ಮನೆ ಮಾಡಿದ್ದಾರೆ. ಅವರು ಜೀವನಾದರ್ಶಗಳನ್ನು ಪರಿಗಣಿಸಿ, ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಡಾ. ಮಲ್ಲಿಕಾ ಘಂಟಿ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಆಯ್ಕೆ ಸಮಿತಿಯು ಈ ಆಯ್ಕೆ ಮಾಡಿದೆ.

ಪ್ರಶಸ್ತಿಯು 5 ಲಕ್ಷ ರೂ. ನಗದು, ಸ್ಮರಣಿಕೆ ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ. ಇದೇ ದಿನಾಂಕ 14 ರಂದು ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ 'ಸಿದ್ಧರಾಮೇಶ್ವರ ಜಯಂತಿ'ಯ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡುವರು.

# ಗುರುಗಳ ಸ್ಥಾನಕ್ಕೆ ಶಿಷ್ಯನೂ ಆಯ್ಕೆ ಆದದ್ದು ಸಂತಸ ತಂದಿದೆ

## ಜಗಳೂರಿನಲ್ಲಿನ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರ ಸನ್ಮಾನ ಸಮಾರಂಭದಲ್ಲಿ ಪ್ರೊ. ಸಿ.ವಿ ಪಾಟೀಲ್



ಹರಿಹರ, ಜ.5- ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಇತಿಹಾಸದಲ್ಲೇ, ಗುರುಗಳು ಅಧ್ಯಕ್ಷರಾಗಿದ್ದ ಸ್ಥಾನಕ್ಕೆ ಅವರ ಶಿಷ್ಯ ಕೂಡ ಆಯ್ಕೆಯಾಗಿರುವುದು ಅತೀವ ಸಂತಸವನ್ನು ನೀಡಿದೆ ಎಂದು 13ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದ ಹಿರಿಯ ಸಾಹಿತಿ ನಿವೃತ್ತ ಪ್ರೊ. ಸಿ.ವಿ ಪಾಟೀಲ್ ಹೇಳಿದರು.

ಜಗಳೂರು ನಗರದಲ್ಲಿ ಇದೇ ದಿನಾಂಕ 11-12 ರಂದು ನಡೆಯುವ 14ನೇ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಡಾ.ಎ.ಬಿ. ರಾಮಚಂದ್ರಪ್ಪನವರಿಗೆ ನಗರದ ಪ್ರವಾಸಿ ಮಂದಿರದಲ್ಲಿ, ಸಾಹಿತ್ಯ ಅಭಿಮಾನಿಗಳ ಬಳಗದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ನಾಡಿನಾದ್ಯಂತ ಮತ್ತು ಜಿಲ್ಲೆಯ ಹಲವಾರು ಕಡೆಗಳಲ್ಲಿ ಸಾಹಿತ್ಯ ಸಮ್ಮೇಳನಗಳು ಸಾಕಷ್ಟು ನಡೆದಿವೆ. ಆದರೆ ಹರಿಹರ ನಗರದಲ್ಲಿ ನಡೆದ 13 ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಮತ್ತು ಜಗಳೂರು ನಗರದಲ್ಲಿ ನಡೆಯುತ್ತಿರುವ ಸಮ್ಮೇಳನದಲ್ಲಿ ಒಂದು ರೀತಿಯ ವೈಶಿಷ್ಟ್ಯತೆಯನ್ನು ಹೊಂದಿದೆ. ಕಾರಣ ಎ.ಬಿ. ರಾಮಚಂದ್ರಪ್ಪನವರು ನನ್ನ ವಿದ್ಯಾರ್ಥಿ ಹಾಗೂ ವೃತ್ತಿಯಲ್ಲಿ ಜೊತೆಗೆ ಪ್ರಾಧ್ಯಾಪಕ ಕೆಲಸವನ್ನು ಮಾಡಿದ್ದವರು. ಇಂತಹ ವ್ಯಕ್ತಿಗೆ ನಾನು ಕನ್ನಡ ಧ್ವಜವನ್ನು ಹಸ್ತಾಂತರ ಮಾಡುವ ಸೌಭಾಗ್ಯ ಸಿಕ್ಕಿರುವುದು ಅತೀವ ಸಂತಸವನ್ನು ತರಿಸಿದೆ. ಇಂತಹ ಸೌಭಾಗ್ಯ ನಾಡಿನಾದ್ಯಂತ ಯಾರಿಗೂ ಸಿಕ್ಕಿರುವುದಿಲ್ಲ ಎಂದು ಹೇಳಿದರು.

ಸಾಹಿತ್ಯ ಕ್ಷೇತ್ರ ಸೇರಿದಂತೆ ತಮಗೆ ಇಷ್ಟವಾದ ರೀತಿಯಲ್ಲಿ ಹೋರಾಟದ ಮೂಲಕ ಸಮಾಜದ ಅಂಕು ಡೊಂಕುಗಳನ್ನು ತಿದ್ದುವಂತಹ ಕೆಲಸವನ್ನು ಮಾಡಿರುವ ಎ.ಬಿ. ರಾಮಚಂದ್ರಪ್ಪನವರು ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಸಂತಸದ ವಿಚಾರ ಎಂದು ಮಾಜಿ ನಗರಸಭೆ ಅಧ್ಯಕ್ಷ ಬಿ. ರೇವಣಸಿದ್ದಪ್ಪ ಹೇಳಿದರು.

ಸಮ್ಮೇಳನದ ಸರ್ವಾಧ್ಯಕ್ಷ ಎ.ಬಿ. ರಾಮಚಂದ್ರಪ್ಪ ಮಾತನಾಡಿ, ನಾನು ತಳಮಟ್ಟದಿಂದ ಇಂತಹ ದೊಡ್ಡ ಸ್ಥಾನವನ್ನು ಅಲಂಕರಿಸುವ ಮಟ್ಟದಲ್ಲಿ ಸಾಗಿ ಬರುವುದಕ್ಕೆ, ಎಲ್ಲರ ಸಹಕಾರ ಬಹಳಷ್ಟಿದೆ. ಎಲ್ಲಾ ಹಂತಗಳಲ್ಲಿ ನಾನು ಕೂಡ ಸಾಕಷ್ಟು ಏಳು ಬೀಳುಗಳನ್ನು ಕಂಡಿರುವೆ. ಈ ಬಾರಿ ನಡೆಯುವ ಸಮ್ಮೇಳನದಲ್ಲಿ ಶೋಷಿತ ಜನರ ಮತ್ತು ಬಡವರ ಏಳಿಗೆಗಾಗಿ ಏನು ಮಾಡಬಹುದು ಎಂಬುದರ ಬಗ್ಗೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಹಲವಾರು ನಿರ್ಣಯ ಕೈಗೊಂಡು ಅವುಗಳನ್ನು ಸರಿಯಾದ ರೀತಿಯಲ್ಲಿ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಶ್ರಮ ವಹಿಸುವುದಾಗಿ ಹೇಳಿದರು.

ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ರುದ್ರ ಮುನಿ, ಸಾಹಿತಿ ಜೆ. ಕಲೀಂ ಬಾಷಾ, ಶೇಖರಗೌಡ ಪಾಟೀಲ್, ಕಾರ್ಮಿಕ ಮುಖಂಡ ಹೆಚ್.ಕೆ. ಕೊಟ್ರಪ್ಪ ಮಾತನಾಡಿ, ಶುಭ ಹಾರೈಸಿದರು.

ನಿವೃತ್ತ ಪ್ರಾಂಶುಪಾಲ ಎಸ್.ಹೆಚ್. ಪ್ಯಾಟಿ, ಕರುಣಾಕರ್, ಕುಮಾರ್ ಹನುಮಂತಪ್ಪ, ಆರ್.ಆರ್. ಕಾಂತರಾಜ್, ಜೆ.ಕೆ. ಮಲ್ಲಿಕಾರ್ಜುನ ಯಕ್ಕೆಗೊಂದಿ ರುದ್ರಗೌಡ್ರು, ರೇವಣಸಿದ್ದಪ್ಪ ಅಂಗಡಿ ಇತರರು ಮಾತನಾಡಿದರು.

ಹರಿಹರೇಶ್ವರ ಬ್ಯಾಂಕ್ ಅಧ್ಯಕ್ಷ ಜಿ.ಜೆ. ಮಲ್ಲಿಕಾರ್ಜುನ, ಆರ್.ಆರ್. ಕಾಂತರಾಜ್, ರೇವಣಸಿದ್ದಪ್ಪ ಅಂಗಡಿ, ಬಿ.ಎಂ. ನಿರಂಜನ, ಕುಮಾರ್ ಹನುಮಂತಪ್ಪ, ಹುಲಿಕಟ್ಟಿ ಚನ್ನಬಸಪ್ಪ ಹಾಗೂ ಇತರರು ಹಾಜರಿದ್ದರು.

ಮಾಜಿ ದೂಡ ಸದಸ್ಯ ಹೆಚ್. ನಿಜಗುಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾರ್ಥನೆ ಪರಮೇಶ್ವರಪ್ಪ ಕತ್ತಿಗೆ, ಸ್ವಾಗತ, ನಿರೂಪಣೆ ಈಶಪ್ಪ ಬೂದಿಹಾಳ, ವಂದನಾರ್ಪಣೆಯನ್ನು ರಿಯಾಜ್ ಆಹ್ಮದ್ ಮಾಡಿದರು.



# ಡಾ. ಎ.ಬಿ. ರಾಮಚಂದ್ರಪ್ಪ ಅವರಿಗೆ ರಾಜ್ಯಮಟ್ಟದ ಜೀವಮಾನ ಸಾಧನೆ ಪ್ರಶಸ್ತಿ

ಮಲೇಬೆನ್ನೂರು, ಜ. 5 - ಬೆಂಗಳೂರಿನ ಯಲಹಂಕ ಸಮೀಪದ ಬಾಗಲೂರು ವಿ.ಜೆ. ಇಂಟರ್‌ನ್ಯಾಷನಲ್ ಶಾಲಾ ಮೈದಾನದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ರಾಷ್ಟ್ರಕವಿ ಕುವೆಂಪು ದಿನಾಚರಣೆ ಹಾಗೂ ವೈಚಾರಿಕ ದಿನಾಚರಣೆ ಮತ್ತು ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನದಲ್ಲಿ ಮಾನವ ಬಂಧುತ್ವ ವೇದಿಕೆಯ ರಾಜ್ಯ ಸಂಚಾಲಕರು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರೂ ಆದ ಡಾ. ಎ.ಬಿ. ರಾಮಚಂದ್ರಪ್ಪ ಅವರನ್ನು ಸಂಘಟನಾತ್ಮಕ ಸೇವೆಗಾಗಿ ರಾಜ್ಯಮಟ್ಟದ ಜೀವನ ಸಾಧನ ಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಿಎಂ. ಸಲಹೆಗಾರ ಹಾಗೂ ಆಳಂದ ಕ್ಷೇತ್ರದ ಶಾಸಕ ಬಿ.ಆರ್. ಪಾಟೀಲ್, ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಉಮಾಶ್ರೀ ಬಂಡಾಯ ಸಾಹಿತಿ ಕೆ. ಷರೀಫಾ, ಮಂಡ್ಯ ವಿವಿಯ ಕುಲಪತಿ ಡಾ. ಶಿವ ಚಿತ್ತಪ್ಪ, ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಹುಲಿಕಲ್ ನಟರಾಜ್ ಮತ್ತಿತರರು ಈ ಕಾರ್ಯಕ್ರಮದಲ್ಲಿದ್ದರು.

# ಕಲಾಕುಂಚದಿಂದ ಸಂಕ್ರಾಂತಿ ಕವಿಗೋಷ್ಠಿಗೆ ಆಹ್ವಾನ

ದಾವಣಗೆರೆ, ಜ. 5 - ನಗರದ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಸಂಕ್ರಾಂತಿ ಪ್ರಯುಕ್ತ ಇದೇ ದಿನಾಂಕ 11 ರ ಮಂಗಳವಾರ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಸಂಕ್ರಾಂತಿ ಕವಿಗೋಷ್ಠಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ. ವಾಟ್ಸಾಪ್ ಸಂಖ್ಯೆ 9743897578ರಲ್ಲಿ ಹೆಸರು ನೋಂದಾಯಿಸಬಹುದು ಎಂದು ಕವಿಗೋಷ್ಠಿಯ ಸಂಯೋಜಕರಾದ ಹೇಮಾ ಶಾಂತಪ್ಪ ಪೂಜಾರಿ ತಿಳಿಸಿದ್ದಾರೆ.

# ಜಿಗಳಿ ಪಿಎಸಿಎಸ್ ಚುನಾವಣೆ : 11 ಜನ ಆಯ್ಕೆ

## ಒಂದು ಅವಿರೋಧ ಆಯ್ಕೆ



ಮಲೇಬೆನ್ನೂರು, ಜ.5- ಜಿಗಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕ ಸ್ಥಾನಗಳಿಗೆ ಭಾನುವಾರ ನಡೆದ ಚುನಾವಣೆಯಲ್ಲಿ 11 ಜನ ಆಯ್ಕೆಯಾಗಿದ್ದಾರೆ.

ಸಾಲಗಾರರ ಕ್ಷೇತ್ರದಿಂದ ಸಾಮಾನ್ಯ ವರ್ಗದ ಜಿಗಳಿಯ ಎಕ್ಕೆಗೊಂದಿ ರುದ್ರಗೌಡ, ಜಿ.ಬೇವಿನಹಳ್ಳಿಯ ಜಿ.ಎಸ್. ಶಿವರಾಜ್, ಹಳ್ಳಿಹಾಳ್‌ನ ಕೆ.ಎಸ್.ವೀರನಗೌಡ, ತಿಮ್ಮನಗೌಡ, ಹೆಚ್.ಎಸ್.ಉಮೇಶ್, ಎಸ್ಸಿ ವರ್ಗದಿಂದ ಹಳ್ಳಿಹಾಳ್ ಎ.ಕೆ.ಬಸವರಾಜ್, ಎಸ್ಟಿ ವರ್ಗದಿಂದ ಜಿಗಳಿಯ ಪುಟ್ಟಣ್ಣರ ಬಸವರಾಜ್, ಬಿಸಿಎಂ 'ಎ' ವರ್ಗದಿಂದ ಜಿಗಳಿಯ ಡಿ.ಹೆಚ್.ಮಂಜುನಾಥ್, ಬಿಸಿಎಂ 'ಬಿ' ವರ್ಗದಿಂದ ಜಿಗಳಿಯ ಜಿ.ಪಿ.ಹನುಮಗೌಡ, ಮಹಿಳಾ ಮೀಸಲು ವರ್ಗದಿಂದ ಜಿಗಳಿಯ ಜಿ.ಎಂ.ಕುಸುಮಮ್ಮ, ಹಳ್ಳಿಹಾಳ್‌ನ ಎಸ್.ವಿ.ಕುಸುಮ ಇವರುಗಳು ಚುನಾಯಿತರಾಗಿದ್ದಾರೆ.

ಸಾಲಗಾರರಲ್ಲದ ಕ್ಷೇತ್ರದಿಂದ ಶ್ರೀಮತಿ ರತ್ನಮ್ಮ ಜಿ.ಆನಂದಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು.

# ಕೊಂಡಜ್ಜಿ ಪಿಎಸಿಎಸ್ ಚುನಾವಣೆ ನಿಖಿಲ್ ಸೇರಿ 6 ಜನ ಅವಿರೋಧ ಆಯ್ಕೆ



ಮಲೇಬೆನ್ನೂರು, ಜ.5- ಕೊಂಡಜ್ಜಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಗೆ ಸಾಲಗಾರರಲ್ಲದ ಕ್ಷೇತ್ರದಿಂದ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ನಿಖಿಲ್ ಕೊಂಡಜ್ಜಿ ಸೇರಿ 6 ಜನ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಾಲಗಾರರ ಕ್ಷೇತ್ರದಿಂದ ಎಸ್ಸಿ ವರ್ಗದಿಂದ ಹೆಚ್. ಹನುಮಂತಪ್ಪ, ಎಸ್ಟಿ ವರ್ಗದಿಂದ ಮೃತ್ಯುಂಜಯ, ಬಿಸಿಎಂ 'ಎ' ವರ್ಗದಿಂದ ವೈ.ಹಾಲಪ್ಪ, ಮಹಿಳಾ ಮೀಸಲು ವರ್ಗದಿಂದ ಸೌಭಾಗ್ಯಮ್ಮ ನಾಗರಾಜಪ್ಪ ಮತ್ತು ಅಂಜಿನಮ್ಮ ಮಹಾಂತೇಶ್ ಇವರುಗಳೂ ಅವಿರೋಧವಾಗಿ ಆಯ್ಕೆಯಾಗಿದ್ದು, ಉಳಿದ 6 ಸ್ಥಾನಗಳಿಗೆ ಇದೇ ದಿನಾಂಕ 11ಕ್ಕೆ ಚುನಾವಣೆ ನಡೆಯಲಿದೆ.

# ಕೆ.ಎನ್.ಹಳ್ಳಿ ಪಿಎಸಿಎಸ್ ಚುನಾವಣೆ : 9 ಜನ ಆಯ್ಕೆ

## ಮೂವರು ಅವಿರೋಧ ಆಯ್ಕೆ

ಮಲೇಬೆನ್ನೂರು, ಜ.5- ಕಡಾರನಾಯ್ಕನಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಗಳಿಗೆ ಭಾನುವಾರ ನಡೆದ ಚುನಾವಣೆಯಲ್ಲಿ 9 ಜನ ಆಯ್ಕೆಯಾಗಿದ್ದಾರೆ.

ಸಾಲಗಾರರ ಕ್ಷೇತ್ರದಿಂದ ಸಾಮಾನ್ಯ ವರ್ಗದಿಂದ ಕೊಕ್ಕನೂರು ನಟರಾಜ್, ಮಸವಳ್ಳಿ ರಾಜು, ಟಿ.ರಾಜಪ್ಪ, ಗೌಡ್ರ ರುದ್ರಗೌಡ, ಸುರೇಶ್ ಹೊಳೆಯಾಚೆ ಮಹಿಳಾ ಮೀಸಲು ವರ್ಗದಿಂದ ಶ್ರೀಮತಿ ಕೂಶಪ್ಪರ ಇಂದ್ರಮ್ಮ, ಶ್ರೀಮತಿ ಗುಬ್ಬಿ ಶಾರದಮ್ಮ, ಎಸ್ಟಿ ವರ್ಗದಿಂದ ಕಮತರ ಹನುಮಂತಪ್ಪ, ಬಿಸಿಎಂ 'ಬಿ' ವರ್ಗದಿಂದ ನಿಬಗೂರು ಹನುಮಂತಪ್ಪ ಇವರುಗಳು ಚುನಾಯಿತರಾಗಿದ್ದಾರೆ.

ಎಸ್ಸಿ ವರ್ಗದಿಂದ ಎ.ಕೆ.ಹಾಲೇಶ್, ಬಿಸಿಎಂ 'ಎ' ವರ್ಗದಿಂದ ರಿಯಾಜ್ ಮತ್ತು ಸಾಲಗಾರರಲ್ಲದ ಕ್ಷೇತ್ರದಿಂದ ಜಿ.ಬಸಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು.

# ಕನ್ನಿಕಾ ಪರಮೇಶ್ವರಿ ಬ್ಯಾಂಕ್ ಚುನಾವಣೆ : ಪ್ರಭಾಕರ್, ಆರ್‌ಜಿಎಸ್ ಗುಂಪಿಗೆ ಜಯ



(1ನೇ ಪುಟದಿಂದ) (831), ಜೆ. ರವೀಂದ್ರ ಗುಪ್ತ (826), ಕೆ.ವಿ. ಮಂಜುನಾಥ (817), ಆರ್.ಜಿ. ಶ್ರೀನಿವಾಸಮೂರ್ತಿ (815), ಬಿ.ಎಸ್. ಶಿವಾನಂದ (771), ಎ.ಎಸ್. ಸತ್ಯನಾರಾಯಣಸ್ವಾಮಿ (761), ಎನ್. ಕಾಶಿನಾಥ್ (758), ವೈ.ಬಿ. ಸತೀಶ್ (754) ಅವರುಗಳು ಸಾಮಾನ್ಯ ಕ್ಷೇತ್ರದಿಂದ ಆಯ್ಕೆಯಾಗಿದ್ದಾರೆ.

ಮಹಿಳಾ ಮೀಸಲು ಕ್ಷೇತ್ರದ ಎರಡು ಸ್ಥಾನಗಳಿಗೆ ಆರ್.ಎಲ್. ಪ್ರಭಾಕರ್ ಗುಂಪಿನಿಂದ ಸ್ಪರ್ಧೆ ಮಾಡಿದ್ದ ಶ್ರೀಮತಿ ಆರ್.ಬಿ. ಗೀತಾ (773) ಮತ್ತು ಶ್ರೀಮತಿ ಸುಧಾ ನಾಗರಾಜ್ (684) ಚುನಾಯಿತರಾಗಿದ್ದಾರೆ.

ವಕೀಲ ಎಸ್. ವೆಂಕಟೇಶ್ (457), ಆರ್.ವಿ. ಬಲರಾಮ ಶೆಟ್ಟಿ (298), ಸತೀಶ್ ಕುಮಾರ್ (268) ಸಾಮಾನ್ಯ ಕ್ಷೇತ್ರದಿಂದ ಪರಾಭವಗೊಂಡಿದ್ದಾರೆ. ಕೆ.ಎಂ. ಗೀತಾ ರಾಂ (451), ಬಿ.ಎಸ್. ಶ್ರುತಿ (210) ಮಹಿಳಾ ಮೀಸಲು ಕ್ಷೇತ್ರದಿಂದ ಪರಾಭವಗೊಂಡಿದ್ದಾರೆ.

ಸಹಕಾರ ಇಲಾಖೆಯ ಸತೀಶ್ ನಾಯ್ಕ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

# ವಸಾಹತು ಕಾಲದಲ್ಲಿನ ಮಧ್ಯಕರ್ನಾಟಕ ಚರಿತ್ರೆ, ದಾಖಲೆಗಳು ರಾಷ್ಟ್ರ ಮಟ್ಟದ ವಿಚಾರ ಸಂಕಿರಣ

## ಹರಿಹರದ ಸರ್ಕಾರಿ ಕಾಲೇಜಿನಲ್ಲಿ ಇಂದಿನಿಂದ ಎರಡು ದಿನ



ಹರಿಹರ,ಜ.5- ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಾಳೆ ದಿನಾಂಕ 6 ಮತ್ತು 7 ರಂದು ವಸಾಹತು ಕಾಲದಲ್ಲಿನ ಮಧ್ಯಕರ್ನಾಟಕದ ಚರಿತ್ರೆ ಮತ್ತು ದಾಖಲೆಗಳು ವಿಷಯ ಕುರಿತು ಎರಡು ದಿನಗಳ ರಾಷ್ಟ್ರ ಮಟ್ಟದ ವಿಚಾರ ಸಂಕಿರಣ ಆಯೋಜಿಸಿದೆ ಎಂದು ಪ್ರಾಚಾರ್ಯ ಡಾ ಎಚ್.ವಿರುಪಾಕ್ಷಪ್ಪ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಭಾಗೀಯ ಕಚೇರಿ ಬೆಂಗಳೂರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಇತಿಹಾಸ ಅಧ್ಯಾಪಕರ ವೇದಿಕೆಯ ಸಂಯುಕ್ತ ಆಶ್ರಯದಲ್ಲಿ ಜರುಗುವ ಕಾರ್ಯಕ್ರಮವನ್ನು 6 ರಂದು ಬೆಳಿಗ್ಗೆ 10 ಗಂಟೆಗೆ ಶಾಸಕ ಬಿ.ಪಿ. ಹರೀಶ್ ಉದ್ಘಾಟಿಸುವರು

ಡಾ.ವಿರುಪಾಕ್ಷಪ್ಪ ಎಚ್. ಅಧ್ಯಕ್ಷತೆ ವಹಿಸುವರು. ಹಂಪಿಯ ಕನ್ನಡ ವಿವಿ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ವಾಸುದೇವ ಬಡಿಗೇರ್, ದಾವಣಗೆರೆ ವಿವಿ ಕುಲಪತಿ ಪ್ರೊ. ಬಿ.ಡಿ.ಕುಂಬಾರ, ಕರ್ನಾಟಕ ರಾಜ್ಯ ಕಾಲೇಜು ಅಧ್ಯಾಪಕರ ಸಂಘದ ಮಾಜಿ ರಾಜ್ಯಾಧ್ಯಕ್ಷ ಸಿ. ಎಚ್.ಮುರುಗೇಂದ್ರಪ್ಪ, ದಾವಣಗೆರೆ ವಿವಿ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ವೆಂಕಟರಾವ್ ಎಂ. ಪಲಾಟೆ, ರಾಜ್ಯ ಪತ್ರಾಗಾರ ಇಲಾಖೆ ಉಪನಿರ್ದೇಶಕ ಡಾ.ನೆಲ್ಕುದ್ರಿ ಸದಾನಂದ ಹಾಗೂ ಇತರರು ಮುಖ್ಯ ಅತಿಥಿಯಾಗಿ ಭಾಗವಹಿಸುವರು.

ಸ್ವಾತಂತ್ರ್ಯ ಸಂಗ್ರಾಮ-ಒಂದು ವಿಶ್ಲೇಷಣೆ ಕುರಿತು 1ನೇ ಗೋಷ್ಠಿಯಲ್ಲಿ ಗುಲ್ಬರ್ಗ ವಿವಿ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕ ಡಾ.ಬಿ.ಸಿ.ಮಹಾಬಲೇಶ್ವರಪ್ಪ ವಿಷಯ ಮಂಡನೆ ಮಾಡುವರು. ದಾವಣಗೆರೆ ವಿವಿ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ವೆಂಕಟರಾವ್ ಎಂ.ಪಲಾಟೆ ಅಧ್ಯಕ್ಷತೆ ವಹಿಸುವರು.

ಮಧ್ಯಕರ್ನಾಟಕದಲ್ಲಿ ಅರಣ್ಯ ಸತ್ಯಾಗ್ರಹ ಕುರಿತ 2ನೇ ಗೋಷ್ಠಿಯಲ್ಲಿ ದಾವಣಗೆರೆ ವಿವಿ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ನಾಗಭೂಷಣ ಗೌಡ ಪಿ. ವಿಷಯ ಮಂಡನೆ ಮಾಡುವರು. ಬಸವಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಮಂಜಣ್ಣ ಅಧ್ಯಕ್ಷತೆ ವಹಿಸುವರು.

ನಂತರ ಸಂಶೋಧನಾ ಲೇಖನಗಳ ಮಂಡನೆ ನಡೆಯಲಿದ್ದು ದಾವಣಗೆರೆ ವಿವಿ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹೊನ್ನೂರುಸ್ವಾಮಿ ಎಚ್. ಅಧ್ಯಕ್ಷತೆ ವಹಿಸಲಿದ್ದು, ಸಂತೆಬೆನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಎನ್.ಮಲ್ಲಯ್ಯ ನಿರೂಪಿಸುವರು.

ನಾಡಿದ್ದು ದಿನಾಂಕ 7 ರಂದು ಬೆಳಿಗ್ಗೆ ಮಧ್ಯ ಕರ್ನಾಟಕದಲ್ಲಿನ ಮಠಗಳ ಕೊಡುಗೆಗಳು ವಿಷಯ ಕುರಿತ ದಾವಣಗೆರೆ ಎಆರ್‌ಎಂ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ರಾಕೇಶ್ ಬಿ.ಸಿ. ವಿಷಯ ಮಂಡಿಸುವರು. ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ರಾಜಕುಮಾರ್ ಎಂ. ಅಧ್ಯಕ್ಷತೆ ವಹಿಸುವರು.

ಮಧ್ಯಾಹ್ನ 12ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಗುಲ್ಬರ್ಗ ವಿವಿ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕ ಡಾ.ಬಿ.ಸಿ. ಮಹಾಬಲೇಶ್ವರಪ್ಪ ಸಮಾರೋಪ ಭಾಷಣ ಮಾಡುವರು.

ಡಾ.ಅನಂತನಾಗ್ ಎಚ್.ಪಿ., ಡಾ. ನೆಲ್ಕುದ್ರಿ ಸದಾನಂದ, ಡಾ.ಬಿ.ಪಿ.ಕುಮಾರ, ಡಾ.ಮಲ್ಲಿಕಾರ್ಜುನ ಜವಳಿ, ಜಿ.ಎಂ. ಮುರಿಗಿಸ್ವಾಮಿ, ಬಸವರಾಜಯ್ಯ ಎನ್.ಎಂ. ಮುಖ್ಯ ಅತಿಥಿಯಾಗಿ ಭಾಗವಹಿಸುವರು ಎಂದರು.

ಗೋಷ್ಠಿಯಲ್ಲಿ ಐಕ್ಯುಎಸಿ ಸಂಚಾಲಕ ಡಾ.ಅನಂತನಾಗ್ ಎಚ್.ಪಿ., ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಡಾ.ಯತೀಸ್ ಎಲ್. ಕೊಡಾವತ್, ಡಾ.ಮಂಜುನಾಥ್, ಡಾ. ತಿರುಮಲ, ಡಾ.ಯೋಗೀಶ್, ಅಬ್ದುಲ್ ಬಶೀರ್, ಡಾ.ತಿಪ್ಪೇಸ್ವಾಮಿ ಎಚ್., ಗ್ರಂಥಪಾಲಕ ಡಾ.ಚಿದಾನಂದಪ್ಪ ಇದ್ದರು.


# ಕೈ ಹಿಡಿದು ನಡೆಸಿದ ಅಪ್ಪ-ಅಮ್ಮರ ನೆನಪಲ್ಲಿ



ದಿ|| ಕೊಂಡಜ್ಜಿ ಈಶ್ವರಪ್ಪನವರು

ನಿಧನ : 06.01.1984



ದಿ|| ಅನ್ನಪೂರ್ಣಮ್ಮ ಕೊಂಡಜ್ಜಿ

ನಿಧನ : 06.06.2008

ನಮ್ಮೆಲ್ಲರನ್ನು ಕೈ ಹಿಡಿದು ನಡೆಸಿ
ತಪ್ಪು ಹೆಜ್ಜೆಗಳನ್ನು ತಿದ್ದಿ ತೀಡಿ
ನಮಗೆ ಬದುಕು ದೊರಕಿಸಿಕೊಟ್ಟ ನೀವು
ನಿತ್ಯ ಸ್ಮರಣೀಯರು

ವರ್ಷಗಳೆಷ್ಟೇ ಕಳೆಯಲಿ,
ನಿಮ್ಮ ನೆನಪು
ನಮ್ಮೆದೆಗಳಲ್ಲಿ ಹಚ್ಚ ಹಸಿರಾಗಿದೆ....
ನೀವಿಟ್ಟ ಹೆಜ್ಜೆಗಳ ಮೇಲೆ ನಡೆಯುತ್ತಿರುವ.....

ಶ್ರೀಮತಿ ಶ್ರೀ ಕೊಂಡಜ್ಜಿ ಜಯಪ್ರಕಾಶ್
ಶ್ರೀಮತಿ ಶ್ರೀ ಭೀಮರಾಜ್ ಕೊಂಡಜ್ಜಿ
ಶ್ರೀಮತಿ ಶ್ರೀ ಯೋಗೀಶ್ ಕೊಂಡಜ್ಜಿ
ಶ್ರೀ ಗಿರೀಶ್ ಕೊಂಡಜ್ಜಿ
ಚಿ|| ಗಂಗಾ BE, ಚಿ|| ಗಾನವಿ, ಚಿ|| ತೇಜಸ್

ಶ್ರೀಮತಿ ಮತ್ತು ಶ್ರೀ ಜಿ.ಹೆಚ್. ರಾಜಕುಮಾರ್ ಮತ್ತು ಮಕ್ಕಳು
ಶ್ರೀಮತಿ ಮತ್ತು ಶ್ರೀ ಜಿ.ಹೆಚ್. ಶಿವಕುಮಾರ್ ಮತ್ತು ಮಕ್ಕಳು
ಶ್ರೀಮತಿ ಕವಿತಾ ಡಾ|| ಜಿ.ಹೆಚ್. ಮಂಜುನಾಥ್
ಶ್ರೀಮತಿ, ಶ್ರೀ ಎಂ.ಎಸ್. ಪಾಟೀಲ್ ಮತ್ತು ಮಕ್ಕಳು
ದಿ|| ಸಾಲೇರ ಸಿದ್ದಪ್ಪನವರ ಮಕ್ಕಳು
ಶ್ರೀಮತಿ ಶ್ರೀ ಎ.ಎಂ. ಜಯದೇವಪ್ಪ ಮತ್ತು ಮಕ್ಕಳು
ಶ್ರೀಮತಿ ಸರ್ವಮಂಗಳಮ್ಮ ಪುರದಪ್ಪ ಮತ್ತು ಮಕ್ಕಳು

ಅಂತರವಳ್ಳಿ ಮನೆತನದವರು ಕೊಂಡಜ್ಜಿ ಹಾಗೂ ಬಂಧು-ಮಿತ್ರರು.


# ನ್ಯಾಮತಿ ತಾ.ಗೆ ಆಹಾರ ಧಾನ್ಯ ಹಂಚಿಕೆ


ದಾವಣಗೆರೆ, ಜ. 5 - ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ನ್ಯಾಮತಿ ತಾಲ್ಲೂಕಿನ ಪಡಿತರ ಚೀಟಿದಾರರಿಗೆ ಡಿಸೆಂಬರ್ ಮಾಹೆಯಲ್ಲಿ ಬಿಡುಗಡೆಯಾದ ಪಡಿತರ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ.

ಅಂತ್ಯೋದಯ ಪಡಿತರ ಚೀಟಿದಾರರಿಗೆ 35 ಕೆ.ಜಿ ಅಕ್ಕಿ ಪ್ರತಿ ಕಾರ್ಡಿಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 5 ಕೆ.ಜಿ ಅಕ್ಕಿ ಪ್ರತಿ ಸದಸ್ಯರಿಗೆ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.

ಪಡಿತರ ಚೀಟಿದಾರರ ಖಾತೆಗೆ ನೇರ ನಗದು ವರ್ಗಾವಣೆ ಸಂಬಂಧಿಸಿದಂತೆ, ಪಡಿತರ ಚೀಟಿದಾರರು ಕಡ್ಡಾಯವಾಗಿ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯನ್ನು ಮಾಡಿಸಿಕೊಳ್ಳಬೇಕು ಹಾಗೂ ಹಣ ಪಡೆಯಲು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ತಮ್ಮ ಬ್ಯಾಂಕ್ ಶಾಖೆಗಳಿಗೆ ಹಾಗೂ ಸ್ಥಳೀಯ ಆಹಾರ ನಿರೀಕ್ಷರನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು ಎಂದು ನ್ಯಾಮತಿ ತಹಶೀಲ್ದಾರ್ ತಿಳಿಸಿದ್ದಾರೆ.


|| ಶ್ರೀ ಕಲ್ಲೇಶ್ವರ ಪ್ರಸನ್ನಃ ||

# ಕೈಲಾಸ ಶಿವಗಣಾರಾಧನೆ ಆಹ್ವಾನ ಪತ್ರಿಕೆ



ಜನನ : 03-05-1933 ಮರಣ : 30-12-2024

ವಿಜಯನಗರ ಜಿ|| ಹರಪನಹಳ್ಳಿ ಟೌನ್ ವಾಸಿ
ಶ್ರೀಮತಿ ಆರುಂಡಿ ಸುಮಂಗಲಮ್ಮ ಮತ್ತು ಮಕ್ಕಳು
ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ 30-12-2024 ನೇ ಸೋಮವಾರ
ಬೆಳಿಗ್ಗೆ 11-50 ಕ್ಕೆ ನನ್ನ ಪೂಜ್ಯ ಪತಿಯವರಾದ
ಶ್ರೀ ಆರುಂಡಿ ನಿಂಗಪ್ಪ
ವಕೀಲರು
ಇವರು ಲಿಂಗೈಕ್ಯರಾದ
ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ
ಕೈಲಾಸ ಶಿವಗಣಾರಾಧನೆಯನ್ನು
ದಿನಾಂಕ 07-01-2025 ನೇ ಮಂಗಳವಾರ
ಮಧ್ಯಾಹ್ನ 12 ಕ್ಕೆ ಹರಪನಹಳ್ಳಿಯ ಮೃತರ
ಸ್ವಗೃಹದಲ್ಲಿ ನೆರವೇರಿಸಲು ಗುರು-ಹಿರಿಯರು
ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ಇಂತಿ : ಶ್ರೀ ಆರುಂಡಿ ಶಿವಾನಂದ, ಹಲುವಾಗಲು. ಶ್ರೀ ಆರುಂಡಿ ಸುರೇಶ್, ಹರಪನಹಳ್ಳಿ

ದುಃಖತಪ್ತರು : ಮೃತರ ಮಕ್ಕಳು, ಮೊಮ್ಮಕ್ಕಳು, ಅಳಿಯಂದಿರು, ಸೊಸೆಯಂದಿರು, ಆರುಂಡಿ ವಂಶಸ್ಥರು, ಬಂಧು - ಮಿತ್ರರು.

ವಿ.ಸೂ.: ಆಹ್ವಾನ ಪತ್ರಿಕೆ ಕಳುಹಿಸಲಾಗಿದ್ದು, ತಲುಪದೇ ಇರುವವರು ಇದನ್ನೇ ಆಹ್ವಾನವೆಂದು ಭಾವಿಸಿ ಆಗಮಿಸಬೇಕಾಗಿ ವಿನಂತಿ.


# ಕಾಂತರಾಜ್ ವರದಿ ಅನುಷ್ಠಾನಕ್ಕೆ ಪ್ರಯತ್ನ

## ಬಸವಣ್ಣ, ಅಂಬೇಡ್ಕರ್, ಕನಕದಾಸರ ಹಾದಿಯಲ್ಲಿ ನಡೆಯುವೆ

ನಾನೂ ಸಹ ಬಸವೇಶ್ವರ, ಕನಕದಾಸರ ಹಾಗೂ ಅಂಬೇಡ್ಕರರ ಹಾದಿಯಲ್ಲಿಯೇ ನಡೆಯುವ ಪ್ರಯತ್ನ ಮಾಡುತ್ತಿದ್ದೇನೆ. ಅವರ ತತ್ವ ಸಿದ್ಧಾಂತಗಳನ್ನು ಪಾಲಿಸುವ ಪ್ರಾಮಾಣಿಕ ಪ್ರಯತ್ನ ನನ್ನದಾಗಿದೆ.

- ಸಿಎಂ ಸಿದ್ದರಾಮಯ್ಯ

(1ನೇ ಪುಟದಿಂದ) ಸಾಮಾಜಿಕ ನ್ಯಾಯ ಎಂದರೆ, ಈ ದೇಶದ ರಾಜಕೀಯ, ಆರ್ಥಿಕ, ಸಾಮಾಜಿಕ ಕ್ಷೇತ್ರವೇ ಎಲ್ಲರ ಆಸ್ತಿಯಂತೆ. ಈ ಆಸ್ತಿ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕೆಂಬುದೇ ಬಸವಣ್ಣ, ಕನಕದಾಸರ ಪರಿಕಲ್ಪನೆಯಾಗಿತ್ತು. ಕನಕದಾಸರ ಆದರ್ಶ, ಮೌಲ್ಯಗಳನ್ನು ಪ್ರತಿಯೊಬ್ಬರೂ ಸಹ ಅಳವಡಿಸಿಕೊಂಡಾಗ ಮಾತ್ರ ಸಮ ಸಮಾಜ ನಿರ್ಮಿಸಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮಾತನಾಡಿ, 15 ನೇ ಶತಮಾನದಲ್ಲಿ ಜನಿಸಿದ ಶ್ರೇಷ್ಠ ದಾರ್ಶನಿಕ ಕನಕದಾಸರು ಜಾತಿ ಪದ್ಧತಿ ನಿರ್ಮೂಲನೆ ಮಾಡಬೇಕೆಂದು ಅಂದೇ ತಮ್ಮ ಕೀರ್ತನೆಗಳ ಮೂಲಕ ಸಮಾಜ ತಿದ್ದುವ ಕೆಲಸ ಮಾಡಿದರು ಎಂದು ಹೇಳಿದರು.


ಕನಕ ದಾಸರು ದಾಸ ಸಾಹಿತ್ಯಕ್ಕೆ ನೀಡಿದ ಕೊಡುಗೆ ಅನನ್ಯವಾದುದು. ಸಮಾಜದಲ್ಲಿ ಅಂಕು ಡೊಂಕುಗಳನ್ನು ತಮ್ಮ ಕೀರ್ತನೆಗಳ ಮೂಲಕ ತಿದ್ದುವ ಪ್ರಯತ್ನ ಮಾಡಿದ್ದಾರೆಂದರು.

ಕುರುಬ ಸಮಾಜದ ಮುಖಂಡರೂ, ಮಾಜಿ ಮೇಯರ್ ಹೆಚ್.ಬಿ. ಗೋಣೆಪ್ಪ ಅಧ್ಯಕ್ಷತೆ ವಹಿಸಿದ್ದರು. ಕಾಗಿನೆಲೆ ಕನಕ ಗುರುಪೀಠದ ಶ್ರೀ ನಿರಂಜನಾನಂದ ಪುರಿ ಸ್ವಾಮೀಜಿ, ಹೊಸದುರ್ಗ ಶಾಖಾ ಮಠದ ಶ್ರೀ ಈಶ್ವರಾನಂದ ಪುರಿ ಸ್ವಾಮೀಜಿ, ಹದಡಿ ಚಂದ್ರಗಿರಿ ಮಠದ ಸದ್ಗುರು ಪರಮಹಂಸ ಮುರುಳೀಧರ ಸ್ವಾಮೀಜಿ, ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಮುಸ್ಲಿಂ ಧರ್ಮಗುರು ಮೌಲಾನ ಬಿ.ಎ. ಇಬ್ರಾಹಿಂ ಸಖಾಫಿ ಮಾತನಾಡಿದರು. ಇದೇ ವೇಳೆ ಬಿಎಸ್‌ಎಫ್‌ನ ದಕ್ಷಿಣ ಭಾರತದ ಮೊದಲ ಮಹಿಳಾ ಕಮಾಂಡೆಂಟ್ ಡಾ. ಎಂ.ಎಲ್. ಮೃದುಲ ಅವರನ್ನು ಗೌರವಿಸಲಾಯಿತು.

ಸಚಿವ ಭೈರತಿ ಸುರೇಶ್, ಸರ್ಕಾರದ ಗ್ಯಾರಂಟಿ ಯೋಜನೆಯ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ, ಅಹಿಂದ ಮುಖಂಡ ಹೊದಿಗೆರೆ ರಮೇಶ್ ಮಾತನಾಡಿದರು.

ಡಾ. ಉದಯಶಂಕರ್ ಒಡೆಯರ್, ಶಾಸಕರಾದ ಕೆ.ಎಸ್. ಬಸವಂತಪ್ಪ, ಲತಾ ಮಲ್ಲಿಕಾರ್ಜುನ್, ಡಿ.ಜಿ. ಶಾಂತನಗೌಡ, ಬಸವರಾಜ ಶಿವಣ್ಣನವರ, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಶಾಸಕರಾದ ಎಸ್. ರಾಮಪ್ಪ, ಮಹಿಮಾ ಜೆ.ಪಟೇಲ್, ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ, ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷ ಕೆ.ಎಂ. ರಾಮಚಂದ್ರಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹೆಚ್.ಬಿ. ಮಂಜಪ್ಪ, ಮುಖಂಡರಾದ ನಂದಿಗಾವಿ ಶ್ರೀನಿವಾಸ್, ಅನಂತನಾಯ್ಕ, ಬಿ. ವೀರಣ್ಣ, ಡಿ.ಬಸವರಾಜ್, ಎಲ್. ಎಂ. ಹನುಮಂತಪ್ಪ, ಬಿ.ಹೆಚ್. ವೀರಭದ್ರಪ್ಪ, ಪ್ರಸನ್ನಕುಮಾರ್, ಇಟ್ಟಿಗುಡಿ ಮಂಜುನಾಥ, ಫುಟ್ಬಾಲ್ ಗಿರೀಶ, ಪುರಂದರ ಲೋಕಿಕೆರೆ, ಹಾಲೇಕಲ್ ಎಸ್.ಟಿ. ಅರವಿಂದ್, ಲಿಂಗರಾಜ್, ಶಿವಣ್ಣ ಮಾಸ್ತರ್, ನಿಕೇತ್ ರಾಜ್ ಮೌರ್ಯ, ಮರಿಯೋಜಿರಾವ್ ಮತ್ತಿತರರು ಭಾಗವಹಿಸಿದ್ದರು.



# ಕಲ್ಲಿಗೂ ದೈವತ್ವ ನೀಡುವ ಅದ್ಭುತ ಶಕ್ತಿ ಚಿತ್ರಕಲೆಗಿದೆ : ಶಾಸಕ ಶಿವಗಂಗಾ ಬಸವರಾಜ್

ದಾವಣಗೆರೆ, ಜ. 5- ದಾರಿಯಲ್ಲಿ ಬಿದ್ದ ಕಲ್ಲಿನ ಮೇಲೆ ದೇವರ ಚಿತ್ರ ಬಿಡಿಸಿ, ಅದಕ್ಕೆ ಭಾವನಾತ್ಮಕ ರೂಪ ನೀಡಿ, ದೈವತ್ವ ಒದಗಿಸುವ ಅದ್ಭುತ ಶಕ್ತಿ ಚಿತ್ರಕಲೆಗಿದೆ ಎಂದು ಚನ್ನಗಿರಿ ಶಾಸಕ ಬಸವರಾಜು ವಿ. ಶಿವಗಂಗಾ ಹೇಳಿದರು.

ರಾಜ್ಯ ಮಟ್ಟದ ಯುವಜನೋತ್ಸವದ ಅಂಗವಾಗಿ ಭಾನುವಾರ ದಾವಣಗೆರೆ ನಗರದ ದೃಶ್ಯ ಕಲಾ ಮಹಾವಿದ್ಯಾಲಯದ ವೇದಿಕೆ-6 ರಲ್ಲಿ ಆಯೋಜಿಸಲಾಗಿದ್ದ ಚಿತ್ರಕಲಾ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಕಲಾವಿದ ತನ್ನ ಭಾವನೆಯಿಂದ ದೈವತ್ವ ಕಲ್ಪಿಸಿದ ಕಲ್ಲಿಗೆ ಜನರು ಕೈಮುಗಿಯುತ್ತಾರೆ. ಖಾಲಿ ಹಾಳೆಯ ಮೇಲೆ ಜಗತ್ತನ್ನು ಬಿಂಬಿಸುವ ಶಕ್ತಿ ಚಿತ್ರಕಲೆಗಿದೆ. ಇಂತಹ ಕಲೆ ಎಲ್ಲರಿಗೂ ಸಿದ್ದಿಸುವುದಿಲ್ಲ.

ಇಂದು ರಾಜ್ಯದ ಮೂಲೆ ಮೂಲೆಗಳಿಂದ ಆಗಮಿಸಿದ ಚಿತ್ರಕಲಾ ಸ್ಪರ್ಧಾಳುಗಳಿಗೆ ಯುವಜನೋತ್ಸವ ಉತ್ತಮ ವೇದಿಕೆ ಕಲ್ಪಿಸಿದೆ ಎಂದರು.

ಜಲಸಂರಕ್ಷಣೆಯ ವಿಷಯದ ಕುರಿತು ಸ್ಪರ್ಧಿಗಳು ತಮ್ಮ ಭಾವಭಿತ್ತಿಯನ್ನು ಬಿಳಿ ಕ್ಯಾನವಾಸ್‌ಗಳ ಮೇಲೆ ಬಣ್ಣಗಳಿಂದ ಮೂಡಿಸಿದರು. ಒಟ್ಟು ರಾಜ್ಯದ 31 ಜಿಲ್ಲೆಗಳಿಂದ ಆಗಮಿಸಿದ ಅಭ್ಯರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಸ್ಪರ್ಧಾಳುಗಳಿಗೆ 90 ನಿಮಿಷ ಕಾಲಾವಕಾಶ ನೀಡಲಾಗಿತ್ತು.

ತೀರ್ಪುಗಾರರಾಗಿ ದೃಶ್ಯಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಜಯರಾಜ್ ಚಿಕ್ಕ ಪಾಟೀಲ್, ನಿವೃತ್ತ ಪ್ರಾಚಾರ್ಯ ರವೀಂದ್ರ ಕಮ್ಮಾರ, ಧಾರವಾಡ ಕಲಾ ಕಾಲೇಜಿನ ನಿವೃತ್ತ ಪ್ರಾಚಾರ್ಯ ರೇಣುಕಾ ಮಾರ್ಕಂಡೆ, ಕಲಬುರ್ಗಿಯ ಹಿರಿಯ ಚಿತ್ರ ಕಲಾವಿದ ಬಾಬುರಾವ್ ಮೇಲಿನಮನೆ ಕಾರ್ಯನಿರ್ವಹಿಸಿದರು.

ವಯಸ್ಕರ ಶಿಕ್ಷಣಾಧಿಕಾರಿ ಮಹೇಶ್ ದೊಡ್ಡಮನಿ ಹಾಗೂ ವಯಸ್ಕರ ಸಹಾಯಕ ಶಿಕ್ಷಣಾಧಿಕಾರಿ ಪೂರ್ಣಿಮಾ, ದೃಶ್ಯ ಮಹಾವಿದ್ಯಾಲಯದ ಬೋಧನಾ ಸಹಾಯಕ ಪ್ರಮೋದ್. ಕೆ.ವಿ. ಸ್ಪರ್ಧೆಯ ಸಂಯೋಜಕರಾಗಿ ಕಾರ್ಯನಿರ್ವಹಿಸಿದರು.

ಭಾಗವಹಿಸಿದ ಎಲ್ಲ ಸ್ಪರ್ಧಾಳುಗಳಿಗೆ ಶಾಸಕರಾದ ಬಸವರಾಜು ವಿ. ಶಿವಗಂಗಾ ಹಾಗೂ ಬಿ.ಪಿ.ಹರೀಶ್ ಕ್ಯಾನವಾಸ್ ಕಿಟ್ ವಿತರಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಲೋಕೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಸೇರಿದಂತೆ, ಮತ್ತಿತರರು ಉಪಸ್ಥಿತರಿದ್ದರು.

# ಜೇನು ಕುರುಬರ ಹಾಡು, ಕಥೆ ಬರೆಯುವ ಸ್ಪರ್ಧೆ



ಬಾಪೂಜಿ ಎಂ.ಬಿ.ಎ ಕಾಲೇಜು ಸಭಾಂಗಣದ ವೇದಿಕೆ 2 ರಲ್ಲಿ ಜಾನಪದ ನೃತ್ಯ ಸ್ಪರ್ಧೆಗಳು ನಡೆದವು. ವಿವಿಧ ಪದವಿ ಪೂರ್ವ, ಪದವಿ, ಸ್ನಾತಕೋತ್ತರ 31 ಜಿಲ್ಲೆಗಳ ಜಾನಪದ ಗೀತೆಗಳನ್ನು ಹಾಡುವ ವಿದ್ಯಾರ್ಥಿಗಳ ತಂಡಗಳು ಭಾಗವಹಿಸಿದವು. ಶಿವಮೊಗ್ಗ ಜಿಲ್ಲೆಯ ತಂಡ ಜೇನು ಕುರುಬರ ಪದಗಳ ಹಾಡನ್ನು ಹಾಡಿದರು.

ಈ ವೇಳೆ ಮುಖ್ಯಅತಿಥಿಗಳಾಗಿ ಅಪ್ಪಗೆರೆ ತಿಮ್ಮರಾಜ್, ಪಿಚ್ಚಳ್ಳಿ ಶ್ರೀನಿವಾಸ್, ಸುನೀತ ಗಣೇಶ್, ಅರ್ಜುನ ಪರುಸಪ್ಪ, ಡಾ. ಸ್ವಾಮಿ ತ್ರಿಭುವನಂದ, ಪುಷ್ಪ, ಉಷಾ, ಶ್ವೇತಾ ಪಟೇಲ್, ದಯಾನಂದ, ಭಾಗ್ಯಲಕ್ಷ್ಮಿ ಸೊನಾಲಿಕ ಉಪಸ್ಥಿತರಿದ್ದರು.

ವೇದಿಕೆ 5ರಲ್ಲಿ ನಡೆದ ಕಥೆ ಬರೆಯುವ ಸ್ಪರ್ಧೆಯಲ್ಲಿ ಇಪ್ಪತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕನ್ನಡ, ಇಂಗ್ಲಿಷ್, ಹಿಂದಿ ಭಾಷೆಯಲ್ಲಿ ಕಥೆಗಳನ್ನು ವಿದ್ಯಾರ್ಥಿಗಳು ಬರೆದರು. ಕಥೆಯ ವಿಷಯ 'ಭವಿಷ್ಯದ ಭಾರತವನ್ನು ಮಹಾಶಕ್ತಿಯಾಗಿ ಕಾಣಲು ನನ್ನ ದೃಷ್ಟಿಕೋನ' ಎಂಬ ವಿಷಯದ ಕುರಿತು ಕಥೆ ಬರೆಸಲಾಯಿತು.

ತೀರ್ಪುಗಾರರು ಡಾ. ನಾಗರತ್ನ ಕೆ ಕುವೆಂಪು ವಿಶ್ವವಿದ್ಯಾಲಯ ಶಿವಮೊಗ್ಗ, ಹರಿಹರ ವಿಶ್ರಾಂತ ಸಹಪ್ರಾಧ್ಯಾಪಕ ಡಾ. ನಿರಂಜನ್‌ಮೂರ್ತಿ ಬಿ.ಎಂ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಂಚಾಲಕ ಇಮ್ರಾನ್ ಅಹಮದ್ ಬೇಗ್, ಅನ್ನಪೂರ್ಣ ಪಟೇಲ್, ಸುಮತಿ ಜಯಪ್ಪ, ಸುಭಾನ್ ಸಾಬ್, ಡಾ. ಸಿದ್ದೇಶ್ ಉಪಸ್ಥಿತರಿದ್ದರು.

# ಕೋಳಿ ಜೂಜಾಟದ ಸಂಕಷ್ಟ ಅನಾವರಣಗೊಳಿಸಿದ ಗೀತೆ



ಯುವ ಜನೋತ್ಸವದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಕೋಲಾರ ಜಿಲ್ಲಾ ತಂಡ, ಕೋಳಿ ಜೂಜಾಟ ಪಂದ್ಯದ ಕುರಿತು ಜಾನಪದ ಗೀತೆಯನ್ನು ನೃತ್ಯದೊಂದಿಗೆ ಪ್ರದರ್ಶಿಸಿದರು. ಕೋಲಾರ ಜಿಲ್ಲೆ ಸೇರಿದಂತೆ ಆಂಧ್ರ ಗಡಿ ಭಾಗದಲ್ಲಿ ಪ್ರಚಲಿತ ಇರುವ ಕೋಳಿ ಪಂದ್ಯ ಗ್ರಾಮೀಣ ಭಾಗದಲ್ಲಿನ ಮೋಜಿನ ಆಟ ವಾಗಿದೆ. ಇದರಲ್ಲಿ ಗ್ರಾಮೀಣ ಪುರುಷರು ಹಣ, ಬಂಗಾರಗಳನ್ನು ಪಣದಲ್ಲಿ ಇಟ್ಟು ಸೋತು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದರು. ಇದರಿಂದ ಬಾಧಿತವಾದ ಹೆಣ್ಣು ಮಗಳು ತನ್ನ ಗಂಡನಿಗೆ ಕೋಳಿ ಪಂದ್ಯ ಆಡದಂತೆ, ವಿವಿಧ ರೂಪಕಗಳಲ್ಲಿ ಎಚ್ಚರಿಸುತ್ತಾಳೆ.

# ಎಂಬಿಎ ಮೈದಾನದಲ್ಲಿ ಮಣಿಕಾಂತ್ ಮೋಡಿ

## ಚಳಿಯಲ್ಲೂ ಚಮಕ್ ಚಲ್ಲೋ ಕಿಚ್ಚು ಹಚ್ಚಿಸಿದ ಗಾಯಕಿ ಹಂಸಿಕಾ



ದಾವಣಗೆರೆ, ಜ.5- ರಾಜ್ಯಮಟ್ಟದ ಯುವಜನೋತ್ಸವದ ಅಂಗವಾಗಿ ನಗರದ ಬಾಪೂಜಿ ಎಂ.ಬಿ.ಎ ಮೈದಾನದಲ್ಲಿ ಭಾನುವಾರ ಸಂಜೆ ಆಯೋಜಿಸಲಾದ ಸಂಗೀತ ನಿರ್ದೇಶಕ ಮಣಿಕಾಂತ್ ಕದ್ರಿ ಮ್ಯೂಸಿಕಲ್ ನೈಟ್ಸ್‌ಗೆ ಬೆಣ್ಣೆನಗರಿ ಜನ ಕುಣಿದು ಕುಪ್ಪಳಿಸಿದರು. ಚಳಿಯಲ್ಲೂ ಬಾಲಿವುಡ್ ಗಾಯಕಿ ಹಂಸಿಕಾ ನಾಯರ್ ಶಾರುಖಾನ್ ರಾ ಒನ್ ಚಿತ್ರದ ಚಮಕ್ ಚಲ್ಲೋ ಗೀತೆ ಹಾಡಿ ಚಳಿಯಲ್ಲೂ ಕಿಚ್ಚು ಹಚ್ಚಿದರು.

ಸಂಗೀತ ಸಂಜೆ ಕಾರ್ಯಕ್ರಮವನ್ನು ಶ್ರೇಯಾ ಗೋಷಾಲ್ ಕಂಠಸಿರಿಯಲ್ಲಿ ಮೂಡಿಬಂದ, ಮರಾಠಿಯ ಚಂದಾ ಗೀತೆಯನ್ನು ವಿದ್ಯಾರ್ಥಿಗಳು ಲಾವಣಿ ನೃತ್ಯದೊಂದಿಗೆ ಆರಂಭಿಸಿದರು. ಇದರೊಂದಿಗೆ ಉಪೇಂದ್ರ ಸಿನಿಮಾ ಪ್ರಸಿದ್ಧ ಗೀತೆ ಹಾಗೂ ಅಗ್ನಿಪಥ್ ಚಿತ್ರದ ಗಣೇಶ ಗೀತೆಗಳಿಗೆ ವಿದ್ಯಾರ್ಥಿಗಳು ನೃತ್ಯ ಮಾಡಿದರು.

ಸಂಗೀತ ನಿರ್ದೇಶಕ ಮಣಿಕಾಂತ್ ಕದ್ರಿ ತಮ್ಮದೇ ಸಂಗೀತ ಸಂಯೋಜನೆಯ ಗೀತೆಗಳನ್ನು ತಮ್ಮ ಕಂಠಸಿರಿಯಲ್ಲಿ ಹಾಡಿದರು. ಸರಿಗಮಪ 14ನೇ ಆವೃತ್ತಿ ಸುಪ್ರಿತ್ ಪ್ರಸಿದ್ಧ ಕನ್ನಡ ಗೀತೆಗಳನ್ನು ಪ್ರಸ್ತುತ ಪಡಿಸಿದರು.

ಬಾಲಿವುಡ್ ಖ್ಯಾತಿಯ ಗಾಯಕಿ ಹಂಸಿಕಾ ಅಯ್ಯರ್, ನಗರ ಅಧಿದೇವತೆ ದುರ್ಗಾಂಭ ದೇವಿ ಸ್ಮರಿಸುತ್ತಾ, ಆದಿ ಗುರು ಶಂಕರಚಾರ್ಯ ಅವರ ರಚನೆ "ಐಗಿರಿ ನಂದಿನಿ" ಗೀತೆ ಪ್ರಸ್ತುತ ಪಡಿಸಿದರು. ನಂತರ ಸವಾರಿ-2 ಚಿತ್ರದ ಪ್ರಸಿದ್ಧ 'ಗೀತೆ ನಿನ್ನ ಧನಿಗಾಗಿ, ನಿನ್ನ ಕರೆಗಾಗಿ' ಸುಮಧರ ಯುಗಳ ಗೀತೆಯನ್ನು ಹಂಸಿಕಾ ನಾಯರ್ ಸಹ ಕಲಾವಿದರೊಂದಿಗೆ ಹಾಡಿದರು. ಸವಾರಿ-1 ಚಿತ್ರದ 'ಮರಳಿ ಮರೆಯಾಗಿ' ಪುನೀತ್ ರಾಜಕುಮಾರ್ ಅಭಿನಯದ ಪೃಥ್ವಿ ಚಿತ್ರದ 'ನಿನಗಾಗಿ' ಹೀರೋ ಚಿತ್ರದ ಶಾಕುಂತಲ ನಕ್ಕಳು ಸೇರಿದಂತೆ ಇತರೆ ಗೀತೆಗಳನ್ನು ಸಂಗೀತ ಸಂಜೆಯಲ್ಲಿ ಹಾಡಲಾಯಿತು.

ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕ ಬಸವರಾಜ ವಿ. ಶಿವಗಂಗಾ, ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ.ಎಂ, ಜಿ.ಪಂ.ಸಿಇಓ ಸುರೇಶ್ ಬಿ. ಇಟ್ನಾಳ್ ಸೇರಿದಂತೆ ಹಿರಿಯ ಅಧಿಕಾರಿಗಳು ಸಂಗೀತ ಸಂಜೆಯ ಸವಿದರು.



## ಯುವಜನೋತ್ಸದಲ್ಲಿ ಮೇಳೈಸಿದ ಜಾನಪದ ನೃತ್ಯ ವೈಭವ

ದಾವಣಗೆರೆ,ಜ. 5- ಬಿ.ಐ.ಇ.ಟಿ ಕಾಲೇಜಿನ ಎಸ್.ಎಸ್.ಮಲ್ಲಿಕಾರ್ಜುನ ಸಾಂಸ್ಕೃತಿಕ ಕಲಾಕೇಂದ್ರದಲ್ಲಿ ಭಾನುವಾರ ಆಯೋಜಿಸಲಾದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ರಾಜ್ಯ ವಿವಿಧ ಜಾನಪದ ನೃತ್ಯಗಳ ವೈಭವ ಮೇಳೈಯಿಸಿತು. 29 ಜಿಲ್ಲೆಗಳಿಂದ ಆಗಮಿಸಿದ ತಂಡಗಳು ವಿಭಿನ್ನ ರೀತಿಯ ಡೊಳ್ಳು ಕುಣಿತ, ಕೋಲಾಟ, ಜಾನಪದ ಗೀತೆಗಳಿಗೆ ನೃತ್ಯ ಪ್ರದರ್ಶಿಸಿದರು.

ಶಾಸಕರಾದ ಬಸವರಾಜ್ ವಿ.ಶಿವಗಂಗಾ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಅವರು ಸ್ಪರ್ಧಿಗಳಿಗೆ ಪ್ರಮಾಣ ಪತ್ರ ವಿತರಿಸಿದರು.

# ಘೋಷಣಾ ಸ್ಪರ್ಧೆಗೆ ಶಾಸಕ ಬಿ.ಪಿ.ಹರೀಶ್ ಚಾಲನೆ



ದಾವಣಗೆರೆ, ಜ. 5- ದೇಶದ ಅಭಿವೃದ್ಧಿಯಲ್ಲಿ ಪುರುಷರಷ್ಟೇ ಮಹಿಳೆಯರ ಕೊಡುಗೆ ಅನನ್ಯವಾದದು ಎಂದು ಹರಿಹರ ಶಾಸಕ ಬಿ.ಪಿ.ಹರೀಶ್ ಅಭಿಪ್ರಾಯಪಟ್ಟರು.

ರಾಜ್ಯ ಮಟ್ಟದ ಯುವಜನೋತ್ಸವದ ಅಂಗವಾಗಿ ಭಾನುವಾರ ದಾವಣಗೆರೆ ನಗರದ ದೃಶ್ಯ ಕಲಾ ಮಹಾವಿದ್ಯಾಲಯದ ವೇದಿಕೆ-7 ರಲ್ಲಿ ಆಯೋಜಿಸಲಾಗಿದ್ದ ಘೋಷಣಾ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು.

ಮಹಿಳೆಯರು ಮನೆಗೆಲಸ ಹಾಗೂ ಮಕ್ಕಳ ಲಾಲನೆ ಪಾಲನೆಗೆ ಮಾತ್ರ ಸೀಮಿತವಲ್ಲ. ದೇಶದ ಅಭಿವೃದ್ಧಿಯಲ್ಲೂ ಮಹತ್ತರ ಪಾತ್ರ ವಹಿಸಿದ್ದಾರೆ. ಯುವಜನೋತ್ಸವದಲ್ಲಿ ಮಹಿಳಾ ಸಶಕ್ತೀಕರಣ ಕುರಿತು ಘೋಷಣಾ ಸ್ಪರ್ಧೆ ಏರ್ಪಡಿಸಲಾಗಿದೆ. ಇದರಲ್ಲಿ ಉತ್ತಮವಾದ ಫಲಿತಾಂಶ ಹಾಗೂ ವಿಚಾರಗಳು ಮೂಡಿಬರಲಿ ಎಂದು ಶಾಸಕ ಹರೀಶ್ ಸ್ಪರ್ಧಾಳುಗಳಿಗೆ ಶುಭ ಹಾರೈಸಿದರು.

ಉಪನ್ಯಾಸಕರಾದ ರಾಜೇಶ್ವರಿ, ಯಜ್ಞಶ್ರೀ, ಎಸ್.ಕೆ.ಪವಾರ್ ತೀರ್ಪುಗಾರ ರಾಗಿ ಹಾಗೂ ಮಹೇಶ್ ದೊಡ್ಡಮನಿ ಮತ್ತು ನಾಗ ರಾಜ್ ಎಸ್ ಸಂಯೋಜಕರಾಗಿ ಕಾರ್ಯನಿರ್ವಹಿಸಿದರು. ಉದ್ಘಾಟನಾ ಸಮಾ ರಂಭದಲ್ಲಿ ಚನ್ನಗಿರಿ ಶಾಸಕ ಬಸವರಾಜು ವಿ. ಶಿವಗಂಗಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗೆ ಮನವಿಗಳ ಮಹಾಪೂರ

ದಾವಣಗೆರೆ, ಜ.5- ಭಾರತೀಯ ರೈತ ಒಕ್ಕೂಟ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಡಿಎಸ್‌ಎಸ್ ಸೇರಿದಂತೆ ವಿವಿಧ ಕನ್ನಡಪರ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ಮಳೆಗಾಲದಲ್ಲಿ ಮಾತ್ರ ಭದ್ರಾ ಮೇಲ್ದಂಡೆ ಯೋಜನೆಯಡಿ ನೀರು ಹರಿಸಬೇಕು. ಆದರೆ ವಾಣಿ ವಿಲಾಸ ಸಾಗರ ಭರ್ತಿಯಾಗಿ ಕೋಡಿ ಬಿದ್ದಿದ್ದರೂ, ಇನ್ನೂ ಪ್ರತಿನಿತ್ಯ 700 ಕ್ಯೂಸೆಕ್ಸ್ ನೀರು ಬಿಡುತ್ತಿದ್ದು, ಕೂಡಲೇ ಸ್ಥಗಿತಗೊಳಿಸಬೇಕೆಂದು ಭಾರತೀಯ ರೈತ ಒಕ್ಕೂಟದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ದಾವಣಗೆರೆಯಲ್ಲಿ ವಿಶ್ವ ಕನ್ನಡ ಸಮ್ಮೇಳನ ನಡೆಸಬೇಕೆಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳು ಸಿಎಂಗೆ ಮನವಿ ಸಲ್ಲಿಸಿದರು. ಒಳಮೀಸಲಾತಿ ಜಾರಿಗೊಳಿಸಬೇಕೆಂದು ಒತ್ತಾಯಿಸಿ ಡಿಎಸ್‌ಎಸ್, ದಲಿತ ಮುಖಂಡರು ಸಿಎಂಗೆ ಮನವಿ ಸಲ್ಲಿಸಿದರು. ಹೀಗೆ ಸಾರ್ವಜನಿಕರಿಂದ ಸಾಕಷ್ಟು ಮನವಿಗಳು ಸಿಎಂಗೆ ಸಲ್ಲಿಕೆಯಾದವು.

# ಕಾನೂನು ಪದವೀಧರರಿಗೆ ತರಬೇತಿ ಭತ್ಯೆ

ದಾವಣಗೆರೆ, ಜ. 5 - ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣದಲ್ಲಿ ತರಬೇತಿ ಭತ್ಯೆ ನೀಡಲು ಅರ್ಹ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಠಡಿ 46, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಕರೂರು ರಸ್ತೆ, ದಾವಣಗೆರೆ - 577006 ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು ಇದೇ ದಿನಾಂಕ 18 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ನಾಳೆ ಆಶಾ ಕಾರ್ಯಕರ್ತೆಯರ ಅನಿರ್ದಿಷ್ಟಾವಧಿ ಮುಷ್ಕರ

ದಾವಣಗೆರೆ, ಜ.5- ಆಶಾ ಕಾರ್ಯಕರ್ತೆಯರಿಗೆ ಮಾಸಿಕ 15 ಸಾವಿರ ರೂ. ನಿಶ್ಚಿತ ಗೌರವ ಧನ ನೀಡಬೇಕೆಂಬುದು ಸೇರಿದಂತೆ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ನಾಡಿದ್ದು ದಿನಾಂಕ 7 ರಂದು ಬೆಳಿಗ್ಗೆ 10.30 ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ರಾಜ್ಯಮಟ್ಟದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಮಂಜುನಾಥ್ ಕುಕ್ಕುವಾಡ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಆಶಾ ಕಾರ್ಯಕರ್ತೆಯರು ಹಗಲಿರುಳು ಬಡಜನರಿಗೆ ಆರೋಗ್ಯ ಸೇವೆ ಸಲ್ಲಿಸುತ್ತಾ ಆರೋಗ್ಯ ಇಲಾಖೆಯಲ್ಲಿ ಶ್ರಮಿಸುತ್ತಿದ್ದಾರೆ. ರಾಜ್ಯದಲ್ಲಿ ಸುಮಾರು 42 ಸಾವಿರ ಆಶಾ ಕಾರ್ಯಕರ್ತೆಯರು ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಕೂಡಲೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಆಶಾ ಕಾರ್ಯಕರ್ತೆಯರಿಗೆ ಇರುವ ಗೌರವ ಧನ ಮತ್ತು ಪ್ರೋತ್ಸಾಹ ಧನ ಸೇರಿಸಿ ಒಟ್ಟು 15 ಸಾವಿರ ರೂ. ಮಾಸಿಕ ಗೌರವ ಧನ ನಿಗದಿ ಮಾಡಬೇಕು.

ಮೊಬೈಲ್ ಡಾಟಾ ಒದಗಿಸಿ, ಮೊಬೈಲ್ ಕೆಲಸಗಳಿಗೆ ಪ್ರೋತ್ಸಾಹ ಧನ ನಿಗದಿ ಮಾಡಬೇಕು. ಕಾರ್ಯಕರ್ತೆಯರನ್ನು ಕಾರ್ಮಿಕರೆಂದು ಪರಿಗಣಿಸಿ, ಕನಿಷ್ಠ ವೇತನ, ಗ್ರ್ಯಾಜ್ಯುಟಿ, ಪಿಎಫ್, ಇಎಸ್‌ಐ ಸೌಲಭ್ಯ ನೀಡಬೇಕೆಂದು ಒತ್ತಾಯಿಸಿ ಬೆಂಗಳೂರಿನಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದರು. ಪತ್ರಿಕಾಗೋಷ್ಠಿಯಲ್ಲಿ ತಿಪ್ಪೇಸ್ವಾಮಿ, ನಾಗವೇಣಿ, ಪರ್ವಿನ್ ಬಾನು, ಬಿ. ಹಾಲಮ್ಮ, ಕರಿಬಸಮ್ಮ , ಇಂದಿರಾ, ಹಳದಮ್ಮ ಮತ್ತಿತರರಿದ್ದರು.

# ರೈತರಿಗೆ ಹೈನುಗಾರಿಕೆ ತರಬೇತಿ

ದಾವಣಗೆರೆ, ಜ. 5 - ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ, ಆಧುನಿಕ ಹೈನುಗಾರಿಕೆ, ಕೋಳಿ ಸಾಕಾಣಿಕೆ ತರಬೇತಿ ನಡೆಯಲಿದೆ. ನಾಳೆ ದಿನಾಂಕ 6 ಮತ್ತು 7 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ, 9 ಮತ್ತು 10 ರಂದು ಆಧುನಿಕ ಹೈನುಗಾರಿಕೆ, 13 ಮತ್ತು 14 ರಂದು ಕೋಳಿ ಸಾಕಾಣಿಕೆ ತರಬೇತಿ ಏರ್ಪಾಡಾಗಿದೆ. ವಿವರಕ್ಕೆ ಸಂಪರ್ಕಿಸಿ : 08192-233787.

# ರಾಹುಲ್ ಕೆಲಸ ಕಲಿಯುತ್ತಿದ್ದಾರೆ, ಪ್ರಿಯಾಂಕಾ ಪ್ರತಿಭಾವಂತೆ





ಕರಣ್ ಸಿಂಗ್

ನವದೆಹಲಿ, ಜ.5 - ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕೆಲಸ ಕಲಿಯುತ್ತಿದ್ದಾರೆ ಹಾಗೂ ಸುಧಾರಿಸುತ್ತಿದ್ದಾರೆ. ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರ ಅವರು ಪ್ರತಿಭಾವಂತೆ ಎಂದು ಹಿರಿಯ ರಾಜಕಾರಣಿ ಹಾಗೂ ಮಾಜಿ ಕೇಂದ್ರ ಸಚಿವ ಕರಣ್ ಸಿಂಗ್ ಹೇಳಿದ್ದಾರೆ.

ಖಾಸಗಿ ಸುದ್ದಿ ಸಂಸ್ಥೆಯೊಂದಕ್ಕೆ ಸಂದರ್ಶನ ನೀಡಿರುವ 83 ವರ್ಷದ ಸಿಂಗ್, ನೆಹರು - ಗಾಂಧಿ ಕುಟುಂಬದ ಜೊತೆ ನಾಲ್ಕು ದಶಕಗಳಿಂದ ಹೊಂದಿರುವ ತಮ್ಮ ನಂಟಿನ ಕುರಿತು ಮಾತನಾಡಿದ್ದಾರೆ. ಕರಣ್ ಸಿಂಗ್ ಅವರು ಜಮ್ಮು ಮತ್ತು ಕಾಶ್ಮೀರದ 'ಸದರ್ ಎ ರಿಯಾಸತ್' (ಸಂವಿಧಾನಿಕ ಮುಖ್ಯಸ್ಥ) ಸಹ ಆಗಿದ್ದಾರೆ.

ಹರಿಯಾಣ ಮತ್ತು ಮಹಾರಾಷ್ಟ್ರ ಚುನಾವಣೆಗಳ ವೈಫಲದ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಎದುರಿಸುತ್ತಿರುವ ಕಠಿಣ ಪ್ರಶ್ನೆಗಳ ಕುರಿತು ಮಾತನಾಡಿರುವ ಸಿಂಗ್, ರಾಹುಲ್ ಒಳ್ಳೆಯ ಯುವಕ ಅವರ ಬಗ್ಗೆ ಮೆಚ್ಚುಗೆ ಇದೆ ಎಂದಿದ್ದಾರೆ. ರಾಹುಲ್ ಗಾಂಧಿ ಮೊದಲು ತಮ್ಮ ನಿಕಟ ಸಂಪರ್ಕದಲ್ಲಿದ್ದರು, ಈಗ ಅಷ್ಟು ಸಂಪರ್ಕದಲ್ಲಿ ಇಲ್ಲ. ಪ್ರತಿ ವರ್ಷ ರಾಹುಲ್ ಗಾಂಧಿ ಸುಧಾರಿಸುತ್ತಿದ್ದಾರೆ, ಅವರು ಕೆಲಸ ಕಲಿಯುತ್ತಿದ್ದಾರೆ ಎಂದು ನಾನು ಭಾವಿಸಿದ್ದೇನೆ ಎಂದು ಸಿಂಗ್ ತಿಳಿಸಿದ್ದಾರೆ. ರಾಹುಲ್ ಗಾಂಧಿ ಪ್ರಧಾನಮಂತ್ರಿಯಾಗಲಿದ್ದಾರೆಯೇ ಅಥವಾ ಇಲ್ಲವೇ ಎಂಬುದು ಮುಖ್ಯ ವಿಷಯವಲ್ಲ. ಆದರೆ ಅವರು ಒಳ್ಳೆಯ ಸಾಮರ್ಥ್ಯ ಹೊಂದಿದ್ದಾರೆ ಮತ್ತು ಆ ಹುದ್ದೆಗೆ ಸಿದ್ಧವಾಗಲು ಸಮಯ ಇದೆ ಎಂದು ಸಿಂಗ್ ತಿಳಿಸಿದ್ದಾರೆ. ಪ್ರಿಯಾಂಕಾ ಗಾಂಧಿ ವಾದ್ರ ಅವರನ್ನು ಬಾಲ್ಯದಿಂದಲೂ ನೋಡಿದ್ದೇನೆ. ಅವರು ಪ್ರತಿಭಾವಂತೆಯಾಗಿದ್ದಾರೆ ಎಂದೂ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಎಸ್ಸೆಸ್ಸೆಲ್ಸಿ ಉತ್ತಮ ಫಲಿತಾಂಶಕ್ಕೆ ಶಿಕ್ಷಕರು, ವಿದ್ಯಾರ್ಥಿಗಳು ಶ್ರಮಿಸಬೇಕು

## ಎರೆಹೊಸಳ್ಳಿ ಗ್ರಾಮದಲ್ಲಿನ ಕಾರ್ಯಕ್ರಮದಲ್ಲಿ ಶಾಸಕ ಬಿ.ಪಿ. ಹರೀಶ್ ಹಿತನುಡಿ



ಮಲೇಬೆನ್ನೂರು, ಜ. 5- ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ದಾವಣಗೆರೆ ಜಿಲ್ಲೆಯು 23ನೇ ಸ್ಥಾನದಲ್ಲಿದೆ. ಅದನ್ನು 10ನೇ ಸ್ಥಾನದೊಳಗೆ ಬರುವಂಥಹ ಮಹತಕ್ಕಾರ್ಯಕ್ಕೆ ಶಿಕ್ಷಕರು, ವಿದ್ಯಾರ್ಥಿಗಳು ಶ್ರಮಿಸಬೇಕೆಂದು ಶಾಸಕ ಬಿ.ಪಿ. ಹರೀಶ್ ಹೇಳಿದರು.

ಶುಕ್ರವಾರ ಸಂಜೆ ಎರೆಹೊಸಳ್ಳಿ ಗ್ರಾಮದಲ್ಲಿನ ಹೇಮ-ವೇಮ ಸದ್ಬೋದನಾ ವಿದ್ಯಾಪೀಠ, ಜ್ಞಾನಾಕ್ಷಿ ವಿದ್ಯಾನಿಕೇತನ ಮಹಾಯೋಗಿ ವೇಮನ ಪಿ.ಯು ಕಾಲೇಜಿನ 13ನೇ ವರ್ಷದ ವಾರ್ಷಿಕೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಜಿಲ್ಲೆಯಲ್ಲಿ ಸುಧಾರಿಸಲು ವಿದ್ಯಾರ್ಥಿಗಳ ಪಾಲಕರ ಸಹಕಾರ ಬಹಳ ಮುಖ್ಯ ಎಂದ ಹರೀಶ್ ಅವರು, 2008 ರಲ್ಲಿ ನಾನು ಶಾಸಕನಾಗಿದ್ದ ಸಮಯದಲ್ಲಿ ಎರೆಹೊಸಳ್ಳಿಯಲ್ಲಿ ಹೇಮ-ವೇಮಾನಂದ ಶ್ರೀಗಳ ರೆಡ್ಡಿ ಪೀಠ ಸ್ಥಾಪನೆಯಾಗಿರುವುದು ಹೆಮ್ಮೆಯ ಸಂಗತಿಯಾಗಿದೆ.

ಮಕ್ಕಳು ಆಟ-ಪಾಠದ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಲೆ ಓದು-ಬರಹದಲ್ಲಿ ಅತ್ಯುತ್ತಮ ಸ್ಥಾನ ಪಡೆಯುವುದರೊಂದಿಗೆ ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ತಮ್ಮ ಛಾಪು ಮೂಡಿಸಬೇಕು. ಅದಕ್ಕಾಗಿ ನಿತ್ಯ ಅಧ್ಯಯನ ಮಾಡಬೇಕು. ಯಾವುದೇ ಒತ್ತಡಗಳಿಂದ ಮಾನಸಿಕವಾಗಿ ಕುಗ್ಗದೆ.ಹಿಗ್ಗದೆ ಉತ್ತಮ ಫಲಿತಾಂಶಸದತ್ತ ಗುರಿಹೊಂದಬೇಕೆಂದು ವಿದ್ಯಾಥಿಗಳಿಗೆ ಹರೀಶ್ ಕಿವಿ ಮಾತು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ದಾವಣಗೆರೆ ಜಿಲ್ಲೆಯ ಮೀಸಲು ಪೊಲೀಸ್ ಪಡೆಯ ಡಿವೈಎಸ್‌ಪಿ ಪ್ರಕಾಶ್ ಮಾತನಾಡಿ, ಜೇನು ನೊಣವು ಯಾವಾಗಲೂ ಹೂವಿನ ಮೇಲೆ ಕುಳಿತು ಮಕರಂದವನ್ನು ಮಾತ್ರ ಹಿರುತ್ತದೆ, ಶ್ರೀಗಂಧದ ಮರದ ಸುತ್ತ ಅದೇಷ್ಟೂ ವಿಷ ಸರ್ಪಗಳಿದ್ದರೂ ಶ್ರೀಗಂಧವು ವಿಷವಾಗುವುದಿಲ್ಲ. ಹಾಗೆಯೇ ಮಕ್ಕಳು ಡಾ। ಅಬ್ದುಲ್ ಕಲಾಮ್ ಹೇಳಿದಂತೆ ಭಾರತದ ಉಜ್ವಲ ಭವಿಷ್ಯಕ್ಕಾಗಿ ದುಡಿಯುವ ಮಹಾ ಜ್ಞಾನಿಗಳಾಗಬೇಕು.

ಈಗಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿ ಗಳು ತಮಗೆ ಸಿಕ್ಕಿರುವ ಉತ್ತಮ ಸಮಯವನ್ನು ಹಾಳುಮಾಡದೆ. ಶಿಕ್ಷಕರ ಮಾರ್ಗದರ್ಶನದಲ್ಲಿ ಓದು-ಬರಹವನ್ನು ಹೆಚ್ಚಿಸಿಕೊಂಡು. ಜ್ಞಾನವಂತರಾಗಲು ಮುಂದಾಗಬೇಕು. ಪಾಲಕರು ತಮ್ಮ ಮಕ್ಕಳು ವಯೋಮಿತಿಯನ್ನು ಮೀರಿ ಟ್ರ್ಯಾಕ್ಟರ್, ಬೈಕ್, ಕಾರ್ ಓಡಿಸುವುದನ್ನು ಕಲಿಸಲು ಮುಂದಾಗಬಾರದು. ಅವರು ಓದು ಬರಹ ಮುಗಿಸಿ ತಮ್ಮ ಸ್ವಂತ ದುಡಿಮೆಯಲ್ಲಿ ಗಳಿಸುವಂತಹ ಮಾರ್ಗಕ್ಕೆ ಮುಂದುವರೆಯಲು ಮಾರ್ಗದರ್ಶನ ಮಾಡಬೇಕೆಂದು ಪಾಲಕರಿಗೆ ಕರೆನೀಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಎರೆಹೊಸಳ್ಳಿ ಗ್ರಾಮದ ಮಹಾಯೋಗಿ ವೇಮನ ಮಠದ ವೇಮಾನಂದ ಸ್ವಾಮಿಜಿ, ವನಶ್ರೀ ಸಂಸ್ಥಾನ ಮಠದ ಡಾ. ಬಸವಕುಮಾರ ಸ್ವಾಮೀಜಿ ಆರ್ಶಿವಚನ ನೀಡಿದರು.

ಸಂಸ್ಥೆಯ ಹಿರಿಯರಾದ ಬಿಳಸನೂರು ರಂಗಪ್ಪ ರೆಡ್ಡಿ, ಆಡಳಿತಾಧಿಕಾರಿ ಸುಭಾಷ ಹೆಚ್.ಪಿ, ಪ್ರಾಂಶುಪಾಲರಾದ ಕುಂಜುರಾಣಿ, ಮುಖ್ಯೋಪಾಧ್ಯಾಯ ಬಸವರಾಜ್ ಮತ್ತು ಇತರರು ಭಾಗವಹಿಸಿದ್ದರು.

# ಕೆಲವು ಕುಚೋದ್ಯ ಶಕ್ತಿಗಳು ಅಂಗನವಾಡಿ ಕಾರ್ಯಕರ್ತೆಯರ ಸಂಘಟನೆ ಬೇರ್ಪಡಿಸಿ, ಬಣ ರಾಜಕೀಯ ಮಾಡುತ್ತಿವೆ



## ಕರ್ನಾಟಕ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರ ಫೆಡರೇಷನ್ ಅಧ್ಯಕ್ಷ ಅಮ್ಜದ್ ಖಾನ್ ಅಸಮಾಧಾನ

ದಾವಣಗೆರೆ, ಜ. 5- ದಾವಣಗೆರೆಯಲ್ಲಿ ಕೆಲವು ಕುಚೋದ್ಯ ಶಕ್ತಿಗಳು ಅಂಗನವಾಡಿ ಕಾರ್ಯಕರ್ತೆಯರ ಸಂಘಟನೆ ಬೇರ್ಪಡಿಸಿ, ಬಣ ರಾಜಕೀಯ ಮಾಡುತ್ತಿವೆ ಎಂದು ಕರ್ನಾಟಕ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರ ಫೆಡರೇಷನ್ ಅಧ್ಯಕ್ಷ ಅಮ್ಜದ್ ಖಾನ್ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಕಾಂ. ಪಂಪಾಪತಿ ಭವನದಲ್ಲಿ ಮೊನ್ನೆ ಏರ್ಪಾಡಾಗಿದ್ದ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರ ಫೆಡರೇಷನ್‌ನ ರಾಜ್ಯ ಸಮಿತಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಚ್.ಕೆ. ರಾಮಚಂದ್ರಪ್ಪ ಎಂದರೇನೆ ಸಿಪಿಐ, ಎಐಟಿಯುಸಿ ಸಂಘಟನೆ, ಸಂಘದಲ್ಲಿ ಬಣ ಸೃಷ್ಟಿಸಿ ಅವರ ಹೆಸರಿಗೆ ಮಸಿ ಬಳಿಯುವ ಹುನ್ನಾರ ನಡೆದಿದೆ. ದುಸ್ಸಾಹಸ ಮಾಡಲಾಗಿದೆ. ಇತರೆ ರಾಜಕೀಯ ಪಕ್ಷಗಳು ಇದರ ಲಾಭ ಪಡೆಯಲು ಮುಂದಾಗಿವೆ ಎಂದು ವಿಷಾದಿಸಿದರು.

105 ವರ್ಷದ ಎಐಟಿಯುಸಿ ಸಂಘಟನೆ ಚಾರಿತ್ರಿಕ ಹೋರಾಟದಲ್ಲಿ ನಿರತವಾಗಿದೆ. ದೇಶದ ಸ್ವಾತಂತ್ರ್ಯ, ಸಮಗ್ರತೆ ಏಕತೆಗಾಗಿ ಮುಡುಪಿಟ್ಟ ಏಕೈಕ ಸಂಘಟನೆಯಾಗಿದೆ. ದುಡಿಯುವ ಜನರ ಪರವಾಗಿ ಕೆಲಸ ಮಾಡಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಮಿಕ ವಿರೋಧಿ ನೀತಿಗಳನ್ನು ರೂಪಿಸುತ್ತಿವೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮಹಿಳಾ ವಿರೋಧಿಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತನ್ನ ಸಾಮಂತ ಹಾಗೂ ಬಂಡವಾಳಶಾಹಿ ಕಂಪನಿಗಳ ಪರ ಕೆಲಸ ಮಾಡುತ್ತಿವೆ. ಪ್ರಾಮಾಣಿಕವಾಗಿ ದುಡಿಯುವ ಕಾರ್ಮಿಕರ ಶ್ರಮವನ್ನು ಶೋಷಣೆ ಮಾಡುತ್ತಿವೆ. ಕಾರ್ಮಿಕರ ಪರ ರಕ್ಷಣಾತ್ಮಕ ನಿರ್ಣಯಗಳ ಬದಲಾಗಿ ಏಕಸ್ವಾಮ್ಯ ಉದ್ಯಮದ ಪರವಾಗಿ ಕೆಲಸ ಮಾಡುತ್ತಿವೆ ಎಂದು ಹೇಳಿದರು.

ರಾಜ್ಯ ಉಪಾಧ್ಯಕ್ಷ ಹೆಚ್.ಜಿ. ಉಮೇಶ್ ಆವರಗೆರೆ ಮಾತನಾಡಿ,, ಸಂಘಟನೆ ಹೆಸರಿನಲ್ಲಿ ವ್ಯಕ್ತಿ ಪೂಜೆ ಮಾಡುವ ಬಣ ರಾಜಕಾರಣದ ಸವಾಲನ್ನು ಕಾರ್ಮಿಕರು ಸ್ವೀಕರಿಸಬೇಕಿದೆ. ನಮ್ಮ ನಾಯಕರ ಹೆಸರನ್ನು ದುರ್ಬಳಕೆ ಮಾಡಿ ಸಂಘ ವಿಘಟನೆ ಮಾಡುವ ಪ್ರಯತ್ನ ನಡೆದಿರುವುದು ಅಕ್ಷಮ್ಯ ಎಂದರು.

ದುರಾಸೆಯಿಂದ ಕೆಟ್ಟ ಆಲೋಚನೆ ಇಟ್ಟುಕೊಂಡು ಕೆಲಸ ಮಾಡುವ ವ್ಯಕ್ತಿಗಳನ್ನು ಸಂಘಟನೆಯ ರಾಜ್ಯ ಸಮಿತಿ ಉಚ್ಚಾಟನೆ ಮಾಡಿದೆ. ಪ್ರತಿಭಟನೆ, ಹೋರಾಟಕ್ಕೆ ಬಾರದೇ ಕೇವಲ ಹೆಸರಿಗೆ ಬರುವ ನಾಯಕರು ನಮ್ಮ ಸಂಘಟನೆಗೆ ಬೇಕಾಗಿಲ್ಲ ಎಂದು ಹೇಳಿದರು.

ಬ್ಯಾಂಕ್ ನೌಕರರ ಸಂಘದ ಕೆ. ರಾಘವೇಂದ್ರ ನಾಯರಿ ಮಾತನಾಡಿ, ಕಾರ್ಮಿಕರ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ಮಾಡುವ ಸಂಘಟನೆಗಳು ಸೈದ್ಧಾಂತಿಕವಾಗಿ ಬೆಳೆಯಬೇಕೇ ವಿನಃ ವ್ಯಕ್ತಿ ಆಧಾರಿತ ಆಗಬಾರದು ಎಂದು ಹೇಳಿದರು.

ದಾವಣಗೆರೆ ರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದ ಸ್ಥಳ, ಎಐಟಿಯುಸಿ, ಸಿಪಿಐ ಪಕ್ಷಗಳು ತಮ್ಮನ್ನು ತಾವು ಯಾವತ್ತೂ ರಾಜಕೀಯ ನಾಯಕರಂತೆ ಭಾವಿಸಲಿಲ್ಲ. ಕಾರ್ಮಿಕರ ಪರವಾಗಿ ಕೆಲಸ ಮಾಡುತ್ತಾ, ಅವರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೆಲಸ ಮಾಡಿದರು. ಪಕ್ಷದ ಹೆಚ್.ಕೆ. ರಾಮಚಂದ್ರಪ್ಪ ಅವರಿಗೆ ಅಧಿಕಾರ ದಾಹ ಇರಲಿಲ್ಲ ಎಂದರು. ಯಾವುದೇ ಶಕ್ತಿಗಳು ನಮ್ಮ ಹೋರಾಟದ ದಿಕ್ಕನ್ನು ಬದಲಿಸಲು ಸಾಧ್ಯವಿಲ್ಲ. ಆದಕಾರಣ ಯಾವುದೇ ಕಾರಣಕ್ಕೂ ಕಾರ್ಮಿಕರು ಎದೆಗುಂದದೆ ಮುತುವರ್ಜಿಯಿಂದ ಕೆಲಸ ಮಾಡಿ ಎಂದು ಹೇಳಿದರು.

ರಾಜ್ಯ ಸಮಿತಿ ಸಭೆಯಲ್ಲಿ ಮುಖಂಡರಾದ ಆವರಗೆರೆ ಚಂದ್ರು, ರತ್ನಾ ಶಿರೂರು, ಎಂ. ಜಯಮ್ಮ, ಗಿರಿಜಾ, ಎಸ್.ಮಲ್ಲಮ್ಮ, ಮಹ್ಮದ್ ಭಾಷಾ ಇತರರಿದ್ದರು.

## ನಾ.ಡಿಸೋಜ.



ಅಜ್ಞಾತ ವಾಯಿತು ಈ ನೆಲ ಈ ಜಲದ
ಕನಸೊಂದು
ತಬ್ಬಲಿಯಾಗಿದೆ ಹೂವ ಚಲ್ಲುತ ಬಂದ ನಗೆ
ಹನಿಯೊಂದು
ದ್ವೀಪದ ನಡುವೆ ನಿಂತ ಜನ ಮೀನುಗಾರ ದೂರೆ
ಭೇಟಿಗೆಂದು
ಆಸರೆ ಯಾರು ಜೀವ ಕಳೆಯ ಮಹಾಸತಿಗೆ

ಉಸಿರು ನಿಲ್ಲಿಸಿದ ಬೆಟ್ಟಪುರದ ದಿಟ್ಟ ಮಕ್ಕಳ ಒಡೆಯ ನಾ ಡಿಸೋಜ
ಕಾಡಿನ ಬೆಂಕಿಯಿಂದ ಕನ್ನಡಕ್ಕೆ ರಜತ ಬಳುವಳಿಯನಿತ್ತ ಡಿಸೋಜ
ಕನ್ನಡದ ಸಾಹಿತ್ಯದಲ್ಲಿ ಪರಿಸರ ಪ್ರಜ್ಞೆ
ಕನ್ನಡಕ್ಕೆ ಜೀವಕಳೆಯ ನೆಲೆ

ಹಾರುವ ಹಕ್ಕಿಗೆ ಚಿಗುರೆಲೆಯ ತೋರಣ ಕಟ್ಟಿದವರು
ಉಸಿರಿರುವವರೆಗೆ ಕನ್ನಡದ ತೇರನೆಳೆದವರು
ಮುಳುಗಡೆಯ ಬದುಕಿಗೆ ಒಳಿತನ್ನು ಮಾಡಲು ಬಂದವರು
ತಿರುಗೋಡಿನ ಮಕ್ಕಳಿಗೆ ಆಸರೆಯಾದವರು

- ಬಸವರಾಜ. ಕರುವಿನ ಬಸವನಾಳು.

## ರಾಣೇಬೆನ್ನೂರು : ರಸ್ತೆ ಕಾಮಗಾರಿಗೆ ಶಾಸಕ ಕೋಳಿವಾಡ ಚಾಲನೆ



ರಾಣೇಬೆನ್ನೂರು, ಜ.5 - ಇಲ್ಲಿನ ಮೃತ್ಯುಂಜಯ ನಗರದಲ್ಲಿ, ತಮ್ಮ ರೂ. 60 ಲಕ್ಷ ಅನುದಾನದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಪ್ರಕಾಶ ಕೋಳಿವಾಡ ಭೂಮಿಪೂಜೆ ನೆರವೇರಿಸಿದರು. ನಗರಸಭೆ ಸದಸ್ಯರಾದ ಪುಟ್ಟಪ್ಪ ಮರಿಯಮ್ಮನವರ, ಮಂಜುಳಾ ಹತ್ತಿ ಜೊತೆಗಿದ್ದರು.





## ಕೆಟಿಜೆ ನಗರದಲ್ಲಿ ಕಾರ್ತಿಕೋತ್ಸವ

ದಾವಣಗೆರೆ,ಜ. 5- ಕೆಟಿಜೆ ನಗರ 2ನೇ ಕ್ರಾಸ್, 2ನೇ ಮೇನ್‌ನಲ್ಲಿ ಶ್ರೀ ಗುರು ರೇವಣಸಿದ್ದೇಶ್ವರ, ಶ್ರೀ ಆಂಜನೇಯ ಸ್ವಾಮಿ, ಶ್ರೀ ಮಹಾಗಣಪತಿ, ಶ್ರೀ ಶನೈಶ್ಚರ, ಶ್ರೀ ನವಗ್ರಹ ಸನ್ನಿಧಿ, ಶ್ರೀ ದುರ್ಗಾದೇವಿ ದೇವಸ್ಥಾನ ಸೇವಾ ಸಮಿತಿ ವತಿಯಿಂದ ಕಡೇ ಕಾರ್ತಿಕ ದೀಪೋತ್ಸವವು ಈಚೆಗೆ ನಡೆಯಿತು.

ದೇವಸ್ಥಾನದ ಆವರಣದಲ್ಲಿ ಶ್ರೀ ಕ್ಷೇತ್ರ ಆವರಗೊಳ್ಳ ಪುರವರ್ಗ ಹಿರೇಮಠದ ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ ನಡೆಸಿಕೊಟ್ಟರು.

## ಪ್ರವಚನದಲ್ಲಿ ಸಿದ್ದೇಶ್ವರ ಶ್ರೀಗಳಿಗೆ 'ಗುರು ನಮನ'



ದಾವಣಗೆರೆ, ಜ. 5- ಭಾರತ ವಿಕಾಸ ಪರಿಷದ್ ಗೌತಮ ಶಾಖೆ ವತಿಯಿಂದ ನಗರದ ಚೌಕಿಪೇಟೆಯ ಶ್ರೀ ಗುರು ಬಕ್ಕೇಶ್ವರ ಮಹಾಸ್ವಾಮಿ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ ಶ್ರೀ ಶರಣ ಬಸವೇಶ್ವರರ ಪುರಾಣ ಕಾರ್ಯಕ್ರಮದ ಸಂದರ್ಭದಲ್ಲಿ ಜ್ಞಾನಯೋಗಿ ಲಿಂ. ಶ್ರೀ ಸಿದ್ದೇಶ್ವರ ಸ್ವಾಮಿಗಳವರಿಗೆ ದೀಪ ಬೆಳಗಿಸುವ ಮೂಲಕ ದೀಪ ನಮನದೊಂದಿಗೆ ಭಕ್ತಿ ಸಮರ್ಪಣೆಯ 'ಗುರು ನಮನ' ಕಾರ್ಯಕ್ರಮ ನಡೆಸಲಾಯಿತು.

ಈ ಸಂದರ್ಭದಲ್ಲಿ ಭಾರತ ವಿಕಾಸ ಪರಿಷದ್ ಅಧ್ಯಕ್ಷ ಅಜ್ಜಂಪುರ ಶೆಟ್ರು ವಿಜಯಕುಮಾರ್, ಕಾರ್ಯದರ್ಶಿ ಮಧುಕರ್, ಬೆಳಗಾವಿ ಬಸವರಾಜಪ್ಪ, ವಿಶ್ವನಾಥ್, ಗುರುಬಸವರಾಜ್, ಬುಳ್ಳಾಪುರ ರವಿ, ಹಂಸಬಾವಿ ಕೊಟ್ರೇಶ್, ಶಾಂತಮ್ಮ ತಿಪ್ಪಣ್ಣ, ನೇತ್ರಾ ಮಧುಕರ್, ಸುರೇಶ್, ಪ್ರದೀಪ್, ಪುರಾಣ ಸೇವಾ ಸಮಿತಿ ಮೃತ್ಯುಂಜಯ ಅಜ್ಜಂಪುರ ಶೆಟ್ರು, ರುದ್ರೇಶ್, ಪಂಚಾಕ್ಷರಪ್ಪ, ಚನ್ನವೀರಯ್ಯ ಶಾಸ್ತ್ರಿಗಳು, ಶಿವಾನಂದ ಗುರೂಜಿ ಉಪಸ್ಥಿತರಿದ್ದರು. ಶೀಲಾನಾಯಕ್ ಸಂಗೀತ ಸೇವೆ ನಡೆಸಿಕೊಟ್ಟರು.

# ಸಂವಿಧಾನದ ಉಳಿವು, ರಕ್ಷಣೆ ನಮ್ಮೆಲ್ಲರ ಕರ್ತವ್ಯ

(1ನೇ ಪುಟದಿಂದ) ಮುಖ್ಯಮಂತ್ರಿ ಆಗಲು ಸಾಧ್ಯವಾಯಿತು. ಸಂವಿಧಾನ ರಕ್ಷಿಸಿ, ಉಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.

ಪ್ರಜಾಪ್ರಭುತ್ವ ಒಪ್ಪಿ ದೇಶದಲ್ಲಿ ಆಡಳಿತ ನಡೆಸಲಾಗುತ್ತಿದೆ. ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ, ಎಲ್ಲಾ ವ್ಯಕ್ತಿಗಳಿಗೆ ಆರ್ಥಿಕ, ರಾಜಕೀಯ ಹಾಗೂ ಸಾಮಾಜಿಕ ಸಮಾನತೆ ದೊರಕಬೇಕು ಎಂಬುವುದು ಡಾ.ಅಂಬೇಡ್ಕರ್ ಆಶಯವಾಗಿತ್ತು. ಸಂವಿಧಾನದ ಈ ಸಾರ ಪ್ರತಿಯೊಬ್ಬರಿಗೂ ಅರ್ಥವಾಗಬೇಕು. ಇದರ ಹಿನ್ನೆಲೆಯಲ್ಲಿ ಸರ್ಕಾರ ಪ್ರತಿ ಶಾಲೆಯಲ್ಲಿ ಸಂವಿಧಾನ ಓದು ಕಾರ್ಯಕ್ರಮ ಜಾರಿ ಮಾಡಿದೆ. ಮಕ್ಕಳಿಗೆ ಸಂವಿಧಾನದ ಪೀಠಿಕೆ ಬಗ್ಗೆ ಪರಿಚಯ ಮಾಡಿಕೊಡಲಾಗುತ್ತಿದೆ. ಅಂಬೇಡ್ಕರ್ ಅವರ ಆರ್ಥಿಕ ಸಮಾನತೆಯ ಆಶಯವನ್ನು ಈಡೇರಿಸುವ ದೃಷ್ಟಿಯಿಂದ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ ಎಂದು ಹೇಳಿದರು.

ರಾಜ್ಯದಲ್ಲಿ 1.62 ಲಕ್ಷ ಯುವಕ ಯುವತಿಯರಿಗೆ ಯುವನಿಧಿ ಯೋಜನೆಯಡಿ ರೂ. 216 ಕೋಟಿ ನಿರುದ್ಯೋಗ ಭತ್ಯೆಯನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಇದರೊಂದಿಗೆ ಯುವ ಜನರಿಗೆ ಕೌಶಲ್ಯ ತರಬೇತಿ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದರು.

ಇದೇ ವೇಳೆ ಯುವ ನಿಧಿ ಯೋಜನೆ ಉದ್ಘಾಟಿಸಲಾಯಿತು. ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾಗೂ ರಾಜ್ಯ ಎನ್.ಎಸ್.ಎಸ್ ಘಟಕದ ಕ್ಯಾಲೆಂಡರನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಶಾಸಕರುಗಳಾದ ಕೆ.ಎಸ್.ಬಸವಂತಪ್ಪ, ಬಸವರಾಜು ವಿ ಶಿವಗಂಗಾ, ಬಿ.ದೇವೇಂದ್ರಪ್ಪ, ಬಿ.ಪಿ. ಹರೀಶ್, ಶಾಂತನಗೌಡ.ಡಿ.ಜಿ. ವಿಧಾನ ಪರಿಷತ್ ಸದಸ್ಯರಾದ ಕೆ.ಅಬ್ದುಲ್ ಜಬ್ಬಾರ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್.ಕೆ, ರಾಜ್ಯ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ್ ನಾಯ್ಕ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಾರ್ಯದರ್ಶಿ ರಂದೀಪ್.ಡಿ, ಪೊಲೀಸ್ ಉಪ ಮಹಾನಿರೀಕ್ಷಕ ರಮೇಶ್.ಬಿ, ಜಿಲ್ಲಾ ಪಂಚಾಯಿತಿ ಸಿಇಓ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಮಾಜಿ ಸಚಿವ ಹೆಚ್.ಆಂಜನೇಯ ಉಪಸ್ಥಿತರಿದ್ದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತ ಚೇತನ್ ಸ್ವಾಗತಿಸಿದರು. ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ.ಎಂ. ವಂದಿಸಿದರು.

ನಗರದ ಪ್ರತಿಭಾನ್ವಿತ ಕಲಾವಿದೆ ಡಾ. ಶ್ರುತಿ ರಾಜ್ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು.

## ಸಾಮಾಜಿಕ ಜಾಲತಾಣ ಸುದ್ದಿಗಳ ಬಗ್ಗೆ ಎಚ್ಚರ

(1ನೇ ಪುಟದಿಂದ) ಸದಸ್ಯರು ಮನವಿ ಮಾಡಿದ್ದಾರೆ. ಮುಖ್ಯಮಂತ್ರಿಗಳು ಈ ಬಗ್ಗೆ ಗಮನ ಹರಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸಂವಿಧಾನ ಪೀಠಿಕೆ ಓದಿಸಿ, ನಂತರ ಮಾತನಾಡಿ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಭಿವೃದ್ಧಿ ಯೋಜನೆಗಳು ಜನತೆಯ ಮನಮುಟ್ಟಿವೆ. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯನ್ನು ಯುವ ಜನತೆಗೆ ನೀಡಿ, ಯುವ ಜನಾಂಗಕ್ಕೆ ಸರ್ಕಾರ ಪ್ರಾಮುಖ್ಯತೆ ನೀಡಿದೆ ಎಂದರು.

ಯುವಕರು ದೇಶದ ಆಸ್ತಿ. ಅವರ ಪ್ರತಿಭೆ ಗುರುತಿಸಿ, ಅದಕ್ಕೆ ಪೂರಕವಾದ ವಾತಾವರಣ ಸೃಷ್ಠಿಸುವ ಕಾರ್ಯವನ್ನು ನಾವೆಲ್ಲರೂ ಮಾಡಬೇಕಿದೆ. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ನಮ್ಮ ಸಂವಿಧಾನದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಹಾಗೂ ಶಿಕ್ಷಣ ಅಧಿಕಾರಿಗಳೊಂದಿಗೆ ಚರ್ಚಿಸಿ, ಕ್ರಿಯಾಯೋಜನೆ ರೂಪಿಸಿ, ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.



## ಭಾನುವಳ್ಳಿಯಲ್ಲಿ ಅಕ್ಷರದವ್ವ ಸಾವಿತ್ರಿ ಬಾ ಪುಲೆ ಜಯಂತಿ ಆಚರಣೆ

ಮಲೇಬೆನ್ನೂರು, ಜ.5- ಭಾನುವಳ್ಳಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮಾನವ ಬಂಧುತ್ವ ವೇದಿಕೆ ವತಿಯಿಂದ ಮಹಿಳಾ ಶಿಕ್ಷಣದ ಹೋರಾಟಗಾರ್ತಿ ಹಾಗೂ ಭಾರತದ ಮೊದಲ ಮಹಿಳಾ ಶಿಕ್ಷಕಿ, ಅಕ್ಷರದವ್ವ ಸಾವಿತ್ರಿ ಬಾ ಪುಲೆ ಇವರ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಮಾನವ ಬಂಧುತ್ವ ವೇದಿಕೆಯ ಹರಿಹರ ತಾ. ಸಂಚಾಲಕ ಉಕ್ಕಡಗಾತ್ರಿ ಮಂಜುನಾಥ್ ದೊಡ್ಮನಿ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳಿಗೆ ಸಾವಿತ್ರಿ ಬಾ ಪುಲೆ ಅವರ ವಿವರವಾಗಿ ತಿಳಿಸಿಕೊಟ್ಟರು. ಕಾಲೇಜಿನ ಪ್ರಾಂಶುಪಾಲರಾದ ಹಾಲಪ್ಪ, ಉಪನ್ಯಾಸಕ ಶಾಂತಪ್ಪ, ಸಾಹಿತಿ ಯು.ಕೆ.ಅಣ್ಣಪ್ಪ ಮಾತನಾಡಿದರು. ಮಾನವ ಬಂಧುತ್ವ ವೇದಿಕೆಯ ಹರಿಹರ ತಾ, ಸಹ ಸಂಚಾಲಕ ಹರಳಹಳ್ಳಿ ಮಂಜುನಾಥ್, ಭಾನುವಳ್ಳಿ ಸಂತೋಷ್ ಮತ್ತು ಇತರರು ಭಾಗವಹಿಸಿದ್ದರು.

## ಕಣ್ಮನ ಸೆಳೆದ ಕಲಾ ತಂಡಗಳು

(1ನೇ ಪುಟದಿಂದ) ಸೆಳೆಯಿತು.

ಮಹಿಳೆಯರು ಪೂರ್ಣಕುಂಭ ಹೊತ್ತು ಮೆರವಣಿಗೆಯಲ್ಲಿ ಸಾಗಿದರು. ಪುರಾಣದ ಪಾತ್ರಗಳು ಎಲ್ಲರೊಂದಿಗೆ ಹೆಜ್ಜೆ ಹಾಕುತ್ತಿದ್ದ ಸೊಬಗನ್ನು ಜನರು ರಸ್ತೆಯ ಬದಿಯಲ್ಲಿ ನಿಂತು ಕುತೂಹಲದಿಂದ ನೋಡುತ್ತಿದ್ದರು. ರಾಮ-ಲಕ್ಷ್ಮಣ, ಸೀತೆ, ಹನುಮಂತ ಹಾಗೂ ರಾವಣನ ವೇಷಧಾರಿಗಳು ಗಮನ ಸೆಳೆದರು. ಪೂಜಾ ಕುಣಿತದ ದೃಶ್ಯಗಳು ಭಕ್ತಿಯನ್ನು ಸಾರಿದವು.

ಡಿಆರ್‌ಎಂ ಪದವಿಪೂರ್ವ ಕಾಲೇಜು, ಎಜಿಬಿ ಕಾಲೇಜು, ಡಿಆರ್‌ಎಂ ವಿಜ್ಞಾನ ಕಾಲೇಜು, ಎವಿಕೆ ಕಾಲೇಜು, ಚಾಣಕ್ಯ ಕಾಲೇಜು, ದಾವಣಗೆರೆ ವಿಶ್ವವಿ ದ್ಯಾನಿಲಯದ ಕಾಲೇಜಿನ ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಶಾಮನೂರು ರಿಂಗ್ ರಸ್ತೆಯ ಕರ್ನಲ್ ಎಂ.ಬಿ. ರವೀಂದ್ರನಾಥ್ ವೃತ್ತದ ಬಳಿಯಿಂದ ಕಾರ್ಯಕ್ರಮ ನಡೆಯುವ ಎಂಬಿಎ ಮೈದಾನದವರೆಗೆ ಮೆರವಣಿಗೆ ನಡೆಯಿತು.

ಹರಿಹರ ಶಾಸಕ ಬಿ.ಪಿ. ಹರೀಶ್, ಮೇಯರ್ ಚಮನ್‌ಸಾಬ್ ಕೆ, ರೇಷ್ಮೆ ಇಲಾಖೆ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯ ದರ್ಶಿ ಡಾ.ಶಮ್ಲಾ ಇಕ್ಬಾಲ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪಂಚಾಯಿತಿ ಸಿಇಓ ಸುರೇಶ್ ಬಿ. ಇಟ್ನಾಳ್, ಉಪ ಮೇಯರ್ ಸೋಗಿ ಶಾಂತಕುಮಾರ್, ಡಿಹೆಚ್‌ಓ ಷಣ್ಮುಖಪ್ಪ ಪಾಲ್ಗೊಂಡಿದ್ದರು.

## ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ

ಬೆಂಗಳೂರು, ಜ. 5 - ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರುವ ಮಹಿಳಾ ಅಭ್ಯರ್ಥಿಗಳಿಂದ ವಿವಿಧ ಪತ್ರಿಕಾಲಯಗಳಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ.

ಒಟ್ಟು ಐವರು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶವಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಎರಡು ತಿಂಗಳ ಅವಧಿಗೆ ವಿವಿಧ ಪತ್ರಿಕಾ ಕಚೇರಿಗಳಲ್ಲಿ ತರಬೇತಿ ಪಡೆಯಲು ಅವಕಾಶ ಕಲ್ಪಿಸಲಾಗುವುದು. ತರಬೇತಿ ಅವಧಿಯಲ್ಲಿ ಮಾಸಿಕ 20,000 ರೂ. ಶಿಷ್ಯ ವೇತನ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಇದೇ ದಿನಾಂಕ 20ರ ಒಳಗಾಗಿ ತಮ್ಮ ಸ್ವ-ವಿವರ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕ ಪಟ್ಟಿಗಳ ಮಾಹಿತಿಯನ್ನು ಸ್ಕ್ಯಾನ್ ಮಾಡಿ karnatakamediaacademy@gmail.comಗೆ ಇ-ಮೇಲ್ ಮೂಲಕ ಕಳುಹಿಸಬಹುದಾಗಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ತಿಳಿಸಿದೆ.


**ಸೈಟುಗಳು ಮಾರಾಟಕ್ಕಿವೆ**
ಹದಡಿ ರಸ್ತೆ, ಶಿರಮಗೊಂಡನಹಳ್ಳಿ ಸುತ್ತ-ಮುತ್ತ 30x50 ಪಶ್ಚಿಮ ಅಕ್ಕ-ಪಕ್ಕ, 30x46 ಪೂರ್ವ ಅಕ್ಕ-ಪಕ್ಕ, 30x50 ಪೂರ್ವ, 30x40 ಪಶ್ಚಿಮ.
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**ಸೈಟುಗಳು ಮಾರಾಟಕ್ಕಿವೆ**
ಶಿವ-ಪಾರ್ವತಿ ಬಡಾವಣೆಯಲ್ಲಿ 40x70 ಪೂರ್ವ, ಜೈನ್ ಸ್ಕೂಲ್ ಹಿಂಭಾಗದಲ್ಲಿ 30x55 ಪಶ್ಚಿಮ, 30x40 ಪಶ್ಚಿಮ ಅಕ್ಕ-ಪಕ್ಕ, 35x50 ಉತ್ತರ-ಪಶ್ಚಿಮ ಕಾರ್ನರ್, 40x70 ಪಶ್ಚಿಮ.
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**ಬೇಕಾಗಿದ್ದಾರೆ**
ರಾತ್ರಿ ಶಿಫ್ಟ್‌ನಲ್ಲಿ ಕೆಲಸ ಮಾಡಲು ಕಂಪ್ಯೂಟರ್ ಆಪರೇಟರ್ ಬೇಕಾಗಿದ್ದಾರೆ ಖುದ್ದಾಗಿ ಜನತಾವಾಣಿ ಕಚೇರಿಯನ್ನು ಬೆಳಿಗ್ಗೆ 12 ರಿಂದ ಸಂಜೆ 5 ಗಂಟೆಯ ಒಳಗೆ ಸಂಪರ್ಕಿಸಿ

**ಬೇಕಾಗಿದ್ದಾರೆ**
ಹೋಟೆಲ್ ಕೆಲಸಕ್ಕೆ ಹೆಲ್ಪರ್ ಬೇಕಾಗಿದ್ದಾರೆ. (ಸಸ್ಯಹಾರಿ) ಶಾಮನೂರು ರಸ್ತೆ, ದಾವಣಗೆರೆ.
97434 82356

**ಸೈಟುಗಳು, ಮನೆಗಳು ಮಾರಾಟಕ್ಕಿವೆ**
ಬನಶಂಕರಿ ಲೇಔಟ್, ಶಿವ-ಪಾರ್ವತಿ ಲೇಔಟ್, ಡಾಲರ್ಸ್ ಕಾಲೋನಿ, ಎಸ್.ಎಸ್. ಲೇಔಟ್, ವಿದ್ಯಾನಗರ, ಗ್ಲಾಸ್ ಹೌಸ್ ಲೇಔಟ್ ಹಾಗೂ ಕುಂದುವಾಡ, ಯರಗುಂಟೆಯಲ್ಲಿ ಇನ್‌ವೆಸ್ಟ್‌ಮೆಂಟ್ ಸೈಟುಗಳು, ಮನೆಗಳು & ಕಮರ್ಷಿಯಲ್ ಸೈಟ್ ಯೋಗ್ಯ ಬೆಲೆಯಲ್ಲಿ ದೊರೆಯುತ್ತವೆ. 30x40, 40x60, 30x50.
97315 12365

**ಬೇಕಾಗಿದ್ದಾರೆ**
ಬೆಂಗಳೂರಿನಲ್ಲಿ ಮನೆ ಕೆಲಸ ಮಾಡಲು ಮಹಿಳೆ ಬೇಕಾಗಿದ್ದಾರೆ ಅಥವಾ ಉತ್ತಮ ಕುಟುಂಬ (ಡ್ರೈವಿಂಗ್ ಬಲ್ಲ ಗಂಡ ಮತ್ತು ಮನೆ ಕೆಲಸದಲ್ಲಿ ಸಹಾಯ ಮಾಡಲು ಹೆಂಡತಿ) ಬೇಕಾಗಿದ್ದಾರೆ. ವಸತಿ ಸೌಲಭ್ಯವಿದೆ. ಸಂಪರ್ಕಿಸಿ
88929 05208

**ಸೈಟು ಮಾರಾಟಕ್ಕಿದೆ**
ಭೂಮಿಕಾ ನಗರದಲ್ಲಿ ದಕ್ಷಿಣಾಭಿಮುಖವಾಗಿರುವ ಮತ್ತು ಉದ್ಯಾನವನ ಎದುರಿಗೆ ಇರುವ 34 x73 ಸೈಟು ಮಾರಾಟಕ್ಕಿದೆ. ಸಂಪರ್ಕಿಸಿ
94485 89727

**ಮನೆ ಲೀಸ್‌ಗೆ ಇದೆ**
ನಂ. #3302/72 'ವೀರಭದ್ರೇಶ್ವರ ನಿಲಯ' ಆಂಜನೇಯ ಬಡಾವಣೆ, 1st main, 2nd Cross, ನಿಟ್ಟುವಳ್ಳಿ 10x30 ಅಳತೆಯ ಸಿಂಗಲ್ ಬೆಡ್ ರೂಮ್ ಆರ್.ಸಿ.ಸಿ. ಮನೆ ಗ್ರೌಂಡ್ ಫ್ಲೋರ್. (ಸಸ್ಯಹಾರಿಗಳಿಗೆ ಮಾತ್ರ)
90360 64926

**ಮನೆ ಬಾಡಿಗೆಗೆ ಇದೆ**
2ನೇ ಮಹಡಿ, 1 BHK ಆರೈಕೆ ಆಸ್ಪತ್ರೆ ಹಿಂಭಾಗ, Vidya Vikas Convent ಹತ್ತಿರ, ಮೋತಿ ಲೇಔಟ್, 1ನೇ ಕ್ರಾಸ್, ದಾವಣಗೆರೆ.
95917 67976

**TUITIONS**
CBSE / ICSE Boards
Class 8th, 9th, 10th
CRASH COURSES FOR
NEET / CET / IIT - JEE
PUC I / PUC II / PCMB
NEET Long Term / Supplementary Exams
97398 65711, 94822 44114

**ಕೆಲಸಕ್ಕೆ ಬೇಕಾಗಿದ್ದಾರೆ**
ಮಹಿಳಾ ಹಾಸ್ಟೆಲ್‌ನಲ್ಲಿ ವಾರ್ಡನ್ ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ. ವಿದ್ಯಾರ್ಹತೆ : ಪದವಿ ಆಗಿರಬೇಕು
63609 76841

**CARS FOR SALE**
Renault Duster
KIA SONET GTX +
New I20 Petrol
Maruthi Celerio Automatic.
Contact : Daivik Iynahalli
9945643223

**ಬೇಕಾಗಿದ್ದಾರೆ**
ಟೀ ಶಾಪ್‌ನಲ್ಲಿ ಕೆಲಸ ಮಾಡಲು ಅನುಭವವುಳ್ಳ ಪುರುಷರು ಹಾಗೂ ಮಹಿಳೆಯರು ಬೇಕಾಗಿದ್ದಾರೆ.
99800 32310

**PURE DIAMOND**
100% PURE DIAMOND
1 LAKH TO 1 CRORES
COMPANY VISITING 2 DAYS IN Davanagere. call :
8553799368
8095570649

**ಯುವಕರು ಬೇಕಾಗಿದ್ದಾರೆ**
ಕೃಷಿ ಉಪಕರಣಗಳನ್ನು ಮಾರಾಟ ಮಾಡಲು ಹಾಗೂ ಸರ್ವೀಸ್ ಮಾಡಲು ಅನುಭವ ಇರುವ ಯುವಕರು ಬೇಕಾಗಿದ್ದಾರೆ ಸ್ವವಿವರದೊಂದಿಗೆ ಸಂಪರ್ಕಿಸಿ.
ಹೆಚ್. ಆರ್. ಆಗ್ರೋ ಟೂಲ್
ಈರುಳ್ಳಿ ಮಾರ್ಕೆಟ್ ಹತ್ತಿರ, ದಾವಣಗೆರೆ,
93539 66351

**ಶ್ರೀ ಸಾಯಿ ಫೈನಾನ್ಸ್ (ರಿ)**
ಹೋಟೆಲ್, ಬಟ್ಟೆ ಅಂಗಡಿ, ರೆಸ್ಟೋರೆಂಟ್, ಪ್ರಾವಿಜನ್ ಸ್ಟೋರ್, ಫ್ಯಾನ್ಸಿ ಸ್ಟೋರ್, ಬೇಕರಿ ಟೀಸ್ಟಾಲ್, ಫಾಸ್ಟ್ ಫುಡ್ ಹೋಟೆಲ್, ಗ್ಯಾರೇಜ್, ಮೊಬೈಲ್ ಶಾಪ್, ಎಲೆಕ್ಟ್ರಿಕಲ್ ಶಾಪ್, ಚಿಪ್ಸ್ ಶಾಪ್ ಇತ್ಯಾದಿ ಶಾಪ್‌ಗಳಿಗೆ ಫೈನಾನ್ಸ್ ನೀಡಲಾಗುವುದು.
ಕೆಲಸಕ್ಕೆ ಬೇಕಾಗಿದ್ದಾರೆ
ಶ್ರೀಸಾಯಿ ಎಗ್ ಸೆಂಟರ್‌ನಲ್ಲಿ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC ಉತ್ತೀರ್ಣ
96860 22969

**Required**
Lady candidate for Office work
Good English communication with computer knowledge
P J Extension, Davangere.
99006 66122

**ವಾಟರ್ ಲೀಕೇಜ್ (ವಾಟರ್ ಪ್ರೂಫಿಂಗ್)**
ನಿಮ್ಮ ಮನೆ ಮತ್ತಿತರೆ ಕಟ್ಟಡಗಳ ಬಾತ್‌ರೂಂ, ಬಾಲ್ಕನಿ, ಟೆರೇಸ್, ನೀರಿನ ತೊಟ್ಟಿ, ಗೋಡೆ ಬಿರುಕು, ನೀರಿನ ಟ್ಯಾಂಕ್, ಎಲ್ಲಾ ರೀತಿಯ ನೀರಿನ ಲೀಕೇಜ್‌ಗಳಿಗೆ ಸಂಪರ್ಕಿಸಿ:
95387 77582
ಕೆಲಸ 100% ಗ್ಯಾರಂಟಿ.

**ಹೊಸ ಜೀವನ**
ಲಿಂಗಾಯತ 47 ವರ್ಷದ ಸ್ವಂತ ಕಂಪನಿ ಹೊಂದಿರುವ ವಿಚ್ಛೇದಿತನಿಗೆ ಸೂಕ್ತ ವಿಧವೆ, ವಿಚ್ಛೇದಿತ ವಧು ಬೇಕಾಗಿದೆ.
98807 29108

**ಬೇಕಾಗಿದ್ದಾರೆ**
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಬೇಕಾಗಿದ್ದಾರೆ. ಪುರುಷ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿ ಸೌಲಭ್ಯವಿದೆ. ಸಂಪರ್ಕಿಸಿ :
98442 94446

**ರಕ್ತ ದಾನ ಶ್ರೇಷ್ಠ ದಾನ**

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಪ್ರತಿಪಾದಿತವಾದ ವಸ್ತು, ವಿಷಯ, ವಿಚಾರಗಳು, ಜಾಹೀರಾತುದಾರರ ಅಭಿಪ್ರಾಯ ಆಗಿರುತ್ತವೆಯೇ ಹೊರತು ಆ ಅಭಿಪ್ರಾಯಗಳಿಗೆ ಪತ್ರಿಕೆ ಯಾವುದೇ ರೀತಿಯಿಂದ ಹೊಣೆಯಲ್ಲ.
ಅವುಗಳಲ್ಲಿನ ಮಾಹಿತಿ - ವಸ್ತು ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

**Pi ACADEMY, DVG -04**
**WANTED**
Lecturers / Teachers for high School CBSE students
1) Biology (M.Sc., B.Ed) - 02
2) Chemistry (M.Sc., B.Ed) - 02
1) PM Teacher - 01 2) CBZ Teacher - 01
99642 29344

**SITE FOR SALE**
JH PATEL BADAVANE (E BLOCK) 3rd Main, 1st Cross
SITE NUMBER:723
SIZE :30×40 FACE : ಪಶ್ಚಿಮ
6362516948, 9731454916
(ಮಧ್ಯವರ್ತಿಗಳಿಗೆ ಅವಕಾಶವಿಲ್ಲ)

**Avoid Mosquiteos**
Mosquito Nets for doors & windows
Sri Gowri Enterprises
#7C2, 4th cross Near Shaneshwara Temple Karur Industrial Area, P.B Road, Davanagere -577006
72049 94628

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ. ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
80739 48857

**ತಕ್ಷಣ ಬೇಕಾಗಿದ್ದಾರೆ**
ಸೇರಾ ಕೇರ್ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಯುವತಿಯರು ಮತ್ತು ಮಹಿಳೆಯರು ತಕ್ಷಣ ಬೇಕಾಗಿದ್ದಾರೆ. ತರಬೇತಿಯೊಂದಿಗೆ ವೇತನ ಸೌಲಭ್ಯವಿರುತ್ತದೆ. ನೇರ ಸಂದರ್ಶನಕ್ಕಾಗಿ ಇಂದೇ ಸಂಪರ್ಕಿಸಿ :
97410 82558

**ಕಾರ್ನರ್ ಸೈಟ್ ಮಾರಾಟಕ್ಕಿದೆ**
ದಾವಣಗೆರೆ KHB ಜಡ್ಜ್ ಕಾಲೋನಿ ಹಿಂಭಾಗ, ಪೂರ್ವಾಭಿಮುಖವಾಗಿರುವ 30x40 ಅಳತೆ ಇರುವ ಕಾರ್ನರ್ ಸೈಟ್ ಮಾರಾಟಕ್ಕಿದೆ. ರೂ. 3000/- sqft. ಆಸಕ್ತರು ಮಾತ್ರ ಸಂಪರ್ಕಿಸಿ :
99803 70486
96113 12996

**ತಕ್ಷಣ ಬೇಕಾಗಿದ್ದಾರೆ**
ಹೋಟೆಲ್ ಫುಡೀಸ್ ನುರಿತ ವೇಟರ್‌ಗಳು ಬೇಕಾಗಿದ್ದಾರೆ. ಪಾರ್ಟ್ ಟೈಮ್ ಹಾಗೂ ಪುಲ್ ಟೈಮ್, ಚರ್ಚ್ ರೋಡ್, ತೋಗಟವೀರ ಕಲ್ಯಾಣ ಮಂಟಪ ಹತ್ತಿರ, ದಾವಣಗೆರೆ. ಸಂಪರ್ಕಿಸಿ :
98861 56688

**ಮದ್ಯವ್ಯಸನಿಗೆ ಅರಿವಿಲ್ಲದಂತೆ ಮದ್ಯ ಸೇವನೆ ಬಿಡಿಸಿರಿ**
ಪ್ರತಿ ತಿಂಗಳು 7 ಮತ್ತು 21ನೇ ತಾರೀಖು ಜನತಾ ಡೀಲಕ್ಸ್ ಲಾಡ್ಜ್, KSRTC ಹೊಸ ಬಸ್ ಸ್ಟ್ಯಾಂಡ್ ಎದುರು, ದಾವಣಗೆರೆ.
4 ಮತ್ತು 18 ರಂದು ಕಾವೇರಿ ಲಾಡ್ಜ್, ಪೂನಾ - ಬೆಂಗಳೂರು ರೋಡ್, ಹಾವೇರಿ.
ಅಸ್ತಮಾ, ಕೀಲು ನೋವು
ಡಾ|| ಎಸ್.ಎಂ. ಸೇಠಿ. ಫೋ. : 96322 95561
ಸಮಯ: ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ

**WANTED**
Required trainee office staff with computer knowledge
Nadig Associates
Tax & financial consultants
94220 62614

**WANTED**
Ladies tally & excel operator.
99644 86555

**ಅಡಿಕೆ ತೋಟ ಮಾರಾಟಕ್ಕಿವೆ**
NH-4 ರಸ್ತೆಯಲ್ಲಿ 5 1/2 ವರ್ಷದ ಗಿಡ, 6 1/2 ಎಕರೆ ಅಡಿಕೆ ತೋಟ ಮಾರಾಟಕ್ಕಿದೆ. 200 ಮೀ ಒಳಗೆ ಇವೆ. 2 ಎಕರೆ ಗದ್ದೆ ಇದೆ, ಕಲ್ಲು ಬಂಡೆ ಹತ್ತಿರ. ಬೇರೆ ಕಡೆ ಜಮೀನು ಬೇಕಾಗಿದ್ದಲ್ಲಿ ವಿಚಾರಿಸಿ.
ಏಜೆಂಟರು
81231 15137

**ಗೋಡೌನ್ ಬಾಡಿಗೆಗೆ**
4,000 ಅಡಿ + ಸ್ಟೋರೇಜ್ 2,500 ಅಡಿ ಕರೂರು ಇಂಡಸ್ಟ್ರಿಯಲ್ ಏರಿಯಾ KIADB ಗೋಡೌನ್ ಬಾಡಿಗೆಗೆ ಮತ್ತು ಹಳೆಯ ಡೈನಿಂಗ್ ಚೇರ್‌ಗಳು ಸೇಲ್‌ಗೆ ಇವೆ.
98459 77475
92421 45611

**ಜನ್ಮಾಂತರ ಆತ್ಮ ಚಿಕಿತ್ಸೆ**
ಬಿಪಿ, ಶುಗರ್, ಡಿಪ್ರೆಶನ್, ಮೈಗ್ರೇನ್, ಕ್ಯಾನ್ಸರ್, ಕಿಡ್ನಿ ತೊಂದರೆ, ಅಸ್ತಮಾ, ಸೋರಿಯಾಸಿಸ್, ಡ್ರಗ್ಸ್ ಮುಂತಾದ ದುಶ್ಚಟಗಳು, ಗೃಹದೋಷ, ನಾಗದೋಷ, ಮಾಟ ಮಂತ್ರ, ಭೂತ ಪ್ರೇತಗಳ ಭಯ ಹಾಗೂ ಹಿಂದಿನ ಜನ್ಮಗಳ ದೋಷಗಳ ಸಂಪೂರ್ಣ ನಿವಾರಣೆಗಾಗಿ
(ವ್ಯಕ್ತಿ ಎಷ್ಟೇ ದೂರದಲ್ಲಿದ್ದರೂ ಡಿಸ್ಟೆನ್ಸ್ ಹೀಲಿಂಗ್ ಮಾಡುತ್ತೇವೆ)
80733 42011

**ಪ್ರವೇಶ ಪ್ರಕಟಣೆ**
ಶಾಲೆ ಬಿಟ್ಟಿದ್ದೀರಾ? 7,8,9 ಪಾಸ್/ಫೇಲ್, 10ನೇ ತರಗತಿ ಫೇಲ್/ಗೈರುಹಾಜರಿ, ನೇರವಾಗಿ SSLC ಪರೀಕ್ಷೆ ಕಟ್ಟಬಹುದು. SSLC ಪಾಸ್ ಆಗಿ 17 ವರ್ಷ ತುಂಬಿದವರು, PUC ಫೇಲ್ ಆದವರು ನೇರವಾಗಿ ದ್ವಿತೀಯ PUC ಕಟ್ಟಬಹುದು.
Science, arts, Commerce, ಕೆಲವೇ ಸೀಟುಗಳು ಮಾತ್ರ. 2025 ಮಾರ್ಚ್, ಏಪ್ರಿಲ್ ಪರೀಕ್ಷೆ
ಮಹಮ್ಮದನ್ NTC ಕಾಲೇಜ್, ದಾವಣಗೆರೆ.
9341119195, 9980032237

# ಸಂವಿಧಾನ ಉಳಿಸುವ ಕೆಲಸ ಪಕ್ಷಾತೀತವಾಗಲಿ



## ಹರಪನಹಳ್ಳಿ ಕಾರ್ಯಕ್ರಮದಲ್ಲಿ ಸೋಮಶೇಖರ್ ಬಣ್ಣದಮನೆ ಆಶಯ

ಹರಪನಹಳ್ಳಿ, ಜ. 5- ಬಿಜೆಪಿ ಮತ್ತು ಆರ್‌ಎಸ್‌ಎಸ್ ದೇಶದಲ್ಲಿ ಕೋಮುವಾದ ಸೃಷ್ಟಿಸುವ ಕೆಲಸ ಮಾಡುತ್ತಿವೆ ಎಂದು ಕೆಪಿಸಿಸಿ ಎಸ್ಸಿ ಘಟಕದ ಜಿಲ್ಲಾಧ್ಯಕ್ಷ ಸೋಮಶೇಖರ್ ಬಣ್ಣದಮನೆ ಆರೋಪಿಸಿದರು.

ಪಟ್ಟಣದ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಸಂವಿಧಾನ ಸಂರಕ್ಷಣಾ ಸಮಿತಿ ವತಿಯಿಂದ ಅಮಿತ್ ಶಾ ಹೇಳಿಕೆ ಖಂಡಿಸಿ ಇದೇ ತಿಂಗಳ 9 ರಂದು ಜಿಲ್ಲೆಯಾದ್ಯಂತ ರಾಜೀನಾಮೆಗೆ ಒತ್ತಾಯಿಸಿ ನಡೆಯಲಿರುವ ಪ್ರತಿಭಟನೆಯ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಿಜೆಪಿಯು ಮನುವಾದದ ಮೂಲಕ ಜನಗಳಲ್ಲಿ ಮೌಢ್ಯತೆಯನ್ನು ಮೂಡಿಸುತ್ತಾ, ಪಟ್ಟಭದ್ರ ಹಿತಾಸಕ್ತಿಗಳನ್ನು ಕಾಪಾಡುವ ಹುನ್ನಾರ ಎಸಗುತ್ತಿದೆ.

ಅಂಬೇಡ್ಕರ್ ರಚಿಸಿರುವ ಸಂವಿಧಾನ ಉಳಿಸಿಕೊಳ್ಳುವುದು ಎಲ್ಲರ ಕರ್ತವ್ಯ, ದಲಿತರ ಮತದಾನದ ಹಕ್ಕನ್ನು ಕಿತ್ತುಕೊಳ್ಳಲು ಎನ್ ಆರ್ ಸಿ ಸಿಎಎ ಯಂತಹ ಅನೌಪಚಾರಿಕ ಕಾಯ್ದೆ ಜಾರಿಗೆ ತಂದರು.

ದೇಶದ ಪ್ರಮುಖ ಮಠ ಮಾನ್ಯಗಳ ಸ್ವಾಮಿಗಳಿಂದ ಕೋಮುವಾದ ಸೃಷ್ಟಿಸುವ ಹೇಳಿಕೆಯನ್ನು ನೀಡುತ್ತಾ, ದೇಶದಲ್ಲಿ ಶಾಂತಿ ಕದಡುವ ಕೆಲಸ ಮಾಡುತ್ತಿದೆ. ದೇಶದಲ್ಲಿ ಕೇವಲ ಶೇ. 3ರಷ್ಟು ಮಾತ್ರ ಇರುವ ಮೇಲ್ವರ್ಗದ ಜನರು ತಮ್ಮ ಹಿಡಿತದಲ್ಲಿ ದೇಶವನ್ನು ಇಟ್ಟುಕೊಳ್ಳುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಜಿಲ್ಲಾ ಸಂವಿಧಾನ ರಕ್ಷಣಾ ಸಮಿತಿ ಸಂಚಾಲಕ ರಾಮಕೃಷ್ಣ ಮಾತನಾಡಿ, ಅಂಬೇಡ್ಕರ್ ಕೇವಲ ದಲಿತರಿಗೆ ಮಾತ್ರ ಸೀಮಿತವಲ್ಲ, ಪಕ್ಷಾತೀತವಾಗಿ ಸಂವಿಧಾನ ಉಳಿಸುವ ಕೆಲಸವನ್ನು ಬಿಜೆಪಿ ಹೊರತುಪಡಿಸಿ, ಎಲ್ಲಾ ಪಕ್ಷ ಮತ್ತು ವಿವಿಧ ಸಂಘಟನೆಗಳು ಮಾಡಬೇಕು. ಇಲ್ಲವಾದರೆ ದಲಿತರ ಮತದಾನದ ಹಕ್ಕು ಸೇರಿದಂತೆ, ಇತರೆ ಸೌಲಭ್ಯಗಳನ್ನು ಕಸಿದುಕೊಳ್ಳುವ ಕೆಲಸಕ್ಕೆ ಬಿಜೆಪಿ ಕೈ ಹಾಕಲಿದೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ ಮಾತನಾಡಿ, ಸಂವಿಧಾನವು ದೇಶದ ಜನತೆಯನ್ನು ರಕ್ಷಿಸುವ ಮಹತ್ವದ ಭಾಗವಾಗಿದೆ ಎಂದರು.

ಕೊಡ್ಲಿ ಮಲ್ಲಿಕಾರ್ಜುನ, ಕೊಡ್ಕಿನಾಳ್ ಮಲ್ಲಿಕಾರ್ಜುನ, ಕಲ್ಮನಿ ವೀರಣ್ಣ, ಟಿ ವೆಂಕಟೇಶ, ವಕೀಲ ಭೀಮಪ್ಪ ಮಾತನಾಡಿದರು. ತಾಲೂಕು ಚಲುವಾದಿ ಮಹಾಸಭಾ ಅಧ್ಯಕ್ಷ ಪ್ರತಾಪ್ ಛಲವಾದಿ, ಮುಖಂಡರಾದ ಜಾಕೀರ್ ಸರ್ಖಾವಸ್, ಎಚ್ ಎಂ ಸಂತೋಷ, ಸಂದೇರ ಪರಶುರಾಮ, ಸಿ. ಬಸವರಾಜ್, ಪ್ರಭಾಕರ್ ಸಿ., ಜಂಬಯ್ಯ ನಾಯಕ ಹಾಗೂ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಎಸ್ಸೆಸ್ ಆರೋಗ್ಯ ಸುಧಾರಣೆಗಾಗಿ ಲಿಂಗೇಶ್ವರ ದೇವಸ್ಥಾನದಲ್ಲಿ ಅಭಿಷೇಕ, ಪೂಜೆ





ದಾವಣಗೆರೆ, ಜ. 5 - ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರೂ ಆದ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರು ವಯೋಸಹಜ ಕಾರಣದಿಂದಾಗಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರು ಬಹುಬೇಗ ಗುಣಮುಖರಾಗಲಿ ಹಾಗೂ ಭಗವಂತನು ಅವರಿಗೆ ಹೆಚ್ಚಿನ ಆಯಸ್ಸು, ಆರೋಗ್ಯ ದಯಪಾಲಿಸಲೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ದಾವಣಗೆರೆ ಜಿಲ್ಲಾ ಘಟಕದಿಂದ ಶ್ರೀ ಲಿಂಗೇಶ್ವರ ದೇವಸ್ಥಾನದಲ್ಲಿ ಇಂದು ಅಭಿಷೇಕ, ಶಿವ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಉಪಾಧ್ಯಕ್ಷರುಗಳಾದ ಅಥಣಿ ವೀರಣ್ಣ, ಅಣಬೇರು ರಾಜಣ್ಣ, ಜಿಲ್ಲಾಧ್ಯಕ್ಷ ಐಗೂರು ಚಂದ್ರಶೇಖರ್, ಸಮಾಜದ ಹಿರಿಯ ಮುಖಂಡರಾದ ಕಿರುವಾಡಿ ಗಿರಿಜಮ್ಮ, ವೃಷಭೇಂದ್ರಪ್ಪ, ಕಿರುವಾಡಿ ಸೋಮಣ್ಣ, ರಾಜ್ಯ ಸಮಿತಿ ನಿರ್ದೇಶಕರಾದ ಸಂದೀಪ್ ಅಣಬೇರು, ಜಿಲ್ಲಾ ಸಮಿತಿಯ ಕುರ್ಕಿ ಮಂಜುನಾಥ್, ವೇದಮೂರ್ತಿ ಶಾಮನೂರು, ಕಂಚಿಕೆರೆ ಮಹೇಶ್, ಬೆಳಗಾವಿ ಬಸವರಾಜಪ್ಪ, ನಿರ್ಮಲ ಸುಭಾಷ್, ವಿಜಯ ಬಸವರಾಜ್, ಅಜ್ಜಂಪುರ ಸುಧಾ, ನೀತ ನಂದೀಶ್, ಮಾಗಾನಹಳ್ಳಿ ಗಿರೀಶ್, ಬುಳ್ಳಾಪುರದ ವಿಶ್ವನಾಥ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅವಿನಾಶ್ ಬಸವರಾಜ್, ಮಹಿಳಾ ಘಟಕದ ಸದಸ್ಯರಾದ ಸುಷ್ಮಾ ಪಾಟೀಲ್, ದ್ರಾಕ್ಷಾಯಣಮ್ಮ, ದೀಪಾ ದೇವರಾಜ್, ಮತ್ತು ನಗರ ಘಟಕದ ಸದಸ್ಯರಾದ ಸಿದ್ದಲಿಂಗ ಸ್ವಾಮಿ, ನಿಧಿರಾಜ್ ಐನಳ್ಳಿ ಮತ್ತಿತರರು ಉಪಸ್ಥಿತರಿದ್ದರು.

# ಸ್ಪ್ಯಾಮ್ ತಡೆಗಾಗಿ ತಿಂಗಳಲ್ಲೇ ನಿಯಮ

## ಟ್ರಾಯ್

ನವದೆಹಲಿ, ಜ.5- ಸ್ಪ್ಯಾಮ್ ಹಾವಳಿ ತಡೆ ಗಾಗಿ ತಿಂಗಳಲ್ಲೇ ಹೊಸ ವ್ಯವಸ್ಥೆಯನ್ನು ಜಾರಿಗೆ ತರಲು ಟೆಲಿಕಾಂ ನಿಯಂತ್ರಕ ಟ್ರಾಯ್ ಮುಂದಾಗಿದೆ. ವಾಣಿಜ್ಯ ಕರೆಗಳಿಗಾಗಿ ಗ್ರಾಹಕರು ಅನುಮತಿ ನೀಡುವ ಕಾಗದ ಆಧರಿತ ವ್ಯವಸ್ಥೆ ಜಾರಿಗೆ ತರಲಾಗುವುದು ಎಂದು ಟ್ರಾಯ್ ಅಧ್ಯಕ್ಷ ಅನಿಲ್ ಕುಮಾರ್ ಲಹೋಟಿ ತಿಳಿಸಿದ್ದಾರೆ.

ಟೆಲಿಕಾಂ ಸೇವೆ ಒದಗಿಸುವವರು ಕರೆ ಮತ್ತು ಎಸ್‌ಎಂಎಸ್‌ಗಳಿಗೆ ಪ್ರತ್ಯೇಕ ವಿಶೇಷ ದರ ನಿಗದಿಪಡಿಸಬೇಕು ಎಂಬ ಇತ್ತೀಚಿನ ನಿಯಮದಲ್ಲೂ ಯಾವುದೇ ಬದಲಾವಣೆ ತರುವುದಿಲ್ಲ ಎಂದು ಲಹೋಟಿ ಹೇಳಿದ್ದಾರೆ.

ಖಾಸಗಿ ಸುದ್ದಿ ಸಂಸ್ಥೆಯೊಂದಕ್ಕೆ ಸಂದರ್ಶನ ನೀಡಿದ್ದ ಅವರು, ಡಾಟಾ ಬಳಸಲು ಗ್ರಾಹಕರಿಗೆ ಉತ್ತೇಜನ ನೀಡಬೇಕು. ಆದರೆ ಬಳಕೆಗೆ ಬಲವಂತಪಡಿಸಬಾರದು ಎಂದಿದ್ದಾರೆ. ದೇಶದ ಹಿತ ರಕ್ಷಣೆ ಜೊತೆಗೆ ಗ್ರಾಹಕರ ಹಿತ ರಕ್ಷಿಸುವ ಕಡೆಗೂ ಟ್ರಾಯ್ ಗಮನ ಹೊಂದಿದೆ. ಗ್ರಾಹಕರು ತಾವು ಬಯಸಿದ ಸೇವೆಗಷ್ಟೇ ಹಣ ಪಾವತಿಸುವ ಆಯ್ಕೆ ಇರಬೇಕು ಎಂದವರು ಹೇಳಿದ್ದಾರೆ.

ಟೆಲಿಕಾಂ ಕಂಪನಿಗಳು ಹಾಗೂ ಉದ್ಯಮದ ಇತರರು ಹಲವು ಬಾರಿ ದಾಖಲೆಗಳನ್ನು ಸಲ್ಲಿಸುವುದನ್ನು ತಪ್ಪಿಸಲು ಹೊಸ ವ್ಯವಸ್ಥೆ ರೂಪಿಸಲಾಗುತ್ತಿದೆ ಎಂದು ಲಹೋಟಿ ಹೇಳಿದ್ದಾರೆ.

# ಖಾಸಗೀಕರಣದಿಂದ ಗುಣಮಟ್ಟದ ಶಿಕ್ಷಣದ ಗ್ಯಾರಂಟಿ ಇಲ್ಲ

ನವದೆಹಲಿ, ಜ. 5- ಖಾಸಗೀಕರಣದ ಮೂಲಕ ಗುಣಮಟ್ಟದ ಶಿಕ್ಷಣದ ಗುರಿ ತಲುಪಲಾಗದು. ಶಿಕ್ಷಣ ಹಾಗೂ ಸರ್ಕಾರಿ ಸಂಸ್ಥೆಗಳ ಬಲಗೊಳಿಸಲು ಹೆಚ್ಚು ವೆಚ್ಚ ಮಾಡಬೇಕು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಐಐಟಿ ಮದ್ರಾಸ್ ವಿದ್ಯಾರ್ಥಿಗಳ ಜೊತೆ ಇತ್ತೀಚಿಗೆ ಸಂವಾದ ನಡೆಸಿದ ಲೋಕಸಭೆಯಲ್ಲಿ ಪ್ರತಿಪಕ್ಷದ ನಾಯಕರಾಗಿರುವ ರಾಹುಲ್ ಗಾಂಧಿ, ಶಿಕ್ಷಣ ವ್ಯವಸ್ಥೆ ಸುಧಾರಣೆಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಮಾತನಾಡಿದ್ದಾರೆ.

# ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ ಜಿ.ಎಂ. ಸಿದ್ದೇಶ್ವರ ದಂಪತಿ ಮತದಾನ



ಚಿತ್ರದುರ್ಗ, ಜ. 5 - ತಾಲ್ಲೂಕಿನ ಭೀಮಸಮುದ್ರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 'ಸಾಲಗಾರರಲ್ಲದ ಕ್ಷೇತ್ರದ' ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಮಾಜಿ ಕೇಂದ್ರ ಸಚಿವ ಜಿ.ಎಂ. ಸಿದ್ದೇಶ್ವರ ಮತ್ತು ಪತ್ನಿ ಶ್ರೀಮತಿ ಗಾಯತ್ರಿ ಸಿದ್ದೇಶ್ವರ ದಂಪತಿ ಮತದಾನ ಮಾಡಿದರು.

# ನಗರದಲ್ಲಿ ಇಂದು ಕನ್ನಡ ವಿಷಯಾಧರಿತ, ವ್ಯಕ್ತಿತ್ವ ವಿಕಸನ ಕಾರ್ಯಾಗಾರ

ದಾವಣಗೆರೆ, ಜ. 5- ಸೌಹಾರ್ದ ಪ್ರಕಾಶನದ ವತಿಯಿಂದ ಶಿಕ್ಷಕರಾಗಿದ್ದ ದಿ. ಎಂ.ಬಿ. ಶಂಕರ ಮೂರ್ತಿ ಅವರ 9 ನೇ ವರ್ಷದ ಪುಣ್ಯ ಸ್ಮರಣಾರ್ಥ ನಾಳೆ ದಿನಾಂಕ 6 ಮತ್ತು 7 ರಂದು ನಗರದ ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆ ಆವರಣದಲ್ಲಿ 10 ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರಥಮ ಭಾಷೆ ಕನ್ನಡ ವಿಷಯಾಧಾರಿತ ಕಾರ್ಯಾಗಾರ ಹಾಗೂ ವ್ಯಕ್ತಿತ್ವ ವಿಕಸನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸೌಹಾರ್ದ ಪ್ರಕಾಶನದ ಪ್ರಕಾಶಕರಾದ ಎ.ಸಿ.ಶಶಿಕಲಾ ಶಂಕರಮೂರ್ತಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ನಾಳೆ ಸೋಮವಾರ ಬೆಳಿಗ್ಗೆ 10 ಗಂಟೆಗೆ ಹಾಗೂ ವ್ಯಕ್ತಿತ್ವ ವಿಕಸನ ಕಾರ್ಯಕ್ರಮವನ್ನು ನಾಡಿದ್ದು ದಿನಾಂಕ 7 ರಂದು ಮಧ್ಯಾಹ್ನ 2.45 ಕ್ಕೆ ಏರ್ಪಡಿಸಲಾಗಿದೆ. ಎಂ.ಎಂ. ಶಿಕ್ಷಣ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಪ್ರೊ.ವೈ.ಎಂ. ವಿಠಲರಾವ್ ಉದ್ಘಾಟಿಸಲಿದ್ದಾರೆ.

ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆ ಮುಖ್ಯಸ್ಥರಾದ ಜಸ್ಟಿನ್ ಡಿಸೋಜ ಅಧ್ಯಕ್ಷತೆ ವಹಿಸಿಕೊಳ್ಳಲಿದ್ದು, ಗೌರವಾಧ್ಯಕ್ಷರಾಗಿ ಎಂ.ಎಂ. ಶಿಕ್ಷಣ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಎಂ.ಎಂ.ಪಟ್ಟಣಶೆಟ್ಟಿ ಆಗಮಿಸಲಿದ್ದಾರೆ. ದೊಡ್ಡಬಳ್ಳಾಪುರದ ವೈಜ್ಞಾನಿಕ ಚಿಂತಕ ಡಾ.ಹುಲಿಕಲ್ ನಟರಾಜ್ 'ವಿಜ್ಞಾನವನ್ನು ನಂಬಿ; ಆದರೆ ಮೌಢ್ಯತೆಗೆ ಬಲಿಯಾಗಬೇಡಿ' ಕುರಿತು ವಿಶ್ಲೇಷಣೆ ಪ್ರಾತ್ಯಕ್ಷಿಕೆ ಹಾಗೂ ಉಪನ್ಯಾಸ ನೀಡಲಿದ್ದಾರೆ. ಎಂ.ಎಂ. ಶಿಕ್ಷಣ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಡಾ.ಹೆಚ್.ವಿ. ವಾಮದೇವಪ್ಪ, ಶಿಕ್ಷಣ ಇಲಾಖೆ ವಿಶ್ರಾಂತ ಜಂಟಿ ನಿರ್ದೇಶಕ ಹೆಚ್. ಕೆ. ಲಿಂಗರಾಜ್ ಮತ್ತಿತರರು ಭಾಗವಹಿಸಲಿದ್ದಾರೆ.

ರೇಖಾ ಪುರಾಣಿಕ್, ಕುಸುಮಾ ಲೋಕೇಶ್ ಮಾತನಾಡಲಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಾಲಿಗ್ರಾಮ ಗಣೇಶ್ ಶೆಣೈ, ಕುಸುಮಾ ಲೋಕೇಶ್, ಕೆ.ಸಿ.ಉಮೇಶ, ವಾಸಂತಿ ಮಂಜುನಾಥ್, ಜ್ಯೋತಿ ಗಣೇಶ್ ಶೆಣೈ ಉಪಸ್ಥಿತರಿದ್ದರು.

# ಗುಜರಾತ್ : ಕರಾವಳಿ ಗಾರ್ಡ್ ಹೆಲಿಕಾಪ್ಟರ್ ಕುಸಿದು ಮೂವರ ಸಾವು

ಪೋರ್‌ಬಂದರ್, ಜ.5- ಕರಾವಳಿ ಗಾರ್ಡ್‌ಗೆ ಸೇರಿದ ಹೆಲಿಕಾಪ್ಟರ್ ಒಂದು ಗುಜರಾತ್‌ನ ಪೋರ್‌ಬಂದರ್ ನಗರದ ಹೊರವಲಯದ ವಿಮಾನ ನಿಲ್ದಾಣದಲ್ಲಿ ಪತನವಾಗಿ ಮೂವರು ಸಿಬ್ಬಂದಿ ಸಾವನ್ನಪ್ಪಿದ್ದಾರೆ.

ಬೆಳಗ್ಗೆ 12 ಗಂಟೆಗೆ ಕರಾವಳಿ ಗಾರ್ಡ್‌ನ ಆಧುನಿಕ ಹಗುರ ಹೆಲಿಕಾಪ್ಟರ್ ಸಾಮಾನ್ಯ ಹಾರಾಟ ಮುಗಿಸಿ, ಮರಳುವ ವೇಳೆಗೆ ಅವಘಡ ಸಂಭವಿಸಿದೆ.

ಕರಾವಳಿ ಗಾರ್ಡ್‌ನ ವಿಮಾನ ನಿಲ್ದಾಣದ ರನ್‌ವೇ ಮೇಲೆ ಹೆಲಿಕಾಪ್ಟರ್ ಇಳಿಸಲು ಪ್ರಯತ್ನ ನಡೆಸುತ್ತಿದ್ದಾಗ ಅದು ಕುಸಿದಿದೆ. ನಂತರ ಬೆಂಕಿ ಕಾಣಿಸಿಕೊಂಡಿದೆ. ಅಗ್ನಿಶಾಮಕ ದಳದ ನೆರವಿನೊಂದಿಗೆ ಬೆಂಕಿ ನಂದಿಸಲಾಗಿದೆ.

ಹೆಲಿಕಾಪ್ಟರ್‌ನಲ್ಲಿ ಇದ್ದ ಮೂವರು ಗಾರ್ಡ್‌ಗಳಿಗೆ ತೀವ್ರ ಸುಟ್ಟ ಗಾಯಗಳಾಗಿದ್ದವು. ಅವರನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಇಬ್ಬರು ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದರೆ, ಒಬ್ಬರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ನಾಲ್ಕು ತಿಂಗಳ ಹಿಂದೆ ಪೋರ್‌ಬಂದರ್ ಕರಾವಳಿಯಲ್ಲಿ ಕರಾವಳಿ ಗಾರ್ಡ್‌ನ ಎಎಲ್‌ಎಚ್ ಎಂಕೆ 3 ಹೆಲಿಕಾಪ್ಟರ್ ಪತನಗೊಂಡು ಅದರಲ್ಲಿದ್ದ ಮೂವರು ಸಾವನಪ್ಪಿದ್ದರು.

# ನಗರದಲ್ಲಿ ಇಂದು ಪಾರಂಪರಿಕ ವೈದ್ಯ ಪರಿಷತ್‌ನ 25ನೇ ಸಂಸ್ಥಾಪನಾ ದಿನಾಚರಣೆ

ಪಾರಂಪರಿಕ ವೈದ್ಯ ಪರಿಷತ್-ಕರ್ನಾಟಕ ಹಾಗೂ ಪಾರಂಪರಿಕ ವೈದ್ಯ ಪರಿಷತ್ ಇವರುಗಳ ಸಂಯುಕ್ತಾಶ್ರಯದಲ್ಲಿ ಪಾರಂಪರಿಕ ವೈದ್ಯ ಪರಿಷತ್, ಕರ್ನಾಟಕದ 25ನೇ ಸಂಸ್ಥಾಪನಾ ದಿನಾಚರಣೆಯನ್ನು ಇಂದು ಬೆಳಿಗ್ಗೆ 11 ಗಂಟೆಗೆ ರೋಟರಿ ಬಾಲಭವನದಲ್ಲಿ ಏರ್ಪಡಿಸಲಾಗಿದೆ.

ಹೆಬ್ಬಾಳು ವಿರಕ್ತಮಠದ ಶ್ರೀ ಮಹಾಂತ ರುದ್ರೇಶ್ವರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿರುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಾರಂಪರಿಕ ವೈದ್ಯ ಪರಿಷತ್ ಅಧ್ಯಕ್ಷ ವೈದ್ಯ ಶಿವಲಿಂಗಪ್ಪ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಪಾರಂಪರಿಕ ವೈದ್ಯ ಪರಿಷತ್‌ನ ಅಧ್ಯಕ್ಷ ವೈದ್ಯ ಜಿ. ಮಹಾದೇವಯ್ಯ, ಮೈಸೂರಿನ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲರು ಹಾಗೂ ಪಾರಂಪರಿಕ ವೈದ್ಯ ಪರಿಷತ್, ಕರ್ನಾಟಕದ ಹಿರಿಯ ಸಂಸ್ಥಾಪಕರಾದ ಡಾ|| ಸತ್ಯನಾರಾಯಣ ಭಟ್, ಪರಿಷತ್‌ನ ಕೋಶಾಧ್ಯಕ್ಷರಾದ ವೈದ್ಯ ಶಿವಾನಂದ ಜಂಗಿನ ಮಠ, ಸಹಕಾರ್ಯದರ್ಶಿ ವೈದ್ಯ ಉಮಾದೇವಿ, ಕಾರ್ಯಕಾರಿ ಸಮಿತಿ ಸದಸ್ಯ ವೈದ್ಯ ವೀರಣ್ಣ, ಜಿಲ್ಲಾ ಸಂಚಾಲಕರಾದ ವೈದ್ಯ ಕೆ.ಎಂ. ಪುಷ್ಪಲತಾ ಇವರುಗಳು ಆಗಮಿಸಲಿದ್ದಾರೆ ಎಂದು ಪರಿಷತ್‌ನ ಕಾರ್ಯದರ್ಶಿ ಮಮತಾ ನಾಗರಾಜ್ ತಿಳಿಸಿದ್ದಾರೆ.

# ಹರಿಹರದಲ್ಲಿ ಇಂದು ಸಾರ್ವಜನಿಕ ಸಮಾಲೋಚನಾ ಸಭೆ

ನಗರದ ನಗರಸಭೆಯ ಸಭಾಂಗಣದಲ್ಲಿ ಇಂದು ಬೆಳಗ್ಗೆ 11 ಗಂಟೆಗೆ ಆಯವ್ಯಯ ತಯಾರಿಸಲು ಮೊದಲ ಹಂತದ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ಅಧ್ಯಕ್ಷೆ ಮತ್ತು ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

# ಎಸ್ಸೆಸ್ ಭೇಟಿ ಮಾಡಿದ ಬಿ.ವೈ. ವಿಜಯೇಂದ್ರ



ಬೆಂಗಳೂರು, ಜ.5- ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಚೇತರಿಸಿಕೊಳ್ಳುತ್ತಿರುವ ಹಿರಿಯ ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಇಂದು ಭೇಟಿ ಮಾಡಿ, ಆರೋಗ್ಯ ಕುಶಲೋಪರಿ ವಿಚಾರಿಸಿದರು.

# ವೆಂಕಟೇಶ್ವರಪುರದಲ್ಲಿ 10ರಂದು ವೈಕುಂಠ ಏಕಾದಶಿ ವೈಭವ



ಚನ್ನಗಿರಿ, ಜ. 5 - ತಾಲ್ಲೂಕಿನ ಶ್ರೀ ವೆಂಕಟೇಶ್ವರ ಪುರದಲ್ಲಿ ಶ್ರೀ ದೇವಿ, ಭೂದೇವಿ ಸಹಿತ ಶ್ರೀ ವೆಂಕಟೇಶ್ವರ ಸ್ವಾಮಿ ದಿವ್ಯ ಸಾನ್ನಿಧ್ಯದಲ್ಲಿ ಧನುರ್ಮಾಸದ ಶುಕ್ಲ ಪಕ್ಷ ವೈಕುಂಠ ಏಕಾದಶಿ ಇದೇ ದಿನಾಂಕ 10ರ ಶುಕ್ರವಾರ ಬೆಳಗಿನ ಜಾವ 3.30 ರಿಂದ ಉತ್ತರ ದ್ವಾರ ದರ್ಶನ, ವಿಶೇಷ ಪಂಚಾಮೃತ ಅಭಿಷೇಕ, ದಿವ್ಯ ವಜ್ರ ಖಚಿತ ಆಭರಣ ಅಲಂಕಾರ ಸೇವೆಯನ್ನು ನಡೆಸಲಾಗುತ್ತದೆ.

ಬೆಳಿಗ್ಗೆ 8ರಿಂದ ಸಂಜೆ 8 ರವರೆಗೂ ನಿರಂತರವಾಗಿ ಶ್ರೀ ವಿಷ್ಣು ಸಹಸ್ರನಾಮ ಪಾರಾಯಣವನ್ನು ಆಯೋಜಿಸಲಾಗಿದೆ ಎಂದು ದೇವಸ್ಥಾನದ ಅರ್ಚಕ ಅಪ್ಪಾಜಿ ವರಪ್ರಸಾದ್ ಶರ್ಮ ತಿಳಿಸಿದ್ದಾರೆ.

ಕಮರ್ಷಿಯಲ್ ಕಾಂಪ್ಲೆಕ್ಸ್ ಬಾಡಿಗೆಗೆ ಇದೆ
ಎವಿಕೆ ಕಾಲೇಜ್ ರಸ್ತೆ,
ಶ್ರೀರಾಮ ಪಾರ್ಕ್ ಹತ್ತಿರ,
ಪಿಜೆ ಬಡಾವಣೆ,
ಗ್ರೌಂಡ್ ಫ್ಲೋರ್, ಎರಡನೇ ಫ್ಲೋರ್.
ಸಂಪರ್ಕಿಸಿ : 99640 13041

# ಕೋರೆಂಗಾವ್ ಮರ್ಯಾದೆಗಾಗಿ ನಡೆದ ಏಕೈಕ ಯುದ್ಧ



## ಹೊನ್ನಾಳಿ ವಿಜಯೋತ್ಸವದಲ್ಲಿ ಎ.ಡಿ ಈಶ್ವರಪ್ಪ

ಹೊನ್ನಾಳಿ,ಜ.3- ಭೀಮ ಕೋರೆಂಗಾವ್ ಯುದ್ಧವು ಐದು ನೂರು ಜನರ ಒಗ್ಗಟ್ಟಿನಿಂದ ಕೂಡಿದ, ವಿಶ್ವದಲ್ಲೇ ಮರ್ಯಾದೆಗಾಗಿ ನಡೆದ ಏಕೈಕ ಯುದ್ಧವಾಗಿದೆ ಎಂದು ಪ್ರಜಾ ಪರಿವರ್ತನಾ ವೇದಿಕೆ ರಾಜ್ಯ ಸಂಚಾಲಕ ಎ.ಡಿ ಈಶ್ವರಪ್ಪ ಹೇಳಿದರು.

ಇಲ್ಲಿನ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ 207ನೇ ಪೇಶ್ವೆಯರ ವಿರುದ್ಧ ಗೆದ್ದ ಕೋರೆಂಗಾವ್ ವಿಜಯೋತ್ಸವ ನಿಮಿತ್ತ ಕ್ಯಾಂಡಲ್ ಹಚ್ಚಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

1818 ಜನವರಿ 1 ರಂದು 14 ಸಾವಿರ ಪೇಶ್ವೆಗಳ ಗುಂಪನ್ನು ಬೆಳಿಗ್ಗೆ 9 ರಿಂದ ರಾತ್ರಿ 9 ರವರೆಗೆ ನಡೆದ ಯುದ್ಧದಲ್ಲಿ ಮಣಿಸುವ ಮೂಲಕ ನಮ್ಮ ಪೂರ್ವಜರು ಸಿಂಹಗಳೆಂದು ಸಾಬೀತು ಪಡಿಸಿದ್ದಾರೆ ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ಪ್ರಜಾ ಪರಿವರ್ತನಾ ವೇದಿಕೆ ತಾಲ್ಲೂಕು ಅಧ್ಯಕ್ಷ ಕೆ.ಒ ಹನುಮಂತಪ್ಪ, ಪದಾಧಿಕಾರಿಗಳಾದ ಅರಕೆರೆ ಕೃಷ್ಣಪ್ಪ, ಲೋಕೇಶ್, ನಜೀರ್, ಚೆನ್ನೇಶ್, ರಾಮಣ್ಣ, ನಾಗರಾಜ್ ಕಲ್ಕೇರಿ, ಪ್ರಭು, ಗೀತಾ, ಸಾವಿತ್ರಮ್ಮ, ಲಕ್ಷ್ಮಿ ಸೇರಿದಂತೆ ಇನ್ನಿತರರಿದ್ದರು.

# ತೆಲಗಿ ವಿವಿಧೋದ್ದೇಶ ಪ್ರಾ.ಕೃ.ಪ.ಸ. ಸಂಘದ ಅಧ್ಯಕ್ಷರಾಗಿ ಉಮಾಕಾಂತ್



ಹರಪನಹಳ್ಳಿ, ಜ.4- ತಾಲ್ಲೂಕಿನ ತೆಲಗಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಅಧ್ಯಕ್ಷರಾಗಿ ತಳವಾರ ಉಮಾಕಾಂತ್, ಉಪಾಧ್ಯಕ್ಷರಾಗಿ ಶೆಟ್ರು ಕುಬೇರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

# ಆಧಾರವಿಲ್ಲದೆ ಆರೋಪ ಸಲ್ಲದು : ಸಿಎಂ



ದಾವಣಗೆರೆ, ಜ. 5- ವಿರೋಧ ಪಕ್ಷಗಳದ್ದು ಕೇವಲ ಆರೋಪ ಮಾಡುವುದೇ ಕೆಲಸವಲ್ಲ. ದಾಖಲಾತಿಗಳ ಸಮೇತ ಆರೋಪ ಮಾಡಬೇಕು ಹಾಗೂ ಆರೋಪಗಳನ್ನು ಸಾಬೀತು ಪಡಿಸಬೇಕು. ಆಧಾರವಿಲ್ಲದೆ ಆರೋಪಗಳನ್ನು ಮಾಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನಗರದ ಎಂಬಿಎ ಕಾಲೇಜು ಹೆಲಿಪ್ಯಾಡ್ ಆವರಣದಲ್ಲಿ ಮಾಧ್ಯಮದರೊಂದಿಗೆ ಅವರು ಮಾತನಾಡಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಸರ್ಕಾರದಲ್ಲಿ ಶೇ.60ರಷ್ಟು ಕಮೀಷನ್ ಪಡೆಯಲಾಗುತ್ತಿದೆ ಎಂದು ಆರೋಪಿಸಿರುವ ಬಗ್ಗೆ ಮೇಲಿನಂತೆ ಪ್ರತಿಕ್ರಿಸಿದರು.

ರಸ್ತೆ ಸಾರಿಗೆ ಸಂಸ್ಥೆಗಳ ಬಸ್ ದರ ಹೆಚ್ಚಿಸಿರುವ ಬಗ್ಗೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ, ಎಲ್ಲಾ ಕಾಲದಲ್ಲಿಯೂ ಬಸ್ ದರಗಳು ಏರಿಕೆಯಾಗಿವೆ. ನೌಕರರ ವೇತನ, ಡೀಸೆಲ್ ಬೆಲೆ ಏರಿಕೆ, ಬಸ್ಸುಗಳನ್ನು ಕೊಳ್ಳುವುದು ಹಾಗೂ ಹಣದುಬ್ಬರವೂ ಆಗಿದೆ. ವರ್ಷಗಳ ಹಿಂದೆ ಬೆಲೆ ಹೆಚ್ಚಿಸಲಾಗಿದ್ದು, ಸಾರಿಗೆ ನಿಗಮಗಳು ತೊಂದರೆ ಯಲ್ಲಿವೆ ಎನ್ನುವ ಕಾರಣ ಹಾಗೂ ಬೇಡಿಕೆಯೂ ಇದ್ದುದರಿಂದ ಬೆಲೆಯೇರಿಸಲಾಗಿದೆ ಎಂದರು.

ಬಿಜೆಪಿ ಹಾಗೂ ಕುಮಾರಸ್ವಾಮಿಯವರ ಕಾಲದಲ್ಲಿಯೂ ಬೆಲೆ ಹೆಚ್ಚಿಸಲಿಲ್ಲವೇ? ಕೇಂದ್ರ ಸರ್ಕಾರ ರೈಲ್ವೆ ದರ ಏರಿಕೆ ಮಾಡಿಲ್ಲವೇ? ಎಂದು ಪ್ರಶ್ನಿಸಿದರು.


ಕೆಪಿಸಿಸಿ, ಮುಖ್ಯಮಂತ್ರಿಗಳ ಬದಲಾವಣೆಯ ಕುರಿತು ಪಕ್ಷದ ವರಿಷ್ಠರು ತೀರ್ಮಾನ ಮಾಡುತ್ತಾರೆ. ಸಚಿವ ನಾಗೇಂದ್ರ ಅವರ ರಾಜೀನಾಮೆಯಿಂದ ಖಾಲಿಯಾಗಿರುವ ಸ್ಥಾನವನ್ನು ತುಂಬುವ ಬಗ್ಗೆ ಪಕ್ಷದ ವರಿಷ್ಠರೊಂದಿಗೆ ಚರ್ಚಿಸಲಾಗುವುದು ಎಂದರು. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆ ನಡೆಸಲು ನಾವು ತಯಾರಾಗಿದ್ದೇವೆ. ಆದರೆ ಈ ವಿಷಯ ನ್ಯಾಯಾಲಯದ ಮುಂದಿದ್ದು, ಅಲ್ಲಿಯೇ ಇತ್ಯರ್ಥವಾಗಬೇಕಿದೆ ಎಂದರು.

ಸಚಿವ ಸತೀಶ್ ಜಾರಕಿಹೊಳಿ ಅವರ ಮನೆಯಲ್ಲಿ ಹಲವು ಸಚಿವರು ಸಭೆ ಸೇರಿದ್ದಾರೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ, ಊಟಕ್ಕೆ ಸೇರುವುದೇ ತಪ್ಪೇ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ರಾಜಕಾರಣಿಗಳು ಊಟಕ್ಕೆ ಸೇರಿದರೆ ಬಣ್ಣ ಕಟ್ಟಲಾಗುತ್ತದೆ. ಈಗಾಗಲೇ ಹೇಳಿದಂತೆ ಅಲ್ಲಿ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

# ನಿಟುವಳ್ಳಿಗೆ ಇಂದು ಪಾರಂಪರಿಕ ವೈದ್ಯ ಮಹದೇವಯ್ಯ


ನಿಟುವಳ್ಳಿಯ ಹೆಚ್.ಕೆ.ಆರ್. ಸರ್ಕಲ್ ಹತ್ತಿರದ ಪತಂಜಲಿ ವೆಲ್ನೆಸ್ ಸೆಂಟರ್‌ಗೆ ಇಂದು ಮಧ್ಯಾಹ್ನ 3 ಗಂಟೆಗೆ ಕುದೂರಿನ ಮೂಳೆ ತಜ್ಞರೂ, ಪಾರಂಪರಿಕ ವೈದ್ಯರೂ ಆದ ಮಹದೇವಯ್ಯ ಅವರು ಭೇಟಿ ನೀಡಲಿದ್ದಾರೆ. ಮಹಾದೇವಯ್ಯ ಅವರು ಮೂಳೆ ಮುರಿತ, ಟೆನಿಸ್ ಎಲ್ಬೋ, ಸೊಂಟ ನೋವು, ಕುತ್ತಿಗೆ ನೋವು, ಭುಜ ನೋವು ಮುಂತಾದ ಸಮಸ್ಯೆಗಳಿಗೆ ಚಿಕಿತ್ಸೆ ನೀಡಲಿದ್ದಾರೆ ಎಂದು ಜಿಲ್ಲಾ ಸಂಚಾಲಕರಾದ ಕೆ. ಎಂ. ಪುಷ್ಪಲತಾ (8310748946, 9880107918) ತಿಳಿಸಿದ್ದಾರೆ.

## ಕಾಣೆಯಾಗಿದ್ದಾರೆ



ದಾವಣಗೆರೆ ತಾಲ್ಲೂಕು ಹಳೆಕೋಳೇನಹಳ್ಳಿ ವಾಸಿ ಕುರುಬ ಜನಾಂಗದ **ಹನುಮಂತಪ್ಪ** ತಂದೆ ಸಿದ್ದಪ್ಪ ಅವರು ದಿನಾಂಕ : 18.11.2024 ರಂದು ಚನ್ನಗಿರಿ ತಾಲ್ಲೂಕು ನಲ್ಲೂರು ಗ್ರಾಮದಿಂದ ಕಾಣೆಯಾಗಿದ್ದಾರೆ. ಅವರಿಗೆ 52 ವರ್ಷ ವಯಸ್ಸಾಗಿದೆ. ದುಂಡು ಮುಖ, ಗೋಧಿ ಮೈ ಬಣ್ಣ, 5.2 ಅಡಿ ಎತ್ತರ ಹೊಂದಿದ್ದು, ಕಾಣೆಯಾಗಿರುವ ಹನುಮಂತಪ್ಪ ಯಾರಿಗಾದರೂ ಕಂಡಲ್ಲಿ ಅಥವಾ ಸಿಕ್ಕಲ್ಲಿ ಈ ಕೆಳಗಿನ ನಂಬರ್‌ಗೆ ಕರೆ ಮಾಡಲು ಕೋರುತ್ತೇವೆ. **ಸಿದ್ದೇಶ್ ಹೆಚ್. 82170 25127, ವಿನೋದ : 76766 62515**


|| ವಂದೇ ಗೋಮಾತರಮ್ ||
ನೀವು ಕ್ಯಾನ್ಸರ್ ಸಮಸ್ಯೆಯಿಂದ ಬಳಲುತ್ತಿದ್ದೀರಾ...?
ಹೆದರಬೇಡಿ, ಧೈರ್ಯದಿಂದ ಎದುರಿಸಿ
ಅನ್ವಯ ಆಯುರ್ವೇದ ಆಸ್ಪತ್ರೆ
ಗೋಸೇವಾ ಗತಿವಿಧಿ ಕರ್ನಾಟಕ
ಹಾಗೂ
ಮಾ ಗೋ ಪ್ರಾಡಕ್ಟ್ಸ್ ಪ್ರೈ. ಲಿ.
ಇವರ ಸಂಯುಕ್ತ ಆಶ್ರಯದಲ್ಲಿ



ಕ್ಯಾನ್ಸರ್‌ಗೆ ಪಂಚಗವ್ಯ ಆಧಾರಿತ ಆಯುರ್ವೇದ ಚಿಕಿತ್ಸೆ ಮತ್ತು ಸಮಾಲೋಚನಾ ಶಿಬಿರ
ನಡೆಸಿಕೊಡುವವರು :
ಡಾ|| ಎನ್. ದರ್ಶನ್ ಬಾಬು
BAMS., MD., Ph.D(Sch), CCNF., DNHE., FAGE., PGD(YOGA), PGCAC, PGDM(HM)
ನಿರ್ದೇಶಕರು, ಅನ್ವಯ ಆಯುರ್ವೇದ ಆಸ್ಪತ್ರೆ
ಹಾಗೂ
ಪಂಚಗವ್ಯ ಚಿಕಿತ್ಸೆಯಲ್ಲಿ 25 ವರ್ಷಗಳ ಸುದೀರ್ಘ ಅನುಭವ ಹೊಂದಿರುವ
"ಆನ್ಸರ್ ಫಾರ್ ಕ್ಯಾನ್ಸರ್" ಖ್ಯಾತಿಯ
ಡಾ|| ಡಿ.ಪಿ. ರಮೇಶ್
ದಿನಾಂಕ : 07-01-2025 ಮಂಗಳವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2ರ ವರೆಗೆ
ಸ್ಥಳ : ಅನ್ವಯ ಆಯುರ್ವೇದ ಆಸ್ಪತ್ರೆ 1981, 10ನೇ ಕ್ರಾಸ್, ಆಶ್ರಯ ಆಸ್ಪತ್ರೆ ಹಿಂಭಾಗ ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ - 577004
ಸಂಪರ್ಕ ಸಂಖ್ಯೆ : 08192 - 252228 / 86186 42929
ಸೂಚನೆ : ■ ಈ ಶಿಬಿರದಲ್ಲಿ ವೈದ್ಯರ ತಪಾಸಣೆ ಉಚಿತ, ಔಷಧಿಗೆ ಮಾತ್ರ ಹಣ ಪಾವತಿಸುವುದು.
■ ಬರುವಾಗ ನಿಮ್ಮ ಹಳೆಯ ವೈದ್ಯಕೀಯ ತಪಾಸಣಾ ದಾಖಲೆಗಳನ್ನು ತನ್ನಿರಿ
■ ಇಲ್ಲಿ ಪ್ರತೀ ತಿಂಗಳ 7ನೇ ತಾರೀಖು ಶಿಬಿರ ನಡೆಯಲಿದೆ.

## ಎಸ್ಸೆಸ್ಸೆಗೆ ಸಿದ್ದಗಂಗಾ ಶ್ರೀಗಳಿಂದ ಗುರು ರಕ್ಷೆ



ಬೆಂಗಳೂರು, ಜ.5- ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಚೇತರಿಸಿಕೊಳ್ಳುತ್ತಿರುವ ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರೂ ಆದ ಹಿರಿಯ ಶಾಸಕ ಡಾ. ಶಾಮನೂರು ಶಿವಶಂಕರಪ್ಪ ಅವರನ್ನು ತುಮಕೂರಿನ ಶ್ರೀ ಸಿದ್ದಗಂಗಾ ಮಠದ ಪೀಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಇಂದು ಭೇಟಿ ಮಾಡಿ ಆರೋಗ್ಯ ವಿಚಾರಿಸಿ, ಶತಾಯುಷಿಗಳಾಗುವಂತೆ ಗುರುರಕ್ಷೆ ನೀಡಿ, ಆಶೀರ್ವದಿಸಿದರು.

# ಶರೀರ, ಬುದ್ಧಿ, ವಿವೇಕದ ಸಮತೋಲನದಿಂದ ಸಾರ್ಥಕ ಬದುಕು

## ಸೋಮೇಶ್ವರೋತ್ಸವ ಸಮಾರೋಪದಲ್ಲಿ ಕಣ್ವಕುಪ್ಪೆ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಶ್ರೀಗಳು

ದಾವಣಗೆರೆ, ಜ.5- ಮನುಷ್ಯನ ಬದುಕು ಸಾರ್ಥಕವಾಗಲು ಶರೀರ, ಬುದ್ಧಿ ಹಾಗೂ ವಿವೇಕವನ್ನು ಸಮತೋಲನದಲ್ಲಿ ಕಾಪಾಡಿಕೊಳ್ಳಬೇಕು ಎಂದು ಕಣ್ವಕುಪ್ಪೆ ಗವಿಮಠದ ಡಾ. ಶ್ರೀ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ನಗರದ ಸೋಮೇಶ್ವರ ವಿದ್ಯಾಲಯದ ಆವರಣದಲ್ಲಿ ಭಾನುವಾರ ಸಂಜೆ ಹಮ್ಮಿಕೊಂಡಿದ್ದ ಸೋಮೇಶ್ವರೋತ್ಸವ-2025ರ ಸಮಾರೋಪದಲ್ಲಿ ತಾಯಿ ಭಾರತಾಂಭೆ ಹಾಗೂ ಸರಸ್ವತಿ ದೇವಿಗೆ ಪುಷ್ಪಾರ್ಚನೆ ಮಾಡಿ ಶ್ರೀಗಳು ಆಶೀರ್ವಚನ ನೀಡಿದರು.

ಮನುಷ್ಯನಿಗೆ ಜ್ಞಾನ ಸಂಪತ್ತೇ ಬಹುದೊಡ್ಡದು. ಪಂಚ ಕರ್ಮೇಂದ್ರಿಯ, ಪಂಚ ಜ್ಞಾನೇಂದ್ರಿಯ ಹಾಗೂ ಪಂಚ ತನ್ಮಾತ್ರೆಗಳಿಗೆ ಮತಿಯನ್ನು ಕೊಡುವುದೇ ಜ್ಞಾನ. ಈ ನಿಟ್ಟಿನಲ್ಲಿ ಯಾವುದು ಶ್ರೇಷ್ಠ, ಯಾವುದು ಕನಿಷ್ಠ ಎಂಬುದನ್ನು ಜ್ಞಾನ ಶಕ್ತಿಯಿಂದ ನಾವು ಅರ್ಥಮಾಡಿಕೊಳ್ಳಬಹುದು ಎಂದು ಹೇಳಿದರು.

ಋಣ ಪಂಚಕಗಳಾದ ಮಾತೃ ಋಣ, ಪಿತೃ ಋಣ, ದೈವ ಋಣ, ಗುರು ಋಣ ಹಾಗೂ ಸ್ವಗ್ರಾಮದ ಋಣ ಯಾರೂ ಮರೆಯಬಾರದು ಎಂದ ಅವರು, ತಂದೆ-ತಾಯಿಯರ ಮಾತಿಗೆ ಬೆಲೆ ಕೊಟ್ಟು ನಡೆದರೆ ಅವರ ಬದುಕು ಸಾರ್ಥಕವಾಗಲಿದೆ ಎಂದು ಹೇಳಿದರು.



ಸನಾತನ ಧರ್ಮ, ಪರಂಪರೆ ಹಾಗೂ ದೇಶ ಸೇವೆಯ ಗುಣ ಹೊಂದಿದ ಸದ್ಗುಣಿಗಳ ಸಂಘ ಮಾಡುವುದರಿಂದ ಜೀವನದಲ್ಲಿ ಶ್ರೇಷ್ಠ ಮಾರ್ಗ ಲಭಿಸಲಿದೆ ಎಂದು ತಿಳಿಸಿದರು. ಜೀವನದಲ್ಲಿ ಯಾವುದೂ ಶಾಶ್ವತವಲ್ಲ. ಜೀವಿತಾವಧಿಯಲ್ಲಿ ಎಲ್ಲರಿಗೂ ಒಳಿತನ್ನು ಮಾಡುತ್ತಾ ಧರ್ಮಪರ ಕಾರ್ಯ ನಿರ್ವಹಿಸಬೇಕು ಎಂದು ಎಲ್ಲರಿಗೂ ಕಿವಿಮಾತು ಹೇಳಿದರು.

ಡಿಡಿಪಿಐ ಕೊಟ್ರೇಶ್ ಜಿ. ಮಾತನಾಡಿ, ಪಾಲಕರು ತಮ್ಮ ಮಕ್ಕಳ ಜೊತೆಗೆ ಹೆಚ್ಚಿನ ಸಮಯ ಕಳೆಯಬೇಕು. ಅವರ ವಿದ್ಯಾಭ್ಯಾಸದ ಬಗ್ಗೆ ದಿನನಿತ್ಯ ಪರಿಶೀಲಿಸುವ ಜತೆಗೆ ಅವರಲ್ಲಿ ಮೌಲ್ಯ, ಸಂಸ್ಕೃತಿ, ಸಂಸ್ಕಾರಗಳ ಹೆಚ್ಚಿಸಲು ಅರಿವು ಮೂಡಿಸಬೇಕು ಎಂದು ಹೇಳಿದರು.

ಪಾಲಕರು ತಮ್ಮ ಮಕ್ಕಳ ಚಲನವಲನಗಳ ಬಗ್ಗೆ ನಿಗಾವಹಿಸಬೇಕು. ಅವರು ತಪ್ಪು ದಾರಿಯಲ್ಲಿ ಹೋಗುತ್ತಿದ್ದರೆ ಸರಿದಾರಿಗೆ ತರುವಂತೆ ತಿದ್ದಿ ತೀಡುವ ಕಾರ್ಯ ಪಾಲಕರು ಹಾಗೂ ಶಿಕ್ಷಕರಿಂದ ಆಗಬೇಕು ಎಂದು ಹೇಳಿದರು.

ಜವಳಿ ಉದ್ಯಮಿ ಬಿ.ಸಿ. ಉಮಾಪತಿ ಮಾತನಾಡಿ, ಮಕ್ಕಳು ವಿದ್ಯಾವಂತರಾದರೆ ಅವರ ಮನೆತನ ಸೇರಿದಂತೆ ದೇಶವೂ ಅಭಿವೃದ್ಧಿಯಾಗಲಿದೆ. ಹಾಗಾಗಿ ಇದರ ಜತೆಗೆ ವಿದ್ಯಾರ್ಥಿಗಳು ಸಂಪ್ರದಾಯ, ಸಂಸ್ಕೃತಿ ಹಾಗೂ ಧಾರ್ಮಿಕ ಕಾರ್ಯಗಳ ಬಗೆಗೆ ಹೆಚ್ಚು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಪ್ರಸ್ತುತ ದಿನಮಾನಗಳಲ್ಲಿ ಪಾಲಕರು ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹೆಚ್ಚಿನ ಶ್ರಮ ಹಾಕುತ್ತಿದ್ದು, ವಿದ್ಯಾರ್ಥಿಗಳು ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಚಿತ್ರನಟ ರಮೇಶ್ ಅರವಿಂದ್ ಅವರು, ಹಿರಿಯ ಪತ್ರಕರ್ತ ರಮೇಶ್ ಜಹಗೀರದಾರ್, ದೇವಿಕಾ ಸುನೀಲ್, ಕೆ. ಸುಮತಿ ಮತ್ತು ಗೌರಮ್ಮ ಕಲಿವೀರಪ್ಪ ಅವರಿಗೆ 'ಸೋಮೇಶ್ವರ ಸಿರಿ' ಪ್ರಶಸ್ತಿ ನೀಡಿ ಗೌರವಿಸಿದರು. ಮಳಲಕೆರೆ ಗುರುಮೂರ್ತಿ ಅವರಿಗೆ 'ಸೋಮೇಶ್ವರ ಶಿಕ್ಷಣ ಸಿರಿ' ನೀಡಲಾಯಿತು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಕೆ.ಎಂ ಸುರೇಶ್, ಹೆಚ್. ಆರ್. ಅಶೋಕ್ ರೆಡ್ಡಿ, ಮಾಜಿ ಸೈನಿಕ ಸಿದ್ಧಯ್ಯ, ಮುಖ್ಯ ಶಿಕ್ಷಕಿ ಗಾಯತ್ರಿ, ಪಾಲಿಕೆ ಸದಸ್ಯ ಕೆ.ಎಂ. ವೀರೇಶ್, ಪಿ. ಎನ್. ಪರಮೇಶಪ್ಪ, ಜಯಶ್ರೀ ಹಾಗೂ ಇತರರು ಇದ್ದರು.

## ವಿದ್ಯಾರ್ಥಿಗಳಿಗೆ ಎರಡು ವಿಶೇಷ ವರ್ಗದ ವೀಸಾ

ನವದೆಹಲಿ ಜ. 5- ದೇಶದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಅಧ್ಯಯನ ಮಾಡಲು ಬಯಸುವ ವಿದೇಶಿ ವಿದ್ಯಾರ್ಥಿಗಳಿಗಾಗಿ ಕೇಂದ್ರ ಸರ್ಕಾರ ಎರಡು ವಿಶೇಷ ರೀತಿಯ ವೀಸಾಗಳನ್ನು ಪ್ರಕಟಿಸಿದೆ. ಇ- ಸ್ಟೂಡೆಂಟ್ ವೀಸಾ ಹಾಗೂ ಇ- ಸ್ಟೂಡೆಂಟ್ ಎಕ್ಸ್ ಎಂಬ ಎರಡು ರೀತಿಯ ವೀಸಾಗಳನ್ನು ನೀಡುವುದಾಗಿ ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ಸ್ಟೂಡೆಂಟ್ ಇನ್ ಇಂಡಿಯಾ ಪೋರ್ಟಲ್ ಬಳಸುವ ಮೂಲಕ ಈ ವೀಸಾಗಳನ್ನು ಪಡೆಯಬಹುದು. ಅನುಮತಿ ಪಡೆದಿರುವ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಈ ವೀಸಾಗಳನ್ನು ಪಡೆಯಬಹುದಾಗಿದೆ.

## ಅಣು ವಿಜ್ಞಾನಿ ಚಿದಂಬರಂ ನಿಧನ



ನವದೆ ಹಲಿ ಜ.5- ಹಿರಿಯ ವಿಜ್ಞಾನಿ ರಾಜ ಗೋಪಾಲ ಚಿದಂಬರಂ ಅವರು ನಿಧನರಾಗಿದ್ದಾರೆ. 88 ವರ್ಷದ ಚಿದಂಬರಂ 1975 ಹಾಗೂ 1998ರ ಅಣು ಪರೀಕ್ಷೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಚಿದಂಬರಂ ಅವರು ಅಣ್ವಸ್ತ್ರಗಳ ಯೋಜನೆಯಲ್ಲೂ ಭಾಗಿಯಾಗಿದ್ದರು. ಅವರು ಮುಂಬೈನ ಜೆಸ್ಲೋಕ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ ಎಂದು ಅಣು ಶಕ್ತಿ ಇಲಾಖೆ ತಿಳಿಸಿದೆ.

1936ರಲ್ಲಿ ಜನಿಸಿದ್ದ ಚಿದಂಬರಂ, ಚೆನ್ನೈನ ಪ್ರೆಸಿಡೆನ್ಸಿ ಕಾಲೇಜ್ ಹಾಗೂ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್‌ನಲ್ಲಿ ವ್ಯಾಸಂಗ ಮಾಡಿದ್ದರು. ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರಾಗಿ, ಬಾಬಾ ಅಣು ಸಂಶೋಧನಾ ಕೇಂದ್ರದ ನಿರ್ದೇಶಕರಾಗಿ ಹಾಗೂ ಅಣು ಶಕ್ತಿ ಇಲಾಖೆಯ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದರು. ಅವರು ಅಂತರರಾಷ್ಟ್ರೀಯ ಅಣು ವಿದ್ಯುತ್ ಸಂಸ್ಥೆಯ ಆಡಳಿತ ಮಂಡಳಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ಭಾರತ ಅಣು ಸಾಮರ್ಥ್ಯ ಪಡೆಯುವಲ್ಲಿ ಅವರು ಪ್ರಮುಖ ಪಾತ್ರ ನಿರ್ವಹಿಸಿದ್ದರು.

## ಹುಲಗೂರ, ದೇವಾಂಗ ಸಮಾಜದ ನಿರ್ದೇಶಕ



ರಾಣೇಬೆನ್ನೂರು, ಜ.5- ದೇವಾಂಗ ಸಮಾಜದ ಶಿಕ್ಷಣ ಸಂಸ್ಥೆಯಾದ ಶ್ರೀ ಬನಶಂಕರಿ ಗ್ರಾಮೀಣ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ 2024-29ನೇ ಸಾಲಿನ ಆಡಳಿತ ಸಮಿತಿಯ ನಿರ್ದೇಶಕರಾಗಿ ನಗರದ ಬನಶಂಕರಿ ಸೀಡ್ಸ್ ಕಂಪನಿ ಮಾಲೀಕ ಲಕ್ಷ್ಮೀಕಾಂತ ಎಸ್.ಹುಲಗೂರ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ.

# ದಾವಣಗೆರೆಯಲ್ಲಿ ವಿಶ್ವ ಕನ್ನಡ ಸಮ್ಮೇಳನ ಆಯೋಜನೆಗಾಗಿ ಮುಖ್ಯಮಂತ್ರಿಗೆ ಮನವಿ



ದಾವಣಗೆರೆ, ಜ.5- ಈ ಮೊದಲೇ ಘೋಷಣೆ ಮಾಡಿದಂತೆ ದಾವಣಗೆರೆಯಲ್ಲಿಯೇ ವಿಶ್ವ ಕನ್ನಡ ಸಮ್ಮೇಳನ ಆಯೋಜಿಸಲು ಕೂಡಲೇ ದಿನಾಂಕ ನಿಗದಿಪಡಿಸಬೇಕು ಹಾಗೂ ಮುಂಬರುವ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಭಾನುವಾರ ದಾವಣಗೆರೆಗೆ ಆಗಮಿಸಿದ್ದ ಮುಖ್ಯಮಂತ್ರಿ ಅವರನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಬಿ.ವಾಮದೇವಪ್ಪ ನೇತೃತ್ವದ ನಿಯೋಗ ಭೇಟಿ ಮಾಡಿ ಚರ್ಚೆ ನಡೆಸಿತು. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಜೊತೆಯಲ್ಲಿದ್ದರು.

ದಾವಣಗೆರೆಯಲ್ಲಿ ವಿಶ್ವ ಕನ್ನಡ ಸಮ್ಮೇಳನ ನಡೆಸಬೇಕು ಎಂಬ ತೀರ್ಮಾನವನ್ನು 2017ರಲ್ಲಿ ಸಚಿವ ಸಂಪುಟ ಕೈಗೊಂಡಿತ್ತು. ಮುಖ್ಯಮಂತ್ರಿ ಆಗಿದ್ದ ತಾವೇ 30 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದ್ದೀರಿ. 2023ರಲ್ಲಿ ಹಾವೇರಿ ಹಾಗೂ 2024 ರಲ್ಲಿ ಮಂಡ್ಯದಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳಲಾಗಿದೆ. ರಾಜ್ಯದ ಕ್ರಿಯಾಶೀಲ, ಸೃಜನಶೀಲ ಹಾಗೂ ಕನ್ನಡ ನಾಡು ನುಡಿಯನ್ನು ಅದಮ್ಯವಾಗಿ ಪ್ರೀತಿಸುವ ತಾವು ಕೂಡಲೇ ನಿರ್ಧಾರ ಕೈಗೊಳ್ಳಬೇಕು' ಎಂದು ಮನವಿ ಮಾಡಿದರು.

**ಮಾರ್ಚ್‌ನಲ್ಲಿ ಬಜೆಟ್ ಮಂಡಿಸಲಾಗುತ್ತದೆ. ಬಜೆಟ್‌ಗೂ ಮುನ್ನ ಪೂರ್ವಭಾವಿ ಸಭೆ ನಡೆಯಲಿದ್ದು, ಆಗ ವಿಶ್ವ ಕನ್ನಡ ಸಮ್ಮೇಳನದ ಅನುದಾನಕ್ಕೆ ಸಂಬಂಧಿಸಿದ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.**

## ಪುರಿ ದೇವಾಲಯದ ಮೇಲೆ ಹಾರಿದ ಡ್ರೋನ್: ಕಳವಳ




ಭುವನೇಶ್ವರ, ಜ. 5- ಒಡಿಶಾದ ಪುರಿಯಲ್ಲಿರುವ ಪ್ರಸಿದ್ಧ ಜಗನ್ನಾಥ ದೇವಾಲಯದ ಮೇಲೆ ಡ್ರೋನ್ ಒಂದನ್ನು ಹಾರಿಸಿರುವುದು ಕಂಡು ಬಂದಿದೆ. ಈ ಬಗ್ಗೆ ತನಿಖೆಗೆ ಆದೇಶಿಸಲಾಗಿದೆ.

ಬೆಳಗ್ಗೆ ನಾಲ್ಕು ಗಂಟೆ ಸಮಯದಲ್ಲಿ ದೇವಾಲಯದ ಸುತ್ತ ಡ್ರೋನ್ ಒಂದು ಸುಮಾರು ಅರ್ಧ ಗಂಟೆ ಹಾರಿದೆ. ಈ ಪ್ರದೇಶ ಹಾರಾಟ ನಿಷಿದ್ಧವಾಗಿರುವುದರಿಂದ ಡ್ರೋನ್ ಹಾರಾಟ ರಕ್ಷಣಾ ಕಳವಳಕ್ಕೆ ಕಾರಣವಾಗಿದೆ.

ಈ ಘಟನೆಯ ತನಿಖೆಗಾಗಿ ಹಲವು ತಂಡಗಳನ್ನು ರಚಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಕ್ಷಣಾ ವ್ಯವಸ್ಥೆ ಉಲ್ಲಂಘಿಸಿದ ವ್ಯಕ್ತಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದವರು ಹೇಳಿದ್ದಾರೆ. ಇಂತಹ ಘಟನೆಗಳ ಪುನರಾವರ್ತನೆ ತಪ್ಪಿಸಲು ದೇವಾಲಯ ಸಂಕೀರ್ಣ ಸುತ್ತ ನಾಲ್ಕು ವೀಕ್ಷಣಾ ಗೋಪುರಗಳನ್ನು ನಿರ್ಮಿಸಲಾಗುವುದು ಎಂದು ರಾಜ್ಯ ಕಾನೂನು ಸಚಿವ ಪೃಥ್ವಿರಾಜ್ ಹರಿಚಂದನ್ ತಿಳಿಸಿದ್ದಾರೆ. ದೇವಾಲಯದ ದೃಶ್ಯಗಳನ್ನು ಸೆರಿಹಿಡಿಯಲು ವ್ಲಾಗರ್ ಈ ಡ್ರೋನ್ ಹಾರಿಸಿರಬಹುದು ಎಂದು ಶಂಕಿಸಲಾಗಿದೆ.

## ನಾಳೆ ರಂಭಾಪುರಿ ಜಗದ್ಗುರುಗಳ ಜನ್ಮ ದಿನೋತ್ಸವ



ಬಾಳೆಹೊನ್ನೂರು, ಜ. 5 - ತೆಲಂಗಾಣ ರಾಜ್ಯದ ಯಾದಾದ್ರಿ ಭುವನಗಿರಿ ಜಿಲ್ಲೆ ಅಲೇರು ಮಂಡಲ ಕೊಲನುಪಾಕ ಶ್ರೀ ಚಂಡಿಕಾಂಬಾ ಸಮೇತ ಸ್ವಯಂಭೂ ಶ್ರೀ ಸೋಮೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಾಡಿದ್ದು ದಿನಾಂಕ 7 ರ ಮಂಗಳವಾರ ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ 69ನೇ ಜನ್ಮ ದಿನೋತ್ಸವ ಹಾಗೂ ವೀರಶೈವ ಸಂಸ್ಕೃತಿ ಸಂವರ್ಧನಾ ಸಮಾರಂಭ ನಡೆಯಲಿದೆ.

ಇಂದಿನಿಂದ ನಾಡಿದ್ದು ದಿನಾಂಕ 7ರವರೆಗೆ ಪ್ರತಿ ದಿನ ಪ್ರಾತ:ಕಾಲ ಶ್ರೀ ಜಗದ್ಗುರು ರೇಣುಕಾಚಾರ್ಯರು ಅವತರಿಸಿದ ಶ್ರೀ ಸ್ವಯಂಭೂ ಸೋಮೇಶ್ವರ ಮಹಾಲಿಂಗಕ್ಕೆ ಮಹಾರುದ್ರಾಭಿಷೇಕ, ವಿಶೇಷ ಪೂಜೆ, ಸಹಸ್ರ ಪುಷ್ಪಾರ್ಚನೆ ಹಾಗೂ ಶ್ರೀ ಚಂಡಿಕಾಂಬಾ ದೇವಿಗೆ ಕುಂಕುಮಾರ್ಚನೆ ಹಾಗೂ ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ಜರುಗುವುದು.


ssims SPARSH CENTRE FOR ACCIDENTS BONE & JOINT CARE

**ಸ್ಪರ್ಶ್ ಆಸ್ಪತ್ರೆ - ಬೆಂಗಳೂರು,**

ಇಲ್ಲಿನ ಪ್ರಮುಖ ಮೂಳೆ ಹಾಗೂ ಕೀಲು ಮರುಜೋಡಣಾ ಶಸ್ತ್ರಚಿಕಿತ್ಸಾ ತಜ್ಞರು

ಪ್ರತೀ ಹದಿನೈದು ದಿನಗಳಿಗೊಮ್ಮೆ

ನಿಮ್ಮ ದಾವಣಗೆರೆಗೆ ಭೇಟಿ ನೀಡುತ್ತಾರೆ

**ಡಾ. ರವಿಕುಮಾರ್ ಮುಕಾರ್ತಿಹಾಳ್**

D'Ortho, DNB (Ortho), Fellowship in Arthroplasty (Depuy, SPARSH India), Fellowship in Septic & Aseptic Revision Joint Replacement surgery (EndoKlinik, Germany)

ಮೂಳೆ ಮತ್ತು ಕೀಲು ಮರುಜೋಡಣಾ ಶಸ್ತ್ರಚಿಕಿತ್ಸಕರು

- ಕೀಲು ನೋವು
- ಕೀಲು ಮರುಜೋಡಣೆ
- ಮೊಣಕಾಲು ನೋವು
- ಹಿಪ್ ಮರುಜೋಡಣೆ
- ಭುಜದ ನೋವು
- ರಿವಿಷನ್ ಶಸ್ತ್ರಚಿಕಿತ್ಸೆ
- ಸ್ಪೋರ್ಟ್ಸ್ ಇಂಜುರೀಸ್
- ಡಿಫಾರ್ಮಿಟಿ ಸರಿಪಡಿಸುವಿಕೆ

ಇತರೇ ಮೂಳೆ ಮತ್ತು ಕೀಲು ಸಮಸ್ಯೆಗೆ ಸಂಪರ್ಕಿಸಿ

ದಿನಾಂಕ: ಗುರುವಾರ, 9ನೇ ಜನವರಿ, 2025 | ಸಮಯ: ಬೆಳಿಗ್ಗೆ 11 ರಿಂದ ಸಂಜೆ 4 ರವರೆಗೆ

ಹೊರ ರೋಗಿಗಳ ಕ್ಲಿನಿಕ್ ವಿಳಾಸ : ಎಸ್. ಎಸ್. ಸ್ಪೆಷಾಲಿಟಿ ಕ್ಲಿನಿಕ್, ಮೋದಿ ಕಾಂಪೌಂಡ್, ಎಂ.ಸಿ.ಸಿ. 'ಎ' ಬ್ಲಾಕ್, ಮೋತಿ ವೀರಪ್ಪ ಕಾಲೇಜು ಹತ್ತಿರ, ದಾವಣಗೆರೆ - 577 002

ನೋಂದಣಿಗಾಗಿ ಕರೆಮಾಡಿ: **96869 29090 / 99800 33277**

ಸ್ಪರ್ಶ್ ಆಸ್ಪತ್ರೆ ಎಲ್ಲಾ ಆರೋಗ್ಯ ವಿಮಾ (TPA) ಯೋಜನೆಯಡಿಯಲ್ಲಿ ಅಂಗೀಕೃತವಾಗಿದೆ


# ಮಲೆನಾಡಿಗರ ಧ್ವನಿ, ಸಾಹಿತಿ ನಾ. ಡಿಸೋಜಾ ಇನ್ನಿಲ್ಲ



ಸಾಗರ, ಜ. 5 - ನಾಡಿನ ಹಿರಿಯ ಸಾಹಿತಿ ಡಾ. ನಾ ಡಿಸೋಜ ಅವರು ವಯೋಸಹಜ ಅನಾರೋಗ್ಯದಿಂದ ಇಂದು ಭಾನುವಾರ ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರಿಗೆ 87 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿಯನ್ನು ಅಗಲಿದ್ದಾರೆ.

ನಾಳೆ ಸೋಮವಾರ ಸಂಜೆ ಸಾಗರದಲ್ಲಿ ಅವರ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇಡಲಾಗುವುದು. ನಾಡಿದ್ದು ಮಂಗಳವಾರ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿದೆ.

ಇವರು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾಗಿದ್ದರು. ಮಡಿಕೇರಿಯಲ್ಲಿ ನಡೆದ 80 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದರು.

1964ರಲ್ಲಿ ಡಿಸೋಜರ ಮೊದಲ ಕಾದಂಬರಿ 'ಬಂಜೆ ಬೆಂಕಿ' ಪ್ರಕಟಗೊಂಡಿತು. ನಂತರ ಮಂಜಿನ ಕಾನು, ಈ ನೆಲ ಈ ಜಲ, ಕೆಂಪು ತ್ರಿಕೋನ, ನೆಲೆ, ಗಾಂಧಿ ಬಂದರು, ದ್ವೀಪ, ಜೀವಕಳೆ ಹೀಗೆ 40ಕ್ಕೂ ಹೆಚ್ಚು ಕಾದಂಬರಿಗಳನ್ನು ಬರೆದಿದ್ದಾರೆ.

ನಾ. ಡಿಸೋಜ ಅವರು 75 ಕಾದಂಬರಿಗಳು, 6 ಚಾರಿತ್ರಿಕ ಕಾದಂಬರಿ, ಮಕ್ಕಳಿಗಾಗಿ 25 ಕಾದಂಬರಿ, 9 ಕಥಾ ಸಂಕಲನ, ಸಮಗ್ರ ಕಥೆಗಳ ಎರಡು ಸಂಪುಟಗಳು, ಸುಮಾರು 500 ಕಥೆಗಳು, ಹತ್ತಾರು ನಾಟಕಗಳು, ರೇಡಿಯೋ ನಾಟಕಗಳು, ಅನೇಕ ಪತ್ರಿಕಾ ಲೇಖನಗಳನ್ನು ಬರೆದಿದ್ದಾರೆ. ಇವರ 'ಮುಳುಗಡೆಯ ಊರಿಗೆ ಬಂದವರು' ಎಂಬ ಮಕ್ಕಳ ಕಾದಂಬರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿಯ 'ಬಾಲ ಸಾಹಿತ್ಯ ಪುರಸ್ಕಾರ' ಸಂದಿತ್ತು. 'ದ್ವೀಪ' ಮತ್ತು 'ಕಾಡಿನ ಬೆಂಕಿ' ಕಾದಂಬರಿಗಳು ಚಲನಚಿತ್ರಗಳಾಗಿ ರಾಷ್ಟ್ರೀಯ ಪ್ರಶಸ್ತಿಯನ್ನು ಗಳಿಸಿವೆ.

ನಾ.ಡಿಸೋಜ ಅವರಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಗುಲ್ವಾಡಿ ವೆಂಕಟರಾವ್ ಪ್ರಶಸ್ತಿ, ಅಖಿಲ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಸಂದೇಶ್ ಸಾಹಿತ್ಯ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಮಂಗಳೂರು ಸಂದೇಶ ಪ್ರಶಸ್ತಿ, ನವದೆಹಲಿ ಕಳಾ ಪ್ರಶಸ್ತಿ, ಪಂಪ ಪ್ರಶಸ್ತಿ ಸಹಿತ ಹಲವು ಪ್ರಶಸ್ತಿಗಳು ದೊರೆತಿವೆ.

**ಶೋಕ :** ಹಿರಿಯ ಸಾಹಿತಿ ಡಾ. ನಾ. ಡಿಸೋಜ ಅವರ ನಿಧನಕ್ಕೆ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಸಂತಾಪ ವ್ಯಕ್ತಪಡಿಸಿದ್ದಾರೆ.


**ಕುರ್ಕಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ**

**ಕುರ್ಕಿ, ದಾವಣಗೆರೆ ತಾಲ್ಲೂಕು**

**ಹೃದಯಪೂರ್ವಕ ಕೃತಜ್ಞತೆಗಳು**

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಕುರ್ಕಿ ಇದರ ಐದು ವರ್ಷಗಳ ಅವಧಿಗೆ ದಿನಾಂಕ 27-12-2024ರಂದು ನಡೆದ ಚುನಾವಣೆಯಲ್ಲಿ ನಮ್ಮನ್ನು ನಿರ್ದೇಶಕರುಗಳನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿದ ಕುರ್ಕಿ, ಕರಿಲಕ್ಕೇನಹಳ್ಳಿ, ಮಲ್ಲಶೆಟ್ಟಿಹಳ್ಳಿ, ಚಟ್ಟೋಬನಹಳ್ಳಿ, ಬುಳ್ಳಾಪುರ ಗ್ರಾಮಗಳ ಗ್ರಾಮಸ್ಥರುಗಳಿಗೂ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಇದರ ಸರ್ವಸದಸ್ಯರುಗಳಿಗೂ, ಗ್ರಾಮಗಳ ಎಲ್ಲಾ ಹಿರಿಯರಿಗೂ, ಮುಖಂಡರುಗಳಿಗೂ ಹಾಗೂ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ ಶ್ರೀ ಸತೀಶನಾಯ್ಕ ಅವರಿಗೂ ಹಾಗೂ ಸಿಬ್ಬಂದಿ ವರ್ಗದವರಿಗೂ ಪ್ರತ್ಯಕ್ಷ-ಪರೋಕ್ಷವಾಗಿ ಸಹಕರಿಸಿದವರೆಲ್ಲರಿಗೂ ಮತ್ತು ಎಲ್ಲಾ ಸಹಕಾರಿ ಬಂಧುಗಳಿಗೂ ಹೃದಯಪೂರ್ವಕ ಕೃತಜ್ಞತೆಗಳು ಹಾಗೂ ಹೊಸ ವರ್ಷ ಮತ್ತು ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು.



ಬಿ.ಜಿ. ವೀರೇಶ್ ಅಧ್ಯಕ್ಷರು | ಶ್ರೀಮತಿ ನಾಗರತ್ನಮ್ಮ ಕೆ.ಜಿ. ಉಪಾಧ್ಯಕ್ಷರು | ಕೆ.ಎಸ್.ಷಣ್ಮುಖಪ್ಪ ನಿರ್ದೇಶಕರು | ಕರಿಬಸಪ್ಪ ನಿರ್ದೇಶಕರು | ಕೆ.ಎಸ್. ಶಿವಕುಮಾರ್ ನಿರ್ದೇಶಕರು | ಕೆ.ಎಂ. ಚನ್ನಬಸಯ್ಯ ನಿರ್ದೇಶಕರು



ಮಹಾಲಿಂಗ ಪ್ರಭು ನಿರ್ದೇಶಕರು | ಹನುಮಂತಪ್ಪ ನಿರ್ದೇಶಕರು | ವಿಶ್ವಮೂರ್ತಿ ನಿರ್ದೇಶಕರು | ಬೊಮ್ಮಕ್ಕ ನಿರ್ದೇಶಕರು | ಕೆ.ಎಸ್. ಲೋಕೇಶ್ ನಿರ್ದೇಶಕರು | ಕೆ.ಆರ್. ಮಂಜಪ್ಪ ನಿರ್ದೇಶಕರು



**ಬಾಡ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ**

**ಬಾಡ, ದಾವಣಗೆರೆ ತಾಲ್ಲೂಕು**

**ಹೃದಯಪೂರ್ವಕ ಕೃತಜ್ಞತೆಗಳು**

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಬಾಡ ಇದರ ಐದು ವರ್ಷಗಳ ಅವಧಿಗೆ ದಿನಾಂಕ 29-12-2024ರಂದು ನಡೆದ ಚುನಾವಣೆಯಲ್ಲಿ ನಮ್ಮನ್ನು ನಿರ್ದೇಶಕರುಗಳನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿದ ಬಾಡ, ಅಣಬೇರು, ಶಂಕರನಹಳ್ಳಿ, ವಿಠಲಾಪುರ, ಒಂಟಿಹಾಳು ಗ್ರಾಮಗಳ ಗ್ರಾಮಸ್ಥರುಗಳಿಗೂ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಇದರ ಸರ್ವಸದಸ್ಯರುಗಳಿಗೂ, ಗ್ರಾಮಗಳ ಎಲ್ಲಾ ಹಿರಿಯರಿಗೂ, ಮುಖಂಡರುಗಳಿಗೂ ಹಾಗೂ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ ಶ್ರೀ ಹೆಚ್. ರಮೇಶ್ ಅವರಿಗೂ, ಪ್ರತ್ಯಕ್ಷ-ಪರೋಕ್ಷವಾಗಿ ಸಹಕರಿಸಿದವರೆಲ್ಲರಿಗೂ ಮತ್ತು ಎಲ್ಲಾ ಸಹಕಾರಿ ಬಂಧುಗಳಿಗೂ ಹೃದಯಪೂರ್ವಕ ಕೃತಜ್ಞತೆಗಳು ಹಾಗೂ ಹೊಸ ವರ್ಷ ಮತ್ತು ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು.



ಡಿ. ಪ್ರಕಾಶ್ ಅಧ್ಯಕ್ಷರು | ಚಂದ್ರಪ್ಪ ಉಪಾಧ್ಯಕ್ಷರು | ಜಿ.ಆರ್. ರುದ್ರಪ್ಪ ನಿರ್ದೇಶಕರು | ಎಂ.ಡಿ. ಸುರೇಶ್ ನಿರ್ದೇಶಕರು | ಹೆಚ್. ನಾಗರಾಜಪ್ಪ ನಿರ್ದೇಶಕರು | ಎನ್. ಗೋವಿಂದಪ್ಪ ನಿರ್ದೇಶಕರು



ದೇವೇಂದ್ರಪ್ಪ ನಿರ್ದೇಶಕರು | ದೇವರಾಜ ಎನ್.ಬಿ. ನಿರ್ದೇಶಕರು | ಡಿ.ಸಿ. ಪಾಟೀಲ್ ನಿರ್ದೇಶಕರು | ಎ.ಕೆ. ಮಹೇಶ್ ನಿರ್ದೇಶಕರು | ಕೆ. ಅಕ್ಕಮಹಾದೇವಿ ನಿರ್ದೇಶಕರು | ಎಂ.ಆರ್. ಬಿಂದು ನಿರ್ದೇಶಕರು



ಕೆ.ಹೆಚ್. ರುದ್ರಪ್ಪ ಸಿ.ಇ.ಓ. | ಡಿ.ಪಿ. ರಾಕೇಶ್ ಕಂಪ್ಯೂಟರ್ ಆಪರೇಟರ್ | ಸಿ. ಸಂತೋಷ್ ಗುಮಾಸ್ತರು | ಎಂ. ಸುಮ ಸಹಾಯಕರು


KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas